ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೬೬

## ಪಟ್ಟಿ – ೦೫

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ಮೂರನೇ ಅಧಿವೇಶನ

ಸೋಮವಾರ, ದಿನಾಂಕ : ೨೨ನೇ ಜುಲೈ, ೨೦೨೪

---

## ಸಮೂಹ – I

೧. ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು

೨. ಇಂಧನ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

೫. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

೭. ಉನ್ನತ ಶಿಕ್ಷಣ ಸಚಿವರು

---

## ಅನುದಾನಿತ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೮೯ (೭೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಾವಣಗೆರೆ, ಚಿತ್ರದುರ್ಗ ಮತ್ತು ರಾಣಿಬೆನ್ನೂರು ಜಿಲ್ಲೆಗಳಲ್ಲಿನ ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ, ರಾಜೀನಾಮೆಯಿಂದಾಗಿ ಇಲ್ಲಿಯವರೆಗೂ ಖಾಲಿಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಸದರಿ ಅವಧಿಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಹಾಗಿದ್ದಲ್ಲಿ, ಸದರಿ ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿಮಾಡಲು ಅನುಮತಿ ನೀಡಲಾಗುವುದು ;

(ಈ) ಸದರಿ ಅವಧಿಯಲ್ಲಿ ಖಾಲಿಯಿರುವ ಹುದ್ದೆಗಳಿಗೆ ಅನುಮತಿ ನೀಡದೆ, ಕೇವಲ ಹುದ್ದೆಗಳಿಗೆ ಅನುಮೋದನೆ ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ?

## ರಾಜ್ಯದಲ್ಲಿರುವ ಡಯಾಲಿಸಿಸ್ ಕೇಂದ್ರಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೯೦ (೭೧೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಪರವಾನಗಿ ಪಡೆದಿರುವ ಖಾಸಗಿ ಡಯಾಲಿಸಿಸ್ ಕೇಂದ್ರಗಳೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಇತ್ತೀಚೆಗೆ ಡಯಾಲಿಸಿಸ್‌ಗೆ ಒಳಗಾಗುವವರ ಸಂಖ್ಯೆ ಹೆಚ್ಚಾಗುತ್ತಿದ್ದು, ಹೊಸದಾಗಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಇ) ಹೌದಾದಲ್ಲಿ, ಎಲ್ಲೆಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲು ಸರ್ಕಾರ ಮುಂದಾಗಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಇದೇ ಮಾದರಿಯಲ್ಲಿ ಹೃದಯಕ್ಕೆ ಸಂಬಂಧಿಸಿದ ಕೇಂದ್ರಗಳನ್ನು ತೆರೆಯುವ ಆಲೋಚನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಅಗತ್ಯ ಕ್ರಮಗಳೇನು ;

(ಉ) ರಾಜ್ಯದಲ್ಲಿರುವ ಒಟ್ಟು ಜನೌಷಧಿ ಕೇಂದ್ರಗಳೆಷ್ಟು ; ಹೊಸದಾಗಿ ಜನೌಷಧಿ ಕೇಂದ್ರಗಳನ್ನು ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ ?

## ಪ್ರಾಥಮಿಕ ಆರೋಗ್ಯ ಕೇಂದ್ರದ ಅವ್ಯವಸ್ಥೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೯೧ (೭೧೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮೂಲ ಸೌಕರ್ಯಗಳಿಲ್ಲದೆ ರೋಗಿಗಳು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಆರೋಗ್ಯ ಕೇಂದ್ರದ ವ್ಯವಸ್ಥೆ, ಸೌಲಭ್ಯ, ವೈದ್ಯರು ಹಾಗೂ ದಾದಿಯವರ ಬಗ್ಗೆ ಸಂಪೂರ್ಣ ವಿವರ ನೀಡುವುದು ;

(ಇ) ಸದರಿ ಜಿಲ್ಲೆಯ ಆರೋಗ್ಯ ಕೇಂದ್ರಗಳಲ್ಲಿ ಅಗತ್ಯವಿರುವ ಡಾಕ್ಟರ್, ನರ್ಸ್, ಇತರೇ ಸಿಬ್ಬಂದಿಗಳ ಕೊರತೆ ನೀಗಿಸಲು ತಕ್ಷಣ ಯಾವ ಕ್ರಮ ಕೈಗೊಳ್ಳಲಾಗುವುದು ; (ವಿವರ ನೀಡುವುದು)

(ಈ) ಸಮರ್ಪಕವಾಗಿ ಕೆಲಸ ಮಾಡದ ಡಯಾಲಿಸಿಸ್, ಎಕ್ಸರೇ, ಕೆಟ್ಟ ಯಂತ್ರಗಳು ಹಾಗೂ ಇತ್ಯಾದಿ ಉಪಕರಣ ಸೌಲಭ್ಯಗಳನ್ನು ಕೂಡಲೇ ಸರಿಪಡಿಸಿ, ಸಾರ್ವಜನಿಕರಿಗೆ ಉತ್ತಮ ಗುಣಮಟ್ಟದ ಸೇವೆಯನ್ನು ಕೊಡುವಲ್ಲಿ ಸರ್ಕಾರ ಕ್ರಮ ವಹಿಸುವುದೇ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳಲ್ಲಿರುವ ಹುದ್ದೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೯೨ (೭೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಶಾಲೆ, ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಶಾಲಾ ಕಾಲೇಜುಗಳಿಗೆ ಅವಶ್ಯವಿರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಅವಶ್ಯವಿರುವಂತಹ ಶಿಕ್ಷಕರ ಹುದ್ದೆಗಳಲ್ಲಿ ಈಗಾಗಲೆ ಭರ್ತಿ ಮಾಡಿರುವ ಹಾಗೂ ಭರ್ತಿ ಮಾಡಬೇಕಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ೨೦೨೩–೨೪ನೇ ಸಾಲಿನಲ್ಲಿ ೧೫ ಸಾವಿರ ಶಿಕ್ಷಕರನ್ನು ಭರ್ತಿ ಮಾಡುವುದಾಗಿ ತಿಳಿಸಿದ್ದು, ಸದರಿ ಪ್ರಕ್ರಿಯೆ ಯಾವ ಹಂತದಲ್ಲಿದೆ ?

## ರಾಜ್ಯದಲ್ಲಿರುವ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೯೩ (೭೧೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರಸ್ತುತ ಕಾರ್ಡ್‌ಗಳ ವಿತರಣೆ ಕಾರ್ಯಕ್ರಮವನ್ನು ನಿಲ್ಲಿಸಿರುವುದರಿಂದ ರಾಜ್ಯದ ಬಡ ಜನರು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ ;

(ಇ) ಸರ್ಕಾರವು ಯಾವ ಕಾಲಮಿತಿಯೊಳಗೆ ಕಾರ್ಡ್‌ಗಳ ವಿತರಣೆ ಕಾರ್ಯವನ್ನು ಮರು ಪ್ರಾರಂಭ ಮಾಡಲಾಗುವುದು ;

(ಈ) ಪ್ರಸ್ತುತ ೨೦೨೪-೨೫ನೇ ಸಾಲಿನಲ್ಲಿ ಸರ್ಕಾರ ಎಷ್ಟು ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳನ್ನು ವಿತರಿಸುವ ಗುರಿಯನ್ನು ಹೊಂದಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಅನಧಿಕೃತ ಶಾಲೆಗಳ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೪ (೬೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿಕ್ಷಣ ಇಲಾಖೆಯು ಅಧಿಕೃತ ಶಾಲೆಗಳ ಪಟ್ಟಿಯನ್ನು ಪ್ರಕಟಿಸಿರುವುದಾಗಿ ವರದಿಯಾಗಿರುವುದು ಸರಿಯಾದ ಕ್ರಮವಾಗಿದ್ದು, ಆದರೆ ಬೆಂಗಳೂರು ಮಹಾನಗರದಲ್ಲಿನ ಅನಧಿಕೃತ ಶಾಲೆಗಳ

ಸಂಖ್ಯೆ ಎಷ್ಟು ; (ಜಿಲ್ಲಾವಾರು ಶಿವಮೊಗ್ಗ ಬೆಂಗಳೂರು ಒಳಗೊಂಡಂತೆ ಹೆಸರು ವಿಳಾಸ ಒದಗಿಸುವುದು)

(ಆ) ಈ ಅನಧಿಕೃತ ಶಾಲೆಗಳನ್ನು ವಿವರಗಳನ್ನು (ಪ್ರದೇಶವಾರು) ಶಿಕ್ಷಣ ಇಲಾಖೆಯು ಸಾರ್ವಜನಿಕವಾಗಿ ಇದುವರೆವಿಗೂ ಪ್ರಕಟಣೆ ಮಾಡಿರುವುದಿಲ್ಲ ಹಾಗೂ ಪತ್ರಿಕೆಗಳು ವಾರ್ತಾ ವಾಹಿನಿಗಳ ಮೂಲಕ ಜನರಿಗೆ ತಿಳಿಯ ಪಡಿಸಿರುವುದಿಲ್ಲದಿರುವುದಕ್ಕೆ ಕಾರಣಗಳೇನು ;

(ಇ) ಶಿಕ್ಷಣ ಇಲಾಖೆ ಈ ಅನಧಿಕೃತ ಶಾಲೆಗಳನ್ನು ಗುರುತಿಸುವಲ್ಲಿ ಯಾವ ಕಾರಣಗಳಿಂದಾಗಿ ಈವರೆವಿಗೂ ವಿಫಲವಾಗಿದೆ ;

(ಈ) ಯಾವ ಕಾಲಮಿತಿಯೊಳಗೆ ಈ ಅನಧಿಕೃತ ಶಾಲೆಗಳನ್ನು ಇಲಾಖೆಯಿಂದ ಗುರುತಿಸಿ ಅಂತಹವುಗಳ ವಿರುದ್ಧ ಕಾನೂನು ರೀತ್ಯಾ ಇಲಾಖೆಯಿಂದಲೇ ಪ್ರಕರಣ ದಾಖಲಿಸಲಾಗುವುದೇ ?

## ರಾಜ್ಯದ ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಂದ ವಿದ್ಯುತ್ ಬಿಲ್ ಬಾಕಿ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೫ (೬೮೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಂದ ಬಾಕಿ ಇರುವ ಒಟ್ಟು ವಿದ್ಯುತ್ ಬಿಲ್‌ನ ಮೊತ್ತ ವೆಷ್ಟು ;

(ಆ) ಕಾಲ ಕಾಲಕ್ಕೆ ಬಾಕಿ ಬಿಲ್ಲನ್ನು ಪಾವತಿಸಲು ಸಾಧ್ಯವಾಗುತ್ತಿಲ್ಲದಿರುವುದಕ್ಕೆ ಕಾರಣಗಳೇನು ;

(ಇ) ವಿದ್ಯುತ್ ಸರಬರಾಜು ಕಂಪನಿಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆಯೇ; ಯಾವ ಎಸ್ಕಾಂಗಳು ನಷ್ಟದಲ್ಲಿವೆ ; (ಕಳೆದ ೫ ವರ್ಷಗಳ ಮಾಹಿತಿ ಒದಗಿಸುವುದು)

(ಈ) ಹಣಕಾಸು ಸಮಸ್ಯೆಯಿಂದ ವಿದ್ಯುತ್ ಸರಬರಾಜುದಾರರಿಗೆ ತಡವಾಗಿ ಹಣ ಸರ್ ಚಾರ್ಜ್ ಕೊಡಲಾಗುತ್ತಿದೆಯೇ ಇಲ್ಲವಾದಲ್ಲಿ ಯಾವ ಕಾರಣಕ್ಕೆ ತಡವಾಗುತ್ತಿದೆ ; ಕಳೆದ ಒಂದು ವರ್ಷದಲ್ಲಿ ಎಷ್ಟು ಲೇಟ್ ಸರ್ ಚಾರ್ಜ್ ಪಾವತಿಸಲಾಗಿದೆಯೇ ?

## ಬಿ.ಪಿ.ಎಲ್ ಪಡಿತರ ಕಾರ್ಡ್ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೬ (೬೮೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಸರ್ಕಾರ ರಚನೆ ಆದ ಮೇಲೆ ಎಷ್ಟು ಬಿ.ಪಿ.ಎಲ್ ಪಡಿತರ ಕಾರ್ಡ್‌ಗಳನ್ನು ನೀಡಲಾಗಿದೆ ;

(ಆ) ಸಾರ್ವಜನಿಕರಿಂದ ಹೊಸಕಾರ್ಡ್‌ಗಳಿಗೆ ಬೇಡಿಕೆ ಕೇಳಿ ಬರುತ್ತಿದ್ದು, ಹೊಸ ಕಾರ್ಡ್ ನೀಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಹೊಸ ಕಾರ್ಡ್ ವಿತರಿಸಲು ಸರ್ಕಾರದಲ್ಲಿ ಮಿತಿಯುನ್ನು ಅಳವಡಿಲಾಗಿದೆಯೇ ; ಹಾಗಿದ್ದಲ್ಲಿ, ಜನಸಂಖ್ಯೆಗೆ ಅನುಗುಣವಾಗಿ ಹೊಸ ಕಾರ್ಡ್ ವಿತರಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಅರ್ಹರವಲ್ಲದ ಜನರಿಗೆ ಬಿ.ಪಿ.ಎಲ್ ಕಾರ್ಡ್ ನೀಡಿದ್ದು ಇದರಿಂದ ಅಂತಹ ಬಡವರಿಗೆ ಬಿ.ಪಿ.ಎಲ್ ಕಾರ್ಡ್ ಸೌಲಭ್ಯ ವಂಚಿತರಾಗಿದ್ದು ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೆಂಗಳೂರು ವೈದ್ಯಕೀಯ ಮಹಾವಿದ್ಯಾನಿಲಯ ಮತ್ತು ಸಂಶೋಧನೆ ಸಂಸ್ಥೆ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೭ (೬೮೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ವೈದ್ಯಕೀಯ ಮಹಾವಿದ್ಯಾನಿಲಯ ಮತ್ತು ಸಂಶೋಧನಾ ಸಂಸ್ಥೆಯ ಅಡಿಯಲ್ಲಿ ವಿಕ್ಟೋರಿಯ ಆಸ್ಪತ್ರೆ, ವಾಣಿ ವಿಲಾಸ, ಮಿಂಟೋ ಸೂಪರ್ ಸ್ಪೆಷಾಲಿಟಿ, ಟ್ರಾಮಾ ಕೇಂದ್ರಗಳು ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯ, ಸರ್ಕಾರಿ ಶುಶ್ರೂಷಾ ಶಾಲೆಗಳು ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಆಸ್ಪತ್ರೆಗಳಿಗೆ ಅಕ್ಕಪಕ್ಕದ ರಾಜ್ಯಗಳು ಹಾಗೂ ಇತರೆ ಭಾಗಗಳಿಂದಲೂ ಅನಾರೊಗ್ಯದಿಂದ ಬಳಲುತ್ತಿರುವ ರೋಗಿಗಳು ಭೇಟಿ ನೀಡಿ ಸೇವೆ ಪಡೆಯುತ್ತಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ೨೦೨೩-೨೪ನೇ ಆರ್ಥಿಕ ವರ್ಷದಲ್ಲಿ ಬೆಂಗಳೂರು ವೈದ್ಯಕೀಯ ಮಹಾವಿದ್ಯಾನಿಲಯ ಮತ್ತು ಸಂಶೋಧನಾ ಸಂಸ್ಥೆಗೆ ಬಿಡುಗಡೆ ಮಾಡಬೇಕಾದ ಅನುದಾನದಲ್ಲಿ ಕಡಿತಗೊಳಿಸಲು ಕಾರಣಗಳೇನು ?

## ಮಾನವನಿಗೆ ನೀಡುವ ಔಷಧಿ ಬದಲು ಪಶುಗಳಿಗೆ ನೀಡುವ ಔಷಧಿ ಸರಬರಾಜಿನ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೮ (೬೮೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೆ.ಎಸ್.ಎಂಎಸ್ಸಿ.ಎಲ್ ನಿಗಮದ ಅಧಿಕಾರಿಗಳು ಪ್ರಾಣಿಗಳಿಗೆ ಬಳಸುವ ರಿಂಗರ್ ಲ್ಯಾಕ್ಟೇಟ್ ಗ್ಲೋಕೋಸ್ ಔಷಧಿ ಖರೀದಿಸಿರುವುದು ನಿಜವೇ ; ಹಾಗಿದ್ದಲ್ಲಿ, ಅದರ ಮೌಲ್ಯವೆಷ್ಟು; ವಿವರ ನೀಡುವುದು ; (ಕಳೆದ ಆರ್ಥಿಕ ಸಾಲಿನ)

(ಆ) ಸದರಿ ಔಷಧಿಗಳನ್ನು ಆಸ್ಪತ್ರೆಗಳಿಗೆ ಸರಬರಾಜು ಮಾಡಿ ಕಳಪೆ ಗ್ಲೋಕೋಸನ್ನು ಗರ್ಭಿಣಿಯರಿಗೆ ನೀಡಿ ಅದರಿಂದ ಗರ್ಭಿಣಿಯರು ಮೃತಪಟ್ಟಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ ; ಮೃತಪಟ್ಟವರ ಸಂಖ್ಯೆ ಎಷ್ಟು ;

(ಇ) ಔಷಧಿ ನಿಯಂತ್ರಣ ಇಲಾಖೆ ನಡೆಸಿದ್ದ ಪ್ರಯೋಗಾಲಯದಲ್ಲಿ ಸದರಿ ಔಷಧಿ ಕಳಪೆ ಎಂಬುದು ಸಾಬೀತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮದ ವಿವರ ನೀಡುವುದು ;

(ಈ) ಮಾನವನಿಗೆ ನೀಡುವ ಔಷಧಿ ಬದಲು ಪಶುಗಳಿಗೆ ಬಳಸುವ ಔಷಧಿ ಸರಬರಾಜು ಮಾಡಿದ್ದು, ಅಂತಹ ಬೇಜವಾಬ್ದಾರಿ ವಹಿಸಿದಂತಹ ರೋಗಿಗಳ ಜೀವನದಲ್ಲಿ ಚೆಲ್ಲಾಟವಾಡಿ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು ?

## ಶಾಲಾ ಶೌಚಾಲಯಗಳ ಸ್ವಚ್ಛತೆ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೪೯ (೭೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಹುಪಾಲು ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳಿಲ್ಲದ ಕಾರಣ ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆ ನಿವಾರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಆ) ಸಾಕಷ್ಟು ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರು ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಮಸ್ಯೆ ನಿವಾರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಇ) ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಕೊಠಡಿಗಳು ಹಾಳಾಗಿದ್ದು, ಹೊಸ ಕಟ್ಟಡಗಳು ಇಲ್ಲದೆ ದುರಸ್ಥಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಈ) ಇತ್ತೀಚಿನ ದಿನಗಳಲ್ಲಿ ಶಾಲಾ ಶೌಚಾಲಯಗಳನ್ನು ವಿದ್ಯಾರ್ಥಿಗಳಿಂದಲೇ ಸ್ವಚ್ಛಗೊಳಿಸಲಾಗುತ್ತಿರುವ ಪ್ರಕರಣಗಳು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಶಾಲಾ ಆವರಣ, ಕೊಠಡಿ ಹಾಗೂ ಶೌಚಾಲಯಗಳನ್ನು ಸ್ವಚ್ಛಗೊಳಿಸಲು ಸರ್ಕಾರ ರೂಪಿಸಿರುವ ನಿಯಮಗಳೇನು ; ಅವುಗಳನ್ನು ಯಾರಿಂದ ಸ್ವಚ್ಛಗೊಳಿಸಬೇಕೆಂದು ಶಾಲಾ ಮುಖ್ಯಸ್ಥರಿಗೆ ಸೂಚಿಸಲಾಗಿದೆ ; ಅವರುಗಳಿಗೆ ನೀಡುವ ಮಾಸಿಕ ವೇತನ ಎಷ್ಟು ? (ವಿವರ ನೀಡುವುದು)

## ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಗೆ ನೇರ ನೇಮಕಾತಿ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೦೦ (೫೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಗೆ ನೇರ ನೇಮಕಾತಿ ಹೊಂದಿದ ನೌಕರರಿಗೆ ವೃಂದ ಮತ್ತು ನೇಮಕಾತಿ ನಿಯಮಗಳಿವೆಯೇ ; (ವಿವರ ನೀಡುವುದು)

(ಆ) ವೃಂದ ಮತ್ತು ನೇಮಕಾತಿ ನಿಯಮಗಳಿಲ್ಲದೆ ನೇಮಕಾತಿ ಮತ್ತು ಬಡ್ತಿ ನೀಡಲು ನಿಯುಮಗಳಲ್ಲಿ ಅವಕಾಶಗಳಿವೆಂಯೇ ; ಅವಕಾಶಗಳಿದ್ದಲ್ಲಿ, ಆದೇಶದ ಪ್ರತಿ ನೀಡುವುದು ;

(ಇ) ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯಲ್ಲಿ ನೀಡಲಾಗುತ್ತಿರುವ ವೈದ್ಯಕೀಯ ಧನಸಹಾಯದ ಗುಂಪುಗಳಾವುವು/ವರ್ಗಗಳಾವುವು ; (ವಿವರ ನೀಡುವುದು)

(ಈ) ಯಾವ ಯಾವ ವರ್ಗಗಳಲ್ಲಿ ಗರಿಷ್ಟ ಧನಸಹಾಯ ನೀಡಲಾಗುತ್ತಿದೆ ;

(ಉ) ಒಮ್ಮೆ ಗರಿಷ್ಠ ಧನಸಹಾಯ ಪಡೆದು ಮತ್ತೆ ಧನಸಹಾಯ ಪಡೆಯಲು ಅವಕಾಶಗಳಿವೆಯೇ ? (ಈ ಕುರಿತು ಸರ್ಕಾರದ ಪ್ರತಿ ನೀಡುವುದು)

## ರೈತರು ಮತ್ತು ಅರಣ್ಯ ಇಲಾಖೆಯ ನಡುವಿನ ಸಂಘರ್ಷದ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೦೧ (೭೦೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇತ್ತೀಚಿನ ದಿನಗಳಲ್ಲಿ ರೈತರು ಮತ್ತು ಅರಣ್ಯ ಇಲಾಖೆಯ ನಡುವೆ ಸಂಘರ್ಷ ಹೆಚ್ಚಾಗಿದ್ದು, ರೈತರ ಜಮೀನಿನ ಮತ್ತು ಅರಣ್ಯ ಇಲಾಖೆಯ ಗಡಿ ಗುರುತಿಸಿರುವ ವಿವಾದಗಳನ್ನು ಪರಿಹರಿಸಲು ವಿಳಂಬ ನೀತಿ ಅನುಸರಿಸಲು ಕಾರಣಗಳೇನು ;

(ಆ) ಅರಣ್ಯ ಇಲಾಖೆಯ ಜಂಟಿ ಸರ್ವೆಗೆ ಸಿಬ್ಬಂದಿ ಕೊರತೆ ಇದೆಯೇ ; (ವಿವರ ನೀಡುವುದು)

(ಇ) ಜಂಟಿ ಸರ್ವೆ ಪ್ರಕರಣಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೦೨ (೭೦೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ವಿದ್ಯುತ್ ಬೇಡಿಕೆ ಪ್ರಮಾಣವೆಷ್ಟು ; ಪ್ರಸ್ತುತ ಪೂರೈಸುತ್ತಿರುವ ವಿದ್ಯುತ್ ಪ್ರಮಾಣವೆಷ್ಟು ; (ವಿಭಾಗವಾರು ವಿವರ ನೀಡುವುದು)

(ಆ) ಕಿರು ಜಲವಿದ್ಯುತ್ ಯೋಜನೆಗಳು ಸೇರಿದಂತೆ ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆಯಲ್ಲಿನ ವಿವಿಧ ಮೂಲಗಳಾವುವು ; ವರ್ಷವಾರು ವಿದ್ಯುತ್ ಉತ್ಪಾದನೆಯ ಪ್ರಮಾಣದ ಘಟಕವಾರು ಮಾಹಿತಿಯೊಂದಿಗೆ ವಿವರ ನೀಡುವುದು ;

(ಇ) ರಾಜ್ಯದಲ್ಲಿ ಜಲವಿದ್ಯುತ್, ಪವನ ವಿದ್ಯುತ್ ಮತ್ತಿತರ ವಿದ್ಯುತ್ ಉತ್ಪಾದಕ ಯೋಜನೆಗಳಿಗೆ ಹೆಚ್ಚಿನ ಉತ್ತೇಜನ ನೀಡಲು ಸರ್ಕಾರ ಯೋಜನಾವಾರು ಕೈಗೊಂಡಿರುವ ಕ್ರಮಗಳು ಯಾವುವು ; ಜಲವಿದ್ಯುತ್ ಯೋಜನೆಗಳ ನಿರ್ವಹಣೆಗೆ ಸರ್ಕಾರ ಬಿಡುಗಡೆ ಮಾಡಿದ ಮೊತ್ತ ಹಾಗೂ ಖರ್ಚು ಮಾಡಿದ ಮೊತ್ತವೆಷ್ಟು ? (ವಿವರ ನೀಡುವುದು)

## ಶಿವಮೊಗ್ಗ ಜಿಲ್ಲಾ ಆಸ್ಪತ್ರೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೦೩ (೭೦೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿವಮೊಗ್ಗ ಜಿಲ್ಲಾಸ್ಪತ್ರೆ ಹಾಗೂ ಜಿಲ್ಲೆಯ ಇತರೆ ತಾಲ್ಲೂಕು ಆರೋಗ್ಯ ಕೇಂದ್ರಗಳಲ್ಲಿ ಇರುವ ಸೌಲಭ್ಯಗಳಾವುವು ; ಇಲ್ಲಿರುವ ಚಿಕಿತ್ಸಾ ಸೌಲಭ್ಯಗಳಾವುವು ; ಈ ಚಿಕಿತ್ಸಾ ಸೌಲಭ್ಯಗಳನ್ನು ಉಚಿತ/ ರಿಯಾಯಿತಿ ದರದಲ್ಲಿ ಪಡೆಯಲು ಇರುವ ಅರ್ಹತೆಗಳೇನು ; (ವಿವರ ನೀಡುವುದು)

(ಆ) ಡಯಾಲಿಸಿಸ್, ಎಮ್.ಆರ್.ಐ, ಸಿ.ಟಿ. ಸ್ಕ್ಯಾನ್, ಹೆಚ್.ಎಫ್.ಎನ್.ಸಿ, ಇನ್ಕ್ಯುಬೇಟರ್, ಎಕ್ಸರೆ ಮುಂತಾದ ಇತರ ಆಧುನಿಕ ಸೌಲಭ್ಯಗಳು ಶಿವಮೊಗ್ಗ ಜಿಲ್ಲೆಯ ಯಾವ ಯಾವ ಆಸ್ಪತ್ರೆಗಳಲ್ಲಿ ಲಭ್ಯವಿದೆ ; (ವಿವರ ನೀಡುವುದು)

(ಇ) ಕಳೆದ ೦೩ ವರ್ಷಗಳ ಅವಧಿಯಲ್ಲಿ ಇಲಾಖೆಯಿಂದ ಖರೀದಿಸಿರುವ ವಿವಿಧ ಯಂತ್ರಗಳು ಯಾವುವು ; ಎಷ್ಟು ಮೊತ್ತದಲ್ಲಿ ಖರೀದಿಸಲಾಗಿದೆ ; ಅವುಗಳನ್ನು ಎಲ್ಲೆಲ್ಲಿ ಸರಬರಾಜು ಮಾಡಲಾಗಿದೆ ; (ವಿವರ ನೀಡುವುದು)

(ಈ) ಸರಬರಾಜುಗೊಂಡಿರುವ ಯಂತ್ರಗಳು ಸಾರ್ವಜನಿಕರಿಗೆ ಉಪಯುಕ್ತವಾಗಿವೆಯೇ ಹಾಗೂ ಅವುಗಳು ಕಾರ್ಯನಿರ್ವಹಿಸುವ ನಿಟ್ಟಿನಲ್ಲಿ ಸುಸ್ಥಿತಿಯಲ್ಲಿವೆಯೇ ; (ಜಿಲ್ಲಾವಾರು, ಮತಕ್ಷೇತ್ರವಾರು, ಆರೋಗ್ಯ ಕೇಂದ್ರವಾರು ಮಾಹಿತಿ ನೀಡುವುದು)

(ಉ) ಅವುಗಳ ಅನುಪಯುಕ್ತ ಸ್ಥಿತಿಗೆ ಕಾರಣಗಳೇನು ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಊ) ಶಿವಮೊಗ್ಗ ಜಿಲ್ಲೆಯಲ್ಲಿ ೨೪/೭ ಸೌಲಭ್ಯಗಳನ್ನು ಹೊಂದಿರುವ ಆಸ್ಪತ್ರೆಗಳು ಯಾವುವು ; ಅವು ೨೪/೭ ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾರಣವೇನು ; (ಮತಕ್ಷೇತ್ರವಾರು ವಿವರ ನೀಡುವುದು)

(ಖ) ಭದ್ರಾವತಿ ತಾಲ್ಲೂಕಿನಲ್ಲಿರುವ ಸರ್ಕಾರಿ/ಖಾಸಗಿ/ಆಯುಷ್ ಆಸ್ಪತ್ರೆಗಳೆಷ್ಟು ; ಅವು ಯಾವುವು ; ಸದರಿ ಆಸ್ಪತ್ರೆಗಳಲ್ಲಿ ಯಾವ ಯಾವ ಸೌಲಭ್ಯಗಳು ಲಭ್ಯ ಇರುತ್ತವೆ ? (ಆಸ್ಪತ್ರೆವಾರು ವಿವರ ನೀಡುವುದು)

## ಪ್ರತಿ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿ ಒಕ್ಕೂಟವನ್ನು ಸ್ಥಾಪಿಸುವ ಕುರಿತು

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೦೪ (೭೫೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿದ್ಯಾರ್ಥಿಗಳು ಪ್ರತಿನಿತ್ಯ ತರಗತಿಗಳಲ್ಲಿ ಸ್ವಚ್ಛತೆಗಾಗಿ ಗ್ರಂಥಾಲಯದಲ್ಲಿ ಓದುವುದಾಗಲಿ ಅಥವಾ ತಮ್ಮ ಸಮಸ್ಯೆಗಳನ್ನು ಪ್ರಾಂಶುಪಾಲರೊಂದಿಗೆ, ಆಡಳಿತ ಮಂಡಳಿಯೊಂದಿಗೆ ನೇರವಾಗಿ ಹೇಳಿಕೊಳ್ಳುವುದು ತುಂಬಾ ಕಷ್ಟವಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರತಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಒಬ್ಬ ವಿದ್ಯಾರ್ಥಿ ಪ್ರತಿನಿಧಿ ಅವಶ್ಯಕತೆ ಇದ್ದು ವಿದ್ಯಾರ್ಥಿ ಪ್ರತಿನಿಧಿಗಳನ್ನು ಆಯ್ಕೆ ಮಾಡಲು ಪ್ರಜಾಸತ್ತಾತ್ಮಕವಾಗಿ ಪ್ರತಿ ಕಾಲೇಜಿನಲ್ಲಿ ಚುನಾವಣೆಯನ್ನು ನಡೆಸಲು ಪ್ರಜಾಸತ್ತಾತ್ಮಕ ವಿದ್ಯಾರ್ಥಿ ಒಕ್ಕೂಟವನ್ನು ಸ್ಥಾಪಿಸುವ ಬಗ್ಗೆ ಸರ್ಕಾರ ಕ್ರಮವಹಿಸುವುದೇ ?

## **Saw Mill** ಗಳನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೫೦೫ (೬೮೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಎಷ್ಟು Saw Mill ಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿದೆ ; ಇವುಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ಸೇರಿದವುಗಳೆಷ್ಟು ; ಇವುಗಳಿಗೆ ಅನುಮತಿ ನೀಡಲು ಯಾವ ಯಾವ ಮೂಲಭೂತ ಸೌಲಭ್ಯಗಳ ಅವಶ್ಯಕತೆಯಿದೆ ;

(ಆ) ವಸತಿ ಪ್ರದೇಶದಲ್ಲಿ Saw Mill ಗಳನ್ನು ಪ್ರಾರಂಭಿಸಲು ಅವಕಾಶವಿದೆಯೇ ; ಹಾಗಿದ್ದಲ್ಲಿ, ಅನುಸರಿಸಬೇಕಾದ ನಿಯಮಗಳೇನು ;

(ಇ) ಪ್ರತಿ ವರ್ಷ ವನಮಹೋತ್ಸವ ಆಚರಿಸುವ ಸರ್ಕಾರವು ಮರ ಕಡಿಯುವ Saw Mill ಗಳಿಗೆ ಅನುಮತಿ ನೀಡುವ ಮೂಲಕ ದ್ವಂದ್ವ ನೀತಿ ಅನುಸರಿಸುವ ಬಗ್ಗೆ ಸರ್ಕಾರದ ನಿಲುವೇನು ? (ವಿವರ ಒದಗಿಸುವುದು)

## ನೂತನ ಶಿಕ್ಷಣ ಪದ್ಧತಿ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :-**

೫೦೬ (೬೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರವು ಘೋಷಿಸಿರುವ ನೂತನ ಶಿಕ್ಷಣ ಪದ್ಧತಿಯಲ್ಲಿ ರಾಜ್ಯ ಸರ್ಕಾರ ಯಾವ ಕೊರತೆಗಳನ್ನು ಕಂಡಿದೆ ;

(ಆ) ಇದಕ್ಕೆ ಕೇಂದ್ರ ಸರ್ಕಾರದ ನೀತಿಯನ್ನು ಅಳವಡಿಸದಿರಲು ಕಾರಣಗಳೇನು ; (ವಿವರ ಒದಗಿಸುವುದು)

(ಇ) ಕೇಂದ್ರ ರಾಜ್ಯದ ನಡುವೆ ಸೌಹಾರ್ದ ಸಂಬಂಧಗಳು ಹೇಗೆ ಸೃಜಿಸುತ್ತದೆ ? (ಸಂಪೂರ್ಣ ವಿವರ ಒದಗಿಸುವುದು)

## ಹಿರಿಯ ಉಪನ್ಯಾಸಕರಿಗೆ ಬಡ್ತಿ ನೀಡುವುದರ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೫೦೭ (೬೪೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೧೦.೧೫.೨೦ ವರ್ಷಗಳ ಕಾಲ ನಿರಂತವಾಗಿ ಸೇವೆ ಸಲ್ಲಿಸಿ ಒಂದು ಬಾರಿಯೂ ಬಡ್ತಿ ಸಿಗದೇ ಉಪನ್ಯಾಸಕರಾಗಿಯೇ ನಿವೃತ್ತಿ ಹೊಂದುವ ಹಿರಿಯ ಉಪನ್ಯಾಸಕರ ಹುದ್ದೆಯನ್ನು ಗ್ರೂಪ್ 'ಎ' ಹುದ್ದೆಯನ್ನಾಗಿ ಉನ್ನತೀಕರಿಸಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗಿದೆಯೇ ;

(ಆ) ಈ ಮೂಲಕ ಬಡ್ತಿ ಹೊಂದಿದ ಹಾಗೂ ಎಲ್ಲಾ ಉಪನ್ಯಾಸಕರಿಗೆ ನ್ಯಾಯ ಒದಗಿಸುವ ಸಂಬಂಧ ಸರ್ಕಾರದ ಕ್ರಮವೇನು ; (ಸಂಪೂರ್ಣ ವಿವರ ನೀಡುವುದು)

(ಇ) ದಿನಾಂಕ:೦೧.೦೮.೨೦೦೮ರ ನಂತರ ನೇಮಕಾತಿ ಹೊಂದಿರುವ ಉಪನ್ಯಾಸಕರಿಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯ ಹಾಗೂ ಉಚ್ಚ ನ್ಯಾಯಾಲಯದ ಆದೇಶದಂತೆ ೫೦೦ ರೂ.ಗಳ ಎಕ್ಸ್‌ಗ್ರೇಷಿಯಾವನ್ನು ಮೂಲವೇತನಕ್ಕೆ ವಿಲೀನಗೊಳಿಸಿದಂತೆ ಎಲ್ಲಾ ಉಪನ್ಯಾಸಕರಿಗೂ ಇದನ್ನು ವಿಸ್ತರಿಸುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮವೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಹಲವು ತಿಂಗಳುಗಳಿಂದ ನೆನೆಗುದಿಗೆ ಬಿದ್ದಿರುವ ಉಪನ್ಯಾಸಕರಿಂದ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡುವ ಪ್ರಕ್ರಿಯೆಗೆ ಶೀಘ್ರದಲ್ಲಿ ಚಾಲನೆ ನೀಡುವ ಸಂಬಂಧ ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಉ) ಹಾಗಿದ್ದಲ್ಲಿ, ಸದರಿ ಉಪನ್ಯಾಸಕರುಗಳಿಗೆ ಪ್ರಾಂಶುಪಾಲರ ಹುದ್ದೆಗೆ ಬಡ್ತಿಗೆ ವಿಧಿಸಿರುವ ಕಾಲಮಿತಿ ಎಷ್ಟು ?

## ಪ್ರೌಢ ಶಾಲೆ ಶಿಕ್ಷಕರ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೫೦೮ (೭೫೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಶಿಕ್ಷಕರ ಹಾಗೂ ಉಪನ್ಯಾಸಕರ ಹುದ್ದೆಗಳೆಷ್ಟು; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

(ಆ) ಈ ಖಾಲಿ ಇರುವ ಪ್ರೌಢಶಾಲಾ ಶಿಕ್ಷಕರು ಮತ್ತು ಉಪನ್ಯಾಸಕರ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಮಾಡಲಾಗುವುದು ?

## ಪಿ.ಯು.ಸಿ ವಿಜ್ಞಾನ ವಿಷಯಕ್ಕೆ ಸಂಬಂಧಿಸಿದ ಮೌಲ್ಯ ಮಾಪನ ಕೇಂದ್ರಗಳ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೫೦೯ (೭೫೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದ್ವಿತೀಯ ಪಿ.ಯು.ಸಿ ವಿಜ್ಞಾನ ವಿಷಯಕ್ಕೆ ಸಂಬಂಧಿಸಿದ ಮೌಲ್ಯಮಾಪನ ಕೇಂದ್ರಗಳನ್ನು ಜಿಲ್ಲಾವಾರು ವಿಕೇಂದ್ರೀಕರಣಗೊಳಿಸುವ ಮೂಲಕ ಸಮಯ ಕಾರ್ಯದೊತ್ತಡ ಹಾಗೂ ಫಲಿತಾಂಶದ ವೇಗವನ್ನು ಹೆಚ್ಚಿಸುವುದು ಮತ್ತು ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ಸಂಬಂಧ ಸರ್ಕಾರದ ಹಂತದಲ್ಲಿ ಚರ್ಚೆ ನಡೆಸಲಾಗಿದೆಯೇ ; ನಡೆಸಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಕರ್ನಾಟಕ ಪದವಿ ಪೂರ್ವ ಶಿಕ್ಷಣ ಇಲಾಖೆ ಹಲವಾರು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಯಶಸ್ವಿಯಾಗಿ ಮಾಡುವ ಮೂಲಕ ಇಡೀ ದೇಶಕ್ಕೆ ಮಾದರಿಯಾದ ಇಲಾಖೆಯಾಗಿದ್ದು, ಯವುದೇ ಸಂದರ್ಭದಲ್ಲೂ ಪದವಿ ಪೂರ್ವ ಶಿಕ್ಷಣ ಇಲಾಖೆಯನ್ನು ಇತರೆ ಯಾವುದೇ ಇಲಾಖೆಯೊಂದಿಗೆ ವಿಲೀನಗೊಳಿಸದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ?

## ಸರ್ಕಾರಿ ಆಸ್ಪತ್ರೆಗಳಲ್ಲಿನ ರೋಗಿಗಳಿಗೆ ಸೂಕ್ತ ಸ್ಪಂದನೆ ದೊರಕಿಸುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೫೧೦ (೬೫೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟಾರೆ ಎಷ್ಟು ಸರ್ಕಾರಿ/ಖಾಸಗಿ ಆಸ್ಪತ್ರೆಗಳಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಹಲವು ಸರ್ಕಾರಿ ಆಸ್ಪತ್ರೆಗಳಲ್ಲಿ ಶುಚಿತ್ವ ಇಲ್ಲದೇ ರೋಗಿಗಳ ಕುಟುಂಬಸ್ಥರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಶುಚಿತ್ವಕ್ಕೆ ಹೆಚ್ಚು ಒತ್ತು ಕೊಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ/ಕೈಗೊಳ್ಳುವ ಕ್ರಮಗಳೇನು ;

(ಇ) ಹಲವು ಆಸ್ಪತ್ರೆಗಳಲ್ಲಿ ರೋಗಿಯನ್ನು ದಾಖಲಿಸಿಕೊಳ್ಳುವ ಮುನ್ನ ಒಂದು ಆಸ್ಪತ್ರೆಯಿಂದ ಮತ್ತೊಂದು ಆಸ್ಪತ್ರೆಗೆ ಅಲೆದಾಡಿಸಿ, ರೋಗಿಯ ಮತ್ತು ರೋಗಿಯ ಕುಟುಂಬಸ್ಥರ ಮನಸ್ಥಿತಿಯು ಕುಗ್ಗಿ ಹೋಗಿ, ರೋಗಿಗೆ ಸರಿಯಾದ ಸಮಯದಲ್ಲಿ ಸೂಕ್ತ ಚಿಕಿತ್ಸೆ ದೊರಕದೇ, ಜೀವ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇಲ್ಲವಾದಲ್ಲಿ, ಪ್ರತಿಯೊಂದು ಆಸ್ಪತ್ರೆಯಲ್ಲಿ ಪ್ರತಿಯೊಬ್ಬ ರೋಗಿ ಆಯಾ ಖಾಯಿಲೆಗೆ ಚಿಕಿತ್ಸೆ ನೀಡುವ ನಿಟ್ಟಿನಲ್ಲಿ ಎಲ್ಲಾ ಸೌಕರ್ಯಗಳು ಇಲ್ಲದೆ ಇರುವುದರಿಂದ ಈ ಸೌಕರ್ಯಗಳನ್ನು ಪ್ರತಿಯೊಂದು ಆಸ್ಪತ್ರೆಗೆ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಉ) ಕೆಲವು ಆಸ್ಪತ್ರೆಗಳಲ್ಲಿ ರೋಗಿಗೆ ಸೂಕ್ತ ಸ್ಪಂದನೆ ದೊರಕದೇ, ಮೃತಪಟ್ಟಿರುವ ಉದಾಹರಣೆಗಳು ಇತ್ತೀಚೆಗೆ ವರದಿಯಾಗುತ್ತಿದ್ದು, ಈ ಬಗ್ಗೆ ಸರ್ಕಾರದ ದೃಢವಾದ ಕ್ರಮಗಳೇನು ;

(ಊ) ಒಬ್ಬ ರೋಗಿಯನ್ನು ಒಂದು ಆಸ್ಪತ್ರೆಯಿಂದ ಮತ್ತೊಂದು ಆಸ್ಪತ್ರೆಗೆ ಕರೆದೊಯ್ಯುವಾಗ, ಟ್ರಾಫಿಕ್ ಸಮಸ್ಯೆಗೆ ಸಿಲುಕಿ ರೋಗಿಗೆ ತುರ್ತಾಗಿ ಚಿಕಿತ್ಸೆ ದೊರಕದೆ ಮರಣಹೊಂದಿರುವಂತಹ ಪ್ರಕರಣಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿಶೇಷವಾಗಿ ಬೆಂಗಳೂರಿನಲ್ಲಿ ಅಂಬ್ಯುಲೆನ್ಸ್‌ಗಳಿಗಾಗಿ ಪ್ರತ್ಯೇಕ ಲೈನ್ ಮಾಡಿ ಸುಗಮವಾಗಿ ಆಸ್ಪತ್ರೆಗೆ ತಲುಪಿಸಲು ಸರ್ಕಾರದ ಮಟ್ಟದಲ್ಲಿ ಚರ್ಚಿಸಲಾಗುವುದೆ ; ಹಾಗಿದ್ದಲ್ಲಿ, ಯಾವಾಗ ಈ ಬಗ್ಗೆ ಕ್ರಮವಹಿಸಲಾಗುವುದು ?

## ಅಕ್ರಮ ಪಡಿತರ ಅಕ್ಕಿಯ ಕುರಿತು

**ಡಾ: ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೫೧೧ (೭೦೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಇಲ್ಲಿಯವರೆಗೆ ಎಷ್ಟು ಮೌಲ್ಯದ ಅಕ್ರಮ ಪಡಿತರ ಅಕ್ಕಿ ವಶಕ್ಕೆ ಪಡೆಯಲಾಗಿದೆ ; ಈ ಸಂಬಂಧ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಇಲ್ಲಿಯವರೆಗೆ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮವೇನು ; ಎಷ್ಟು ಅಧಿಕಾರಿಗಳನ್ನು ಅಮಾನತ್ತು ಮಾಡಲಾಗಿದೆ ?

## ಪದವಿ ಪೂರ್ವ ಶಿಕ್ಷಣ ಇಲಾಖೆಯಡಿಯಲ್ಲಿ ಖಾಲಿಯಿರುವ ಹುದ್ದೆಗಳ ಕುರಿತು

**ಡಾ: ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) :-**

೫೧೨ (೫೭೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯಡಿಯಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆಯೆಷ್ಟು:

(ಆ) ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಇ) ಇದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ?

# ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಪ್ಯಾಕೇಜ್ ಟೆಂಡರ್ ಕರೆದು ಎಸ್.ಸಿ/ಎಸ್.ಟಿ ಗುತ್ತಿಗೆದಾರರಿಗೆ ಅನ್ಯಾಯವಾಗಿರುವ ಕುರಿತು

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೧೩ (೬೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸಾರ್ವಜನಿಕ ಆಸ್ಪತ್ರೆ ಮೂಲ ಸೌಕರ್ಯ ಉನ್ನತೀಕರಣ, ಹೊಸ ಆರೋಗ್ಯ ಕೇಂದ್ರದ ಕಟ್ಟಡ ನಿರ್ಮಾಣ, ವಸತಿ ಗೃಹ ಮೂಲ ಸೌಕರ್ಯ, ಮೇಲ್ಛಾವಣಿ ದುರಸ್ಥಿ ಸೇರಿ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲು ಪ್ರತ್ಯೇಕ ಟೆಂಡರ್ ಕರೆಯದೆ ನಿಯಮ ಉಲ್ಲಂಘಿಸಿ ಪ್ಯಾಕೇಜ್ ಟೆಂಡರ್ ಕರೆದು ಪರಿಶಿಷ್ಟ ಸಮಾಜದ ಗುತ್ತಿಗೆದಾರರಿಗೆ ಅನ್ಯಾಯವೆಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಆ) ಪರಿಶಿಷ್ಟ ಜಾತಿ ಮತ್ತು ಪಂಗಡದ ಗುತ್ತಿಗೆದಾರರಿಗೆ ಅವಕಾಶ ತಪ್ಪಿಸಲು ಹಾಗೂ ನಿರ್ದಿಷ್ಟ ವ್ಯಕ್ತಿಗಳಿಗೆ ಟೆಂಡರ್ ನೀಡಲು ಪ್ಯಾಕೇಜ್ ಟೆಂಡರ್ ಕರೆದು ಅನುಕೂಲ ಮಾಡಿಕೊಟ್ಟಂತೆ ಆಗುವುದಿಲ್ಲವೇ ; ತಾಲ್ಲೂಕು ಮಟ್ಟದಲ್ಲಿ ಅನುಷ್ಠಾನಗೊಳಿಸುತ್ತಿರುವ ಕಾಮಗಾರಿಗಳ ಪ್ಯಾಕೇಜ್ ಮೊತ್ತವನ್ನ ಗರಿಷ್ಠ ೧ ಕೋಟಿ ರೂ.ಗೆ ಸೀಮಿತಗೊಳಿಸಬೇಕೆಂಬ ಆರ್ಥಿಕ ಇಲಾಖೆಯ ಸುತ್ತೋಲೆಯನ್ನು ಉಲ್ಲಂಘಿಸಿದಂತಾಗುವುದಿಲ್ಲವೆ ;

(ಇ) ಉದ್ದೇಶಪೂರ್ವಕವಾಗಿ ಪರಿಶಿಷ್ಟ ಜಾತಿ ಮತ್ತು ಪಂಗಡ ಸಮುದಾಯದ ಗುತ್ತಿಗೆದಾರರಿಗೆ ಕಾಮಗಾರಿ ಸಿಗಬಾರದೆಂದು ಪೂರ್ವ ನಿರ್ಧರಿಸಿದಂತೆ ಮೂರಕ್ಕೂ ಹೆಚ್ಚು ಕಾಮಗಾರಿಗಳನ್ನು ಒಂದುಗೂಡಿಸಿ ಒಂದೇ ಹಂತದಲ್ಲಿ ಪ್ಯಾಕೇಜ್ ಕಾಮಗಾರಿ ಮಾಡಿ ಟೆಂಡರ್ ಆಹ್ವಾನಿಸಿರುವುದು ಸಾರ್ವಜನಿಕ ಸಂಗ್ರಹಣೆಯಲ್ಲಿ ಕರ್ನಾಟಕ ಪಾರದರ್ಶಕತೆ ಕಾಯ್ದೆ ೧೯೯೯ವು ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ನೀಡಿರುವ ಮೀಸಲಾತಿಯ ವಿರುದ್ಧವಾದಂತಾಗುವುದಿಲ್ಲವೆ ?

## ಸಿ.ಇ.ಟಿ ಪರೀಕ್ಷೆಯಲ್ಲಿ ನಿಗದಿತ ಪಠ್ಯಕ್ರಮಕ್ಕಿಂತ ದೂರವಾದ ಪ್ರಶ್ನೆಗಳನ್ನು ಸೇರಿಸಿರುವ ಕುರಿತು

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೧೪ (೬೩೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿ.ಇ.ಟಿ ಪರೀಕ್ಷೆಯನ್ನು ಎಚ್ಚರವಹಿಸಿ ನಡೆಸದೇ ಪ್ರಶ್ನೆ ಪತ್ರಿಕೆಗಳಲ್ಲಿ ನಿಗದಿತ ಪಠ್ಯಕ್ರಮದಿಂದ ಹೊರತಾದಂತಹ ಹೆಚ್ಚಿನ ಪ್ರಶ್ನೆನೆಗಳನ್ನು ಸೇರಿಸಿ ಪ್ರಶ್ನೆಪತ್ರಿಕೆ ತಯಾರಿಸಿ ಪರೀಕ್ಷೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪಠ್ಯಕ್ರಮದಿಂದ ಹೊರತಾದಂತಹ ಹೆಚ್ಚಿನ ಪ್ರಶ್ನೆಗಳನ್ನು ಸೇರಿಸಿರುವ ಎಡವಟ್ಟಿನಿಂದ ಮಕ್ಕಳಿಗೆ ಆದ ಅನ್ಯಾಯವನ್ನು ಸರಿಪಡಿಸಲು ಸರ್ಕಾರವು ವಹಿಸಿದ ಕ್ರಮಗಳೇನು ;

(ಆ) ಪ್ರಶ್ನೆ ಪತ್ರಿಕೆಯಲ್ಲಿ ಆಗಿರುವ ಪ್ರಮಾದಕ್ಕೆ ಹೊಣೆಗಾರರು ಯಾರು ; ಸದರಿಯವರುಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಇ) ತಳ ಸಮುದಾಯ ರೈತಾಪಿ ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಉನ್ನತ ವೈದ್ಯಕೀಯ ಹಾಗೂ ತಾಂತ್ರಿಕ ಶಿಕ್ಷಣ ಪಡೆಯಲು ಸಹಕಾರಿಯಾಗಲೆಂದು ಸಿ.ಇ.ಟಿ ಪರೀಕ್ಷೆಯೆಂಬ ವಿಧಾನವನ್ನು ಪ್ರಾರಂಭಿಸಿದ್ದು, ಇತ್ತೀಚಿನ ದಿನಗಳಲ್ಲಿ ಇದರ ನಿರ್ವಹಣೆಯಲ್ಲಿ ಉಂಟಾಗುತ್ತಿರುವ ಲೋಪದೋಷಗಳಿಂದ ಆಸಕ್ತ ವಿದ್ಯಾರ್ಥಿಗಳು ಹಾಗೂ ಪೋಷಕರು ಬಹಳ ಅತಂಕದ ಪರಿಸ್ಥಿತಿಯನ್ನು ಎದುರಿಸುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿ ವಿದ್ಯುತ್ ಅವಘಡಗಳಿಂದ ಜನರು ಮತ್ತು ಪ್ರಾಣಿಗಳ ಜೀವಹಾನಿಯ ಕುರಿತು

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):-**

೫೧೫ (೬೩೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ವಿದ್ಯುತ್ ಅವಘಡಗಳಿಂದ ೧೫೧೯ ಜನರು ಹಾಗೂ ೧೫೭೪ ಪ್ರಾಣಿಗಳ ಜೀವ ಹಾನಿಯಾಗಿರುವ ಕುರಿತು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರವು ಕೈಕೊಂಡ ಕ್ರಮಗಳೇನು ; (ವರ್ಷವಾರು ಮತ್ತು ಎಸ್ಕಾಂಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ವಿದ್ಯುತ್ ಸುರಕ್ಷಿತ ಬಳಕೆಯ ಕುರಿತು ಜನಜಾಗೃತಿ ಮೂಡಿಸಲು ಹಾಗೂ ವಿದ್ಯುತ್ ಅಪಘಾತಗಳ ಸಂಖ್ಯೆ ಮಿತಿಗೊಳಿಸಲು ಸಾರ್ವಜನಿಕರಲ್ಲಿ ಹಾಗೂ ಸಿಬ್ಬಂದಿಗಳಲ್ಲಿ ಅರಿವು ಮೂಡಿಸಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ;

(ಇ) ವಿದ್ಯುತ್ ಸರಬರಾಜುದಾರರ ಜಾಲವು ದಿನದಿಂದ ದಿನಕ್ಕೆ ವಿಸ್ತಾರವಾಗುತ್ತಿದ್ದು ಸುರಕ್ಷಿತ ನಿರ್ವಹಣೆ ಹಾಗೂ ಬಳಕೆಯು ಸವಾಲಾಗಿ ಪರಿಣಮಿಸಿರುವುದು ಮತ್ತು ಮುಂಜಾಗ್ರತ ಕ್ರಮಗಳು ಸರಿಯಾಗಿ ಪಾಲನೆ ಆಗದಿರುವುದೇ ಅವಘಡಗಳ ಹೆಚ್ಚಳಕ್ಕೆ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಈ ನಿತ್ಯ ದುರಂತವನ್ನು ತಡೆಯಲು ಸರ್ಕಾರವು ವಿದ್ಯುತ್ ಪ್ರಸರಣ ವೈಜ್ಞಾನಿಕ ಪದ್ಧತಿಗಳನ್ನು ಅನುಸರಿಸದೆ ವಿದ್ಯುತ್ ಪ್ರಸರಣದಲ್ಲಿ ಕಂಬಗಳು ಹಾಗೂ ತಂತಿಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿಭಾಯಿಸದೆ ಆಧುನಿಕ ಯುಗದಲ್ಲಿಯೂ ಸಹ ಹಳೆಯ ಪದ್ಧತಿಗಳನ್ನೇ ಮುಂದುವರಿಸುತ್ತಿರುವುದಕ್ಕೆ ಕಾರಣಗಳೇನು ; ಸರ್ಕಾರದ ಈ ನಿರ್ಲಕ್ಷ ದಿಂದ ಅಮಾಯಕರು ಹಾಗೂ ಇಲಾಖೆಯ ಕಳೆದರ್ಜೆಯ ನೌಕರರು ಬಲಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಅರಣ್ಯ ಇಲಾಖೆಯ ಭೂಮಿಯನ್ನು ಹಿಂಪಡೆಯುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೫೧೬ (೭೧೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅರಣ್ಯ ಇಲಾಖೆಯ ಎಷ್ಟು ಭೂಮಿಯನ್ನು ಗುತ್ತಿಗೆಗೆ ನೀಡಲಾಗಿದೆ ; ಇದರಲ್ಲಿ ಗುತ್ತಿಗೆ ಅವಧಿ ಮುಗಿದ ಭೂಮಿಯ ವಿಸ್ತೀರ್ಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಗುತ್ತಿಗೆಗೆ ಪಡೆದ ಕಂಪನಿಗಳು ಸರ್ಕಾರಕ್ಕೆ ಪಾವತಿಸಬೇಕಾಗಿದ್ದ ಗುತ್ತಿಗೆ ಮೊತ್ತ ಮತ್ತು ಬಡ್ಡಿಯ ಮೊತ್ತ ಎಷ್ಟು ; ಸದರಿ ಬಾಕಿಯನ್ನು ವಸೂಲಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ; (ಕಂಪನಿಯವಾರು ಮತ್ತು ಜಿಲ್ಲಾವಾರು ವಿವರ ನೀಡುವುದು)

(ಇ) ಗುತ್ತಿಗೆ ಅವಧಿ ಮುಗಿದ ಭೂಮಿಯನ್ನು ಹಿಂಪಡೆಯಲು ಸರ್ಕಾರ ಕೈಗೊಂಡ ಕ್ರಮವೇನು ; ಯಾವ ಕಾಲಮಿತಿಯಲ್ಲಿ ಸದರಿ ಭೂಮಿಯನ್ನು ಹಿಂಪಡೆಯಲಾಗುವುದು ;

(ಈ) ಗುತ್ತಿಗೆಗೆ ಪಡೆದ ಕಂಪನಿಯೊಂದು ಅರಣ್ಯ ಭೂಮಿಯನ್ನು ಸಾಗುವಳಿ ಭೂಮಿಯೆಂದು ಅಡಮಾನವಿಟ್ಟು ಸಾಲ ಪಡೆದು, ಸದರಿ ಕಂಪನಿ ಸಾಲ ಮರುಪಾವತಿ ಮಾಡದ ಕಾರಣ ಅರಣ್ಯ ಭೂಮಿಯನ್ನು ಹರಾಜು ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ನಿಯಮ ಬಾಹಿರವಾಗಿ ಭೂಮಿಯನ್ನು ಅಡಮಾನ ಮಾಡಿದ ಕಂಪನಿ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ; ಭೂಮಿಯನ್ನು ವಶಕ್ಕೆ ಪಡೆಯಲಾಗಿದೆಯೇ ; ಪಡೆಯದಿದ್ದಲ್ಲಿ, ವಶಕ್ಕೆ ಪಡೆಯಲು ಸರ್ಕಾರ ಕೈಗೊಂಡ ಕ್ರಮವೇನು ?

## ರಾಜ್ಯ ಪ್ರಥಮ ದರ್ಜೆ ಕಾಲೇಜುಗಳಿಗೆ ತಾತ್ಕಾಲಿಕವಾಗಿ ಪ್ರಾಂಶುಪಾಲರ ನೇಮಕ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೫೧೭ (೭೧೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ; ಸದರಿ ಕಾಲೇಜುಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗೆ ನೇಮಕಾತಿ ಹಾಗೂ ಬಡ್ತಿ ನೀಡಲು ಇರುವ ಮಾನದಂಡಗಳೇನು ;

(ಇ) ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡಲು ಅರ್ಹ ಅಭ್ಯರ್ಥಿಗಳು ಲಭ್ಯವಿರುವರೇ ; ಇದ್ದಲ್ಲಿ, ಬಡ್ತಿ ನೀಡದಿರಲು ಕಾರಣಗಳೇನು ;

(ಈ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಪ್ರಾಂಶುಪಾಲರ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ನಿಯಮಗಳಲ್ಲಿ ಅವಕಾಶವಿದೆಯೇ ; ಹಾಗಿದ್ದಲ್ಲಿ, ಸದರಿ ಆದೇಶ/ಸುತ್ತೋಲೆಯ ಪ್ರತಿಯನ್ನು ನೀಡುವುದು ;

(ಉ) ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸದ ಹಲವು ಅಭ್ಯರ್ಥಿಗಳು ನಕಲಿ ಸೇವಾ ಪ್ರಮಾಣ ಪತ್ರ ಪಡೆದು ಕೆ.ಇ.ಎ ನಡೆಸುವ ಪರೀಕ್ಷೆಯಲ್ಲಿ ಅರ್ಜಿ ಸಲ್ಲಿಸಿ, ತಾತ್ಕಾಲಿಕ ಸ್ಥಾನಗಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಅಭ್ಯರ್ಥಿಗಳ ಸೇವೆಯನ್ನು ಪರಿಶೀಲಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಊ) ತಾಂತ್ರಿಕ ಶಿಕ್ಷಣ ಅಭ್ಯರ್ಥಿಗಳು ಸಹ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆಯೇ ; ನೀಡಲಾಗಿದ್ದಲ್ಲಿ, ಸದರಿ ಪ್ರಾಂಶುಪಾಲರು ಯಾವ ವಿಷಯಕ್ಕೆ ಬೋಧಿಸಬಹುದು ;

(ಋ) ಉದ್ಯೋಗ ಭದ್ರತೆಯಿಲ್ಲದ ಕಾರಣ ಮೆರಿಟ್ ಅಭ್ಯರ್ಥಿಗಳ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಪ್ರಾಂಶುಪಾಲರ ಹುದ್ದೆಗೆ ಬರಲು ಇಚ್ಛಿಸಿರುವುದು ಸರ್ಕಾರದ ಗಮನಕ್ಕ ಬಂದಿದೆಯೇ ; ಬಂದಿದ್ದಲ್ಲಿ, ಖಾಯಂ ಆಗಿ ಪ್ರಾಂಶುಪಾಲರ ಹುದ್ದೆಗೆ ನೇಮಕ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ?

## ೧೯೯೫ರ ನಂತರ ಆರಂಭಗೊಂಡ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ

**ಡಾ. ಧನಂಜಯ ಸರ್ಜೆ (ಪದವೀಧರರ ಕ್ಷೇತ್ರ) :-**

೫೧೮ (೬೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೧೯೯೫ರ ನಂತರ ಆರಂಭಗೊಂಡ ಕನ್ನಡ ಮಾಧ್ಯಮ ಅನುದಾನ ರಹಿತ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಿದಲ್ಲಿ ಸರ್ಕಾರಕ್ಕೆ ತಗಲಬಹುದಾದ ಅಂದಾಜು ವೆಚ್ಚ ಎಷ್ಟು ;

(ಇ) ಅನುದಾನಕ್ಕೆ ಒಳಪಡಿಸಿದ್ದಲ್ಲಿ, ಅವುಗಳನ್ನು ಯಾವ ವರ್ಷದವರೆಗೆ ಅನುದಾನಕ್ಕೆ ಒಳಪಡಿಸಲು ಸರ್ಕಾರ ಮುಂದಾಗಿದೆ; ಅನುದಾನಕ್ಕೆ ಒಳಪಡಿಸಲು ಸಾಧ್ಯವಿಲ್ಲದಿದ್ದಲ್ಲಿ ಅದಕ್ಕೆ ಕಾರಣವೇನು ? (ವಿವರ ನೀಡುವುದು)

## ಜಿಪಿಟಿ ಶಿಕ್ಷಕರ ಬಡ್ತಿ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೫೧೯ (೬೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೧೬ರಿಂದ ಈವರೆಗೆ ಒಟ್ಟು ಎಷ್ಟು ಪದವೀಧರ ಪ್ರಾಥಮಿಕ ಹಾಗೂ (೬-೮) ಜಿಪಿಟಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ ; ಈ ವೃಂದದ ಶಿಕ್ಷಕರಿಗೆ ಮುಂದಿನ ಬಡ್ತಿಯ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು ;

(ಆ) ರಾಜ್ಯದಲ್ಲಿ ಜಿಪಿಟಿ ಶಿಕ್ಷಕರಿಗೆ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಟ್-೨ ಹುದ್ದೆಗೆ ಬಡ್ತಿ ನೀಡಲು ಅನುವಾಗುವಂತೆ ಪ್ರೌಢಶಾಲಾ ಸಹಶಿಕ್ಷಕರ ಸಿ ಅಂಡ್ ಆರ್ ರಚಿಸಲು ನ್ಯಾಯಾಲಯದಿಂದ ಸರ್ಕಾರಕ್ಕೆ ನಿರ್ದೇಶನ ಅಥವಾ ಆದೇಶ ಬಂದಿದೆಯೇ ; ಈ ಕುರಿತಂತೆ ಸರ್ಕಾರ ತೆಗೆದಕೊಂಡಿರುವ ಉಪಕ್ರಮಗಳಾವುವು ;

(ಇ) ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರ ಹುದ್ದೆಗೆ ಬಡ್ತಿ ನೀಡುವಲ್ಲಿ ಕೆ.ಎ.ಟಿ ನೀಡಿರುವ ಆದೇಶದಂತೆ ಬಡ್ತಿ ಪ್ರಕ್ರಿಯೆ ನಡೆಸಲು ಸರ್ಕಾರ ವಿಳಂಬ ಮಾಡುತ್ತಿರಲು ಕಾರಣವೇನು; ಕೂಡಲೇ ಈ ಹುದ್ದೆಗೆ ಬಡ್ತಿ ನೀಡಲು ತೆಗೆದುಕೊಂಡಿರುವ ಕ್ರಮಗಳಾವುವು ?

## ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ ಬಗ್ಗೆ

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೫೨೦ (೬೯೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಯಾವ ವರ್ಷದವರೆಗೆ ಖಾಲಿಯಾಗಿರುವ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆಯೇ ;

(ಆ) ಅನುಮತಿ ನೀಡಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ನಿಗದಿಪಡಿಸಿರುವ ಮಾನದಂಡಗಳೇನು ;

(ಇ) ಅನುಮತಿ ನೀಡಿರುವ ಹುದ್ದೆಗಳನ್ನು ಭರ್ತಿ ಮಾಡಿ ಆಯ್ಕೆ ಪಟ್ಟಿಯ ಅನುಮೋದನೆಗಾಗಿ ಬಾಕಿ ಇರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ;

(ಈ) ಪ್ರಸ್ತುತ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ವಿದ್ಯಾರ್ಥಿಗಳ ಸಂಖ್ಯೆಯನ್ನು ೫೦೦ಕ್ಕೆ ಸೀಮಿತಗೊಳಿಸಿ ಆದೇಶ ಹೊರಡಿಸಲಾಗಿದೆಯೇ; ಆದೇಶ ಹೊರಡಿಸಿದ್ದಲ್ಲಿ, ಸದರಿ ಆದೇಶದ ಪ್ರತಿ ಒದಗಿಸುವುದು ;

(ಉ) ಇಲ್ಲವಾದಲ್ಲಿ, ಈ ಹಿಂದೆ ಇದ್ದ ಮಾನದಂಡಗಳನ್ವಯ ನೇಮಕಾತಿ ಮಾಡಿಕೊಳ್ಳಲಾದವರ ಆಯ್ಕೆ ಪಟ್ಟಿಯನ್ನು ಅನುಮೋದಿಸಲು ಇರುವ ಸಮಸ್ಯೆ ಏನು; ಸದರಿ ಸಮಸ್ಯೆಯನ್ನು ಸರಿಪಡಿಸಿ ಅನುಮೋದನೆಗೊಳಿಸಲು ಸರ್ಕಾರ ಕ್ರಮ ವಹಿಸಲಾಗುವುದೇ ?

## ೨೦೧೬ರಲ್ಲಿ ನೇಮಕವಾದ ಜಿಪಿಟಿ ಶಿಕ್ಷಕರ ವರ್ಗಾವಣೆ ಸಮಸ್ಯೆ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೫೨೧ (೬೯೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೬ರಲ್ಲಿ ನೇಮಕವಾದ ಜಿಪಿಟಿ ಶಿಕ್ಷಕರು ಹಾಗೂ ನಂತರ ನೇಮಕವಾದ ಜಿಪಿಟಿ ಶಿಕ್ಷಕರ ನಡುವೆ ತಾಲ್ಲೂಕಿನ ಹೊರಗಿನ ವರ್ಗಾವಣೆಗೆ ವಿಧಿಸಿರುವ ನಿಬಂಧನೆಗಳಲ್ಲಿ ಯಾವುದಾದರು ವ್ಯತ್ಯಾಸ ಇವೆಯೇ; ವ್ಯತ್ಯಾಸಗಳಿದ್ದಲ್ಲಿ, ಕಾರಣಗಳೇನು ಹಾಗೂ ಒಂದೇ ವೃಂದದ ನೌಕರರ ಘಟಕದ ಹೊರಗಿನ ವರ್ಗಾವಣೆಯಲ್ಲಿ ಎರಡು ರೀತಿಯ ಮಾನದಂಡ ಅನುಸರಣೆ ಸಮರ್ಪಕವಾದುದೇ ; ಅಸಮರ್ಪಕತೆ ಇದ್ದಲ್ಲಿ, ಇದನ್ನು ಪರಿಹರಿಸಲು ತೆಗೆದುಕೊಂಡಿರುವ ಕ್ರಮಗಳಾವುವು ;

(ಆ) ಆಂಗ್ಲ ಭಾಷಾ ಜಿಟಿಪಿ ಶಿಕ್ಷಕರಿಗೆ ಘಟಕದ ಒಳಗೆ ಅಥವಾ ಹೊರಗೆ ವರ್ಗಾವಣೆ ಹೊಂದಲು ಖಾಲಿ ಹುದ್ದೆಗಳ ಕೊರತೆ ಇದೆಯೇ ; ಇದನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು ;

(ಇ) ರಾಜ್ಯ ಸರ್ಕಾರದ ಶಾಲೆಗಳಲ್ಲಿ ಆಂಗ್ಲ ಒಂದು ಕಡ್ಡಾಯ ಭಾಷೆಯಾಗಿರುವಾಗ ೬–೮ನೇ ತರಗತಿಗೆ ಇಂಗ್ಲಿಷ್ ಶಿಕ್ಷಕರ ನೇಮಕಕ್ಕೆ ೧೫೦ ಹೆಚ್ಚು ಮಕ್ಕಳ ಇರಬೇಕೆಂಬ ನಿಬಂಧನೆಯಿಂದ ಎಲ್ಲಾ ಶಾಲೆಗಳಿಗೆ ಇಂಗ್ಲಿಷ್ ಶಿಕ್ಷಕರನ್ನು ನೇಮಕ ಮಾಡಲು ಸಾಧ್ಯವೇ ; ಈ ತರಹದ ನಿಬಂದನೆಗಳಿಂದ ಇಂಗ್ಲಿಷ್ ಶಿಕ್ಷಕರು ಇಲ್ಲದ ಕಾರಣ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಕಡಿಮೆ ಆಗುವುದಿಲ್ಲವೇ ಅಥವಾ ಶಾಲೆಗಳು ಮುಚ್ಚುವ ಹಂತಕ್ಕೆ ಬರುವುದಿಲ್ಲವೇ ? (ವಿವರ ನೀಡುವುದು)

## ಖಾಸಗಿ ನರ್ಸಿಂಗ್ ಕಾಲೇಜುಗಳು ಕ್ಲಿನಿಕಲ್ ಸೌಲಭ್ಯ ಪಡೆಯಲು ಇರುವ ನೀತಿ–ನಿಯಮದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೨ (೫೯೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಹಾಗೂ ಖಾಸಗಿ ನಸಿರ್ಂಗ್ ಕಾಲೇಜುಗಳು ಕ್ಲಿನಿಕಲ್ ಸೌಲಭ್ಯ ಪಡೆಯಲು ಇರುವ ನೀತಿ ನಿಯಮಗಳೇನು ಹಾಗೂ ಸರ್ಕಾರಿ ಆಸ್ಪತ್ರೆಯಲ್ಲಿ ಕ್ಲಿನಿಕಲ್ ಸೌಲಭ್ಯ ಒದಗಿಸಲು ಒಬ್ಬ ವಿದ್ಯಾರ್ಥಿಗೆ ಎಷ್ಟು ಹಣವನ್ನು ಪಾವತಿ ಮಾಡಬೇಕಾಗುತ್ತದೆ ;

(ಆ) ಕಳೆದ ೦೫ ವರ್ಷದಿಂದ ಕ್ಲಿನಿಕಲ್ ಸೌಲಭ್ಯದಿಂದ ಸರ್ಕಾರಕ್ಕೆ ಎಷ್ಟು ಹಣ ಸಂದಾಯವಾಗಿದೆ; (ಪಾವತಿ ಮಾಡಿರುವ ಸಂಸ್ಥೆಯ ಮಾಹಿತಿಯನ್ನು ಒದಗಿಸುವುದು)

(ಇ) ಆಸ್ಪತ್ರೆಗಳಿಗೆ ಹಣವನ್ನು ಪಾವತಿಸದೆ, ಕ್ಲಿನಿಕಲ್ ಸೌಲಭ್ಯಗಳನ್ನು ಪಡೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪೂರ್ಣ ಮಾಹಿತಿಯನ್ನು ಒದಗಿಸುವುದು ಹಾಗೂ ಯಾರ ಮೇಲೆ ಕ್ರಮತೆಗೆದುಕೊಳ್ಳಲಾಗಿದೆ ;

(ಈ) ಸರ್ಕಾರಿ ಆಸ್ಪತ್ರೆಯವರು ಕಾಲೇಜಿನವರೊಂದಿಗೆ ಶಾಮೀಲಾಗಿ ಇಂತಿಷ್ಟು ಹಣವನ್ನು ಪಡೆದು ಕ್ಲಿನಿಕಲ್ ಸೌಲಭ್ಯ ನೀಡಿ, ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿರುವ ಜಿಲ್ಲಾಸ್ಪತ್ರೆಯ ಮುಖ್ಯಸ್ಥರ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ ;

(ಉ) ಸಚಿವಾಲಯದ ಅಧಿಕಾರಿಗಳು ಕ್ಲಿನಿಕಲ್ ಸೌಲಭ್ಯಕ್ಕಾಗಿ ಅನುಮತಿ ನೀಡುವ ಸಂದರ್ಭದಲ್ಲಿ ತಾರತಮ್ಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಸರ್ಕಾರವು ಕೆಲವು ಸಂಸ್ಥೆಗೆ ನಿಯಮ ಪಾಲಿಸುವಂತೆ ಹೇಳುವುದು ಹಾಗೂ ಇನ್ನು ಕೆಲವು ಸಂಸ್ಥೆಗಳಿಗೆ ನಿಯಮ ಸಡಿಲಿಸುತ್ತಿರಲು ಕಾರಣವೇನು ?

## ನರ್ಸಿಂಗ್ ಕಾಲೇಜುಗಳು ಕಡ್ಡಾಯವಾಗಿ ೧೦೦ ಬೆಡ್‌ಗಳ ಸ್ವಂತ ಆಸ್ಪತ್ರೆ ಹೊಂದುವುದರ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೨೩ (೫೯೧) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ನರ್ಸಿಂಗ್ ಕಾಲೇಜುಗಳ ಒಟ್ಟು ಸಂಖ್ಯೆ ಎಷ್ಟು; (ಬಿಎಸ್ಸಿ ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಹಾಗೂ ಇನ್ನಿತರ ಕೋರ್ಸ್‌ಗಳು)

(ಆ) ಪ್ರಸ್ತುತ, ಇರುವ ನರ್ಸಿಂಗ್ ಕಾಲೇಜುಗಳಲ್ಲಿ ಎಷ್ಟು ಕಾಲೇಜು ಕೆಎಂಸಿ ಮತ್ತು ಐಎನ್‌ಸಿ ಅನುಮತಿ ಪಡೆದಿವೆ ; (ಪೂರ್ಣ ವಿವರ ಒದಗಿಸುವುದು)

(ಇ) ನರ್ಸಿಂಗ್ ಕಾಲೇಜು ಹೊಂದಿರುವವರು ಕಡ್ಡಾಯವಾಗಿ ೧೦೦ ಬೆಡ್‌ಗಳ ಸ್ವಂತ ಆಸ್ಪತ್ರೆ ಹೊಂದಿರಬೇಕೆಂಬ ನಿಯಮವಿದೆಯೇ; ಹಾಗಿದ್ದಲ್ಲಿ, ಎಷ್ಟು ಸಂಸ್ಥೆಗಳು ಸ್ವಂತ ಆಸ್ಪತ್ರೆಯನ್ನು ಹೊಂದಿದೆ; ಸ್ವಂತ ಆಸ್ಪತ್ರೆ ಹೊಂದಿಲ್ಲದಿದ್ದಲ್ಲಿ ಕಾಲೇಜಿನ ಮಾನ್ಯತೆಯನ್ನು ರದ್ದುಪಡಿಸಲಾಗುವುದೇ ; (ಪೂರ್ಣ ವಿವರ ನೀಡುವುದು)

(ಈ) ರಾಜ್ಯದಲ್ಲಿ ಹಲವಾರು ನರ್ಸಿಂಗ್ ಕಾಲೇಜುಗಳಲ್ಲಿ ಅಗತ್ಯ ಪ್ರಮಾಣದ ಬೋಧಕ ಮತ್ತು ಪ್ರಯೋಗಾಲಯ, ಸಿಬ್ಬಂದಿ ಹಾಗೂ ಗ್ರಂಥಾಲಯ ಮತ್ತಿತರ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೋಲಾರದಲ್ಲಿರುವ ಶಾಲೆಗಳು ಶಿಥಿಲಾವಸ್ಥೆಯಲ್ಲಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೨೪ (೫೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪ್ರಸ್ತುತ ಇರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳ ಸಂಖ್ಯೆ ಎಷ್ಟು ;

(ಆ) ಇರುವಂತ ಶಾಲೆಗಳಲ್ಲಿ ಶಿಕ್ಷಕರು ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು; ಖಾಲಿ ಇರುವ ಶಿಕ್ಷಕರು ಮತ್ತು ಸಿಬ್ಬಂದಿಗಳ ಹುದ್ದೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ಒದಗಿಸುವುದು)

(ಇ) ಶಿಕ್ಷಕರು ಮತ್ತು ಸಿಬ್ಬಂದಿಗಳ ಕೊರತೆ ಇದ್ದಲ್ಲಿ, ನೇಮಕಾತಿ ಮಾಡಿಕೊಳ್ಳಲು ಸರ್ಕಾರ ತೆಗೆದುಕೊಂಡ ಕ್ರಮವೇನು; ಎಷ್ಟು ವರ್ಷಗಳಿಂದ ಈ ಹುದ್ದೆಗಳು ಖಾಲಿ ಇವೆ :

(ಈ) ಕ್ಷೇತ್ರದಲ್ಲಿ ಪ್ರಸ್ತುತ ಶಿಥಿಲಾವಸ್ಥೆಯಲ್ಲಿರುವ ಶಾಲೆಗಳ ಮಾಹಿತಿಯು ಸರ್ಕಾರದಲ್ಲಿದೆಯೇ; ಇದ್ದಲ್ಲಿ, ಗ್ರಾಮ ಪಂಚಾಯ್ತಿವಾರು ವಿವರಗಳನ್ನು ಒದಗಿಸುವುದು ;

(ಉ) ಶಿಥಿಲಗೊಂಡಿರುವ ಶಾಲೆಗಳನ್ನು ನವೀಕರಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಹಾಗೂ ನವೀಕರಣಕ್ಕಾಗಿ ಮತ್ತು ನೂತನ ಕಟ್ಟಡಕ್ಕಾಗಿ ಎಷ್ಟು ಅನುದಾನವನ್ನು ಬಿಡುಗಡೆಗೊಳಿಸಿದೆ; ಪ್ರಸ್ತುತ ಎಷ್ಟು ಶಾಲೆಗಳನ್ನು ನವೀಕರಿಸಲಾಗುತ್ತಿದೆ ?

## RTPCR ಪರೀಕ್ಷೆಗೆ ನಿಗದಿಪಡಿಸಿದ ದರದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೨೫ (೫೮೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋವಿಡ್ ಸಂದರ್ಭದಲ್ಲಿ ಬೆಂಗಳೂರಿನಲ್ಲಿ ಆರ್‌ಟಿಪಿಸಿಆರ್ ಪರೀಕ್ಷೆಗೆ ನಿಗಧಿಪಡಿಸಿದ್ದ ದರಕ್ಕಿಂತ ಹೆಚ್ಚು ಪಾವತಿ, ಸೋಂಕಿತರಿಗೆ ಆಹಾರ ಪೂರೈಕೆ, ಔಷಧಿ ಹಾಗೂ ಇತರೆ ಸಾಮಗ್ರಿ ಖರೀದಿಯಲ್ಲಿ ಅಕ್ರಮ ಹಾಗೂ ಸಾಮರ್ಥ್ಯಕ್ಕಿಂತ ಹೆಚ್ಚು ಪರೀಕ್ಷೆ ಮಾಡಿರುವ ಲೆಕ್ಕ ಕೊಟ್ಟು ಕೋಟ್ಯಾಂತರ ರೂ. ಕಬಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸೋಂಕಿತರಿಗಾಗಿ ಎಷ್ಟು ಆರೈಕೆ ಕೇಂದ್ರವನ್ನು ತೆರೆಯಲಾಗಿತ್ತು; ಈ ಕೇಂದ್ರಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಯಾವ ಯಾವ ಸಾಮಗ್ರಿಗಳನ್ನು ಖರೀದಿಸಲಾಗಿತ್ತು; ಇವುಗಳನ್ನು ಸರಬರಾಜು ಮಾಡಲು ಯಾವ ಸಂಸ್ಥೆಗಳಿಗೆ ನೀಡಲಾಗಿತ್ತು; ಹಾಗೂ ಕೆಟಿಪಿಪಿ ಕಾಯ್ದೆಯ ಸೆಕ್ಷನ್(೪) ಎ ಅಡಿಯಲ್ಲಿ ಅಗತ್ಯ ಸೇವೆಗಾಗಿ ಟೆಂಡರ್ ಪ್ರಕ್ರಿಯೆಗೆ ಸರ್ಕಾರದಿಂದ ವಿನಾಯಿತಿ ಪಡೆದುಕೊಳ್ಳಲಾಗಿತ್ತೆ ;

(ಇ) ಆರ್‌ಟಿಪಿಸಿಆರ್ ಪರೀಕ್ಷೆ ಮಾಡಲು ಎಷ್ಟು ಖಾಸಗಿ ಆಸ್ಪತ್ರೆಗಳನ್ನು ಆಯ್ಕೆ ಮಾಡಿಕೊಳ್ಳಲಾಗಿತ್ತು; ಸದರಿ ಆಸ್ಪತ್ರೆಗಳು ಎಷ್ಟು ಪರೀಕ್ಷೆ ಮಾಡಿದ್ದಾರೆ ಹಾಗೂ ಇವರಿಗೆ ಸರ್ಕಾರದಿಂದ ಪಾವತಿಸಿರುವ ಹಣವೆಷ್ಟು ;

(ಈ) ೨೦೨೦ರ ಸೆಪ್ಟೆಂಬರ್ ೧೫ ರಿಂದ ಜಾರಿಗೆ ಬರುವಂತೆ ಆರೈಕೆ

ಕೇಂದ್ರವನ್ನು ಸ್ಥಗಿತಗೊಳಿಸಲು ಸರ್ಕಾರದಿಂದ ಆದೇಶ ಹೊರಡಿಸಲಾಗಿತ್ತೆ; ಹಾಗಿದ್ದಲ್ಲಿ, ಸದರಿ ಆದೇಶದಂತೆ ಖರೀದಿಸಲಾಗಿದ್ದ ಬೆಡ್‌ಗಳು, ಫ್ಯಾನ್, ಮಂಚ ಹಾಗೂ ಇನ್ನಿತರ ವಸ್ತುಗಳನ್ನು ಎಲ್ಲಿ ಇಡಲಾಗಿದೆ ಅಥವಾ ಯಾವ ಸಂಸ್ಥೆಗಳಿಗೆ ವಿತರಣೆ ಮಾಡಲಾಗಿದೆ ;

(ಉ) ಕೋವಿಡ್ ಸಂದರ್ಭವನ್ನು ಬಳಸಿಕೊಂಡು ಸರ್ಕಾರದ ಅಧಿಕಾರಿಗಳು ನಿಯಮಗಳನ್ನು ಗಾಳಿಗೆತೂರಿ ಕೋಟಿ ಕೋಟಿ ಹಣವನ್ನು ಲೂಟಿ ಮಾಡಿ ಭ್ರಷ್ಟಾಚಾರ ಎಸಗಿರುವ ಮಾಹಿತಿ ಬಹಿರಂಗವಾಗಿರುವುದು ನಿಜವೇ ? (ಪೂರ್ಣ ಮಾಹಿತಿ ಒದಗಿಸುವುದು)

## ಹೊಸದಾಗಿ ಸ್ಥಾವರ್ ವಿದ್ಯುತ್ ನೀಡುವ ಮತ್ತು ದುರಸ್ಥಿಗೊಳಿಸುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೨೬ (೬೬೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೃಷಿ ಗೃಹ ಬೋರ್‌ವೆಲ್ ಮತ್ತು ವಾಣಿಜ್ಯ ವಿಭಾಗಗಳಲ್ಲಿ ಇತರೆ ಉಪಯೋಗಗಳಿಗೆ ಹೊಸದಾಗಿ ವಿದ್ಯುತ್ ಸಂಪರ್ಕ ನೀಡಲು ಇರುವ ಮಾನದಂಡಗಳೇನು ;

(ಆ) ಕೃಷಿ /ಗೃಹ /ವಾಣಿಜ್ಯ ವಿಭಾಗದ ಟ್ರಾನ್ಸ್‌ಫರ್ಮರ್ ದುರಸ್ತಿ ಕೈಗೊಳ್ಳಲು ಇರುವ ಮಾರ್ಗಸೂಚಿಗಳಾವುವು ;

(ಇ) ರೈತರ ಟ್ರಾನ್ಸ್‌ಫರ್ಮರ್ ದುರಸ್ತಿಗೊಳಿಸಲು ರೈತರಿಂದ ಹಣ ಪಡೆಯುತ್ತಿರುವ ಬಗ್ಗೆ ಎಷ್ಟು ದೂರುಗಳು ಸ್ವೀಕೃತವಾಗಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಗೃಹ ಲಕ್ಷ್ಮೀ ಯೋಜನೆಯಡಿ ಎಷ್ಟು ಫಲಾನುಭವಿಗಳು ಆಯ್ಕೆಯಾಗಿದ್ದಾರೆ ; ಮತ್ತು ಉಚಿತ ವಿದ್ಯುತ್ ಬಿಲ್ ಮೊತ್ತವನ್ನು ಸರ್ಕಾರಕ್ಕೆ ಎಷ್ಟು ಪಾವತಿಸಲಾಗಿದೆ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ಪ್ರಥಮ ದರ್ಜೆ ಕಾಲೇಜುಗಳ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೨೭ (೬೭೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಮತ್ತು ಖಾಸಗಿ ಪ್ರಥಮ ದರ್ಜೆ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ರಾಜ್ಯದ ಸರ್ಕಾರಿ ಮತ್ತು ಖಾಸಗಿ ಪ್ರಥಮ ದರ್ಜೆ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ಕಳೆದ ೩ ವರ್ಷಗಳಿಂದ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸರ್ಕಾರಿ ಮತ್ತು ಖಾಸಗಿ ಪ್ರಥಮ ದರ್ಜೆ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ರಾಜ್ಯ/ರಾಷ್ಟ್ರೀಯ ಶಿಕ್ಷಣ ನೀತಿ ಅನ್ವಯ ವಿದ್ಯಾರ್ಥಿಗಳ ಅನುಪಾದನ್ವಯ ಬೋದನಾಧಿ ಭೋದಕೇತರ ಸಿಬ್ಬಂದಿ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸರ್ಕಾರಿ ಪ್ರಥಮ ದರ್ಜೆ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ಪ್ರಸ್ತುತ ದಿನದವರೆಗೆ ಬೋಧನಾ ಮತ್ತು ಬೋಧಕೇತರ ಸಿಬ್ಬಂದಿಯ ಕೊರತೆ ಇರುವುದರ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಉ) ಸಿಬ್ಬಂದಿಯ ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಪ್ರಾಥಮಿಕ ಮತ್ತು ಜಿಲ್ಲಾ ಆರೋಗ್ಯ ಕೇಂದ್ರಗಳಲ್ಲಿ ತುರ್ತು ಔಷಧಿಗಳ ಲಭ್ಯತೆಗಳ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೨೮ (೬೭೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರಾಥಮಿಕ ಮತ್ತು ಜಿಲ್ಲಾ ಆರೋಗ್ಯ ಕೇಂದ್ರಗಳಲ್ಲಿ ತುರ್ತು ಆಗತ್ಯ ಔಷಧಿಗಳು ಲಭ್ಯವಿಲ್ಲದೆ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಆರೋಗ್ಯ ಕೇಂದ್ರಗಳಲ್ಲಿ ರೋಗಿಗಳಿಗೆ ಸಮರ್ಪಕವಾಗಿ ಔಷಧಿಗಳನ್ನು ವಿತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಜಿಲ್ಲಾ ಆರೋಗ್ಯ ಕೇಂದ್ರಗಳಲ್ಲಿ ತುರ್ತು ಅಗತ್ಯ ಔಷಧಿಗಳು ಲಭ್ಯವಿಲ್ಲದೆ ರೋಗಿಗಳು ಖಾಸಗಿ ಔಷಧಿ ಅಂಗಡಿಗಳಿಂದ ಔಷಧಿ ಖರೀದಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಆರೋಗ್ಯ ಕೇಂದ್ರಗಳಿಗೆ ಅಗತ್ಯವಿರುವ ಔಷಧಿಗಳನ್ನು ಪೂರೈಕೆ ಮಾಡದಿರಲು ಕಾರಣವೇನು; ಯಾವ ಕಾಲಮಿತಿಯೊಳಗೆ ಔಷಧಿಗಳನ್ನು ಪೂರೈಕೆ ಮಾಡುವುದು ? (ವಿವರ ನೀಡುವುದು)

## ಬೆಂಗಳೂರು ಜಿಲ್ಲೆಯಲ್ಲಿ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯ ಕಾರ್ಯನಿರ್ವಹಣೆ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೨೯ (೬೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಅಥವಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಕಛೇರಿಯ ಕಟ್ಟಡವು ಸರ್ಕಾರಿ ಅಥವಾ ಖಾಸಗಿ ಜಾಗದಲ್ಲಿ ಕಾರ್ಯನಿರ್ವಹಿಸುತ್ತಿದೆಯೇ ; (ವಿವರ ನೀಡುವುದು)

(ಆ) ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಅಥವಾ ಪದವಿ ಪೂರ್ವ ಶಿಕ್ಷಣ ಇಲಾಖೆಯು ಕಛೇರಿ ಅವರಣದಲ್ಲಿ ಈ ಹಿಂದೆ ಯಾವುದಾದರು ಹೋಟೆಲ್, ಕೆ.ಎಂ.ಎಫ್ ನಂದಿನಿ ಮಿಲ್ಕ್ ಪಾರ್ಲ್‌ರ್ ಅಥವಾ ಇತರ ಮಳಿಗೆಗಳನ್ನು ಸ್ಥಾಪಿಸಲು ಅನುಮತಿ ನೀಡಲಾಗಿದೆಯೇ; ಅನುಮತಿ ನೀಡಲು ಯಾವ್ಯಾವ ಮಾನದಂಡ ಪರಿಗಣಿಸಲಾಗುತ್ತಿದೆ ;

(ಇ) ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಅಥವಾ ಪದವಿ ಪೂರ್ವ ಶಿಕ್ಷಣ ಇಲಾಖೆ ಮಳಿಗೆಗಳನ್ನು ಸ್ಥಾಪಿಸಲು ಇದುವರೆವಿಗೂ ಸ್ವೀಕೃತವಾಗಿರುವ ಕೋರಿಕೆಗಳು ಮತ್ತು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ೨೦೨೪-೨೫ನೇ ಸಾಲಿನಲ್ಲಿ ವೃತ್ತಿಪರ ಕೋರ್ಸ್‌ಗಳಿಗೆ ನಡೆಸಿದ ಸಿ.ಇ.ಟಿ. ಕುರಿತು

**ಶ್ರೀ ನಿರಾಣಿ ಹಣವಂತ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೫೩೦ (೫೮೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪ನೇ ಸಾಲಿನಲ್ಲಿ ವೃತ್ತಿಪರ (ವೈದ್ಯಕೀಯ & ಇಂಜಿನಿಯರ್) ಕೋರ್ಸ್‌ಗಳಿಗೆ ನಡೆಸಿದ ಕೆ. ಸಿ.ಇ.ಟಿ. ಪರೀಕ್ಷೆಯಲ್ಲಿ ನಿಗಧಿತ ಪಠ್ಯಕ್ರಮದಿಂದ ಹೊರತಾದ ಹೆಚ್ಚಿನ ಪ್ರಶ್ನೆಗಳನ್ನು ಸೇರಿಸಿ ಪ್ರಶ್ನೆ ಪತ್ರಿಕೆ ತಯಾರಿಸಿ ಪರೀಕ್ಷೆ ನಡೆಸಿರುವುದು ನಿಜವೇ ;

(ಆ) ಪಠ್ಯಕ್ರಮದಿಂದ ಹೊರತಾದ ಹೆಚ್ಚಿನ ಪ್ರಶ್ನೆಗಳನ್ನು ಸೇರಿಸಿ ನಡೆಸಿರುವ ಪರೀಕ್ಷೆಯ ಎಡವಟ್ಟಿನಿಂದ ಮಕ್ಕಳಿಗೆ ಆದ ಅನ್ಯಾಯವನ್ನು ಸರಿಪಡಿಸಲು ಸರ್ಕಾರವು ವಹಿಸಿದ ಕ್ರಮಗಳೇನು ;

(ಇ) ಪಠ್ಯಕ್ರಮದ ಹೊರತಾದ ಹೆಚ್ಚಿನ ಪ್ರಶ್ನೆಗಳನ್ನು ಪರೀಕ್ಷೆಯಲ್ಲಿ ಕೇಳುವುದು ತಪ್ಪಲ್ಲವೇ; ಎರಡು ವರ್ಷಗಳ ಕಾಲ ಕಷ್ಟಪಟ್ಟು ಓದಿದ ವಿದ್ಯಾರ್ಥಿಗಳಿಗೆ ಸರ್ಕಾರವು ಅನ್ಯಾಯ ಮಾಡಿದಂತಾಗಿಲ್ಲವೇ; ತಪ್ಪು ನಡೆದಿರುವುದು ದೃಢಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ಈ ಅವ್ಯವಸ್ಥೆಗೆ ಮೂಲ ಕಾರಣಗಳೇನು ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿಯೊಂದಿಗೆ ವಿವರ ನೀಡುವುದು)

(ಉ) ತಳ ಸಮುದಾಯ, ರೈತಾಪಿ, ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಉನ್ನತ ವೈದ್ಯಕೀಯ ಹಾಗೂ ತಾಂತ್ರಿಕ ಶಿಕ್ಷಣ ಪಡೆಯಲು ಸಹಕಾರಿಯಾಗಲೆಂದು ಸಿ.ಇ.ಟಿ ಪರೀಕ್ಷೆಯೆಂಬ ವಿಧಾನವನ್ನು ಪ್ರಾರಂಭಿಸಿದ್ದು, ಇತ್ತೀಚಿನ ದಿನಗಳಲ್ಲಿ ಇದರ ನಿರ್ವಹಣೆಯಲ್ಲಿ ಉಂಟಾಗುತ್ತಿರುವ ಲೋಪದೋಷಗಳಿಂದ ಆಸಕ್ತ ವಿದ್ಯಾರ್ಥಿಗಳು ಹಾಗೂ ಪೋಷಕರು ಬಹಳ ಆತಂಕದ ಪರಿಸ್ಥಿತಿಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿರುವ ವನ್ಯಜೀವಿ ಸಂರಕ್ಷಕರ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೫೩೧ (೬೩೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಮಹಾನಗರ ಪಾಲಿಕೆ, ನಗರ ಸಭೆ, ಪುರಸಭೆ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಖಾಯಂ, ಗುತ್ತಿಗೆ ಆಧಾರದ ಮೇಲೆ ವನ್ಯಜೀವಿ ಸಂರಕ್ಷಕರು (ಹಾವು, ಮಂಗ, ಮೊಸಳೆ, ರಣಹದ್ದು, ಬಾವಲಿ ಪಕ್ಷಿ) ಎಷ್ಟು ಜನ ಇದ್ದಾರೆ ; ಇವರಿಗೆ ಎಷ್ಟು ಗೌರವಧನ ನೀಡಲಾಗುತ್ತಿದೆ ; (ವಿವರ ನೀಡುವುದು)

(ಆ) ರಾಜ್ಯದ ಸಾರ್ವಜನಿಕ ಪ್ರದೇಶಗಳಲ್ಲಿ ವನ್ಯಜೀವಿ, (ಹಾವು, ಮಂಗ, ಮೊಸಳೆ, ರಣಹದ್ದು ಪಕ್ಷಿ) ವನ್ಯ ಜೀವಿ ಸಂರಕ್ಷಕರ ಮೇಲೆ ಎಷ್ಟು ದಾಳಿಯಾಗಿದೆ ; ಎಷ್ಟು ಜನ ಮೃತಪಟ್ಟಿದ್ದಾರೆ ; ಎಷ್ಟು ಪ್ರಕರಣ ದಾಖಲಾಗಿದೆ : (ವಿವರ ನೀಡುವುದು)

(ಇ) ವನ್ಯಜೀವಿ ಸಂರಕ್ಷಕರು ಈ ವನ್ಯಜೀವಿಗಳ ಸಂರಕ್ಷಣೆಯ ಸಂದರ್ಭದಲ್ಲಿ ಹಾವು ಕಡಿತ, ಪ್ರಾಣಿ ದಾಳಿಯಿಂದ ಮೃತಪಟ್ಟರೆ, ಖಾಯಂ ಆಗಿ ಅಂಗವಿಕಲತೆ ಹೊಂದಿದ್ದರೆ ಸರ್ಕಾರದಿಂದ ಸಿಗುವ ಸೌಲಭ್ಯಗಳೇನು ; (ವಿವರ ನೀಡುವುದು)

(ಈ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಾದ್ಯಂತ ವನ್ಯಜೀವಿಗಳಿಂದ (ಹಾವು, ಮಂಗ, ಮೊಸಳೆ, ರಣಹದ್ದು, ಬಾವಲಿ ಪಕ್ಷಿ) ಎಷ್ಟು ಸಾರ್ವಜನಿಕರ ಮೇಲೆ ದಾಳಿಯಾಗಿದೆ ; ಎಷ್ಟು ಜನರು ಮರಣ ಹೊಂದಿದ್ದಾರೆ ; ಎಷ್ಟು ಪ್ರಕರಣಗಳು ದಾಖಲಾಗಿವೆ ; (ವಿವರ ನೀಡುವುದು)

(ಉ) ಕಳೆದ ಎರಡು ವರ್ಷಗಳಿಂದ ಹಾವು, ಮಂಗ, ಮೊಸಳೆ, ರಣಹದ್ದು, ಬಾವಲಿ ಪಕ್ಷಿ ಹಾಗೂ ಇನ್ನಿತರೆ ವನ್ಯಜೀವಿಗಳನ್ನು ಸಂರಕ್ಷಿಸಿ ಅರಣ್ಯಕ್ಕೆ ಬಿಡಲಾಗಿದೆ ; ಹಾವುಗಳು ಬಾವಲಿಗಳೂ, ರಣಹದ್ದುಗಳು ಮತ್ತು ಮೊಸಳೆಗಳ ಸಂಖ್ಯೆ ಎಷ್ಟು ; (ಸಂಪೂರ್ಣವಾಗಿ ವಿವರ ನೀಡುವುದು)

(ಊ) ಇಂತಹ ಪ್ರಕರಣಗಳಲ್ಲಿ ಮೃತಪಟ್ಟ ನೌಕರರ ಕುಟುಂಬಗಳಿಗೆ ಸಹಾಯಧನ / ಉದ್ಯೋಗ ನೀಡಲಾಗಿದೆಯೇ ? (ಮಾಹಿತಿ ನೀಡುವುದು)

## ಬಾಗಲಕೋಟೆ ಜಿಲ್ಲೆಯ ಜಮಖಂಡಿಯಲ್ಲಿ ಪ್ರಾರಂಭವಾಗಿರುವ ವಿಶ್ವವಿದ್ಯಾಲಯಕ್ಕೆ ವಿಜಯಪುರ ಜಿಲ್ಲೆಯಲ್ಲಿ ಪದವಿ ಕಾಲೇಜುಗಳನ್ನು ಸಂಯೋಜನೆಗೊಳಿಸುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೫೩೨ (೬೩೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಜಿಲ್ಲೆಯ ಜಮಖಂಡಿಯಲ್ಲಿ ಪ್ರಾರಂಭವಾಗಿರುವ ನೂತನ ವಿಶ್ವ ವಿಶ್ವವಿದ್ಯಾಲಯದೊಂದಿಗೆ ವಿಜಯಪುರ ಜಿಲ್ಲೆಯ ಪದವಿ ಕಾಲೇಜುಗಳನ್ನು ಸಂಯೋಜನೆಗೊಳಪಡಿಸುವ ಚಿಂತನೆ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಸಂಯೋಜನೆಗೆ ಒಳಪಡಿಸಲಾಗುವುದು ; (ವಿವರ ನೀಡುವುದು)

(ಆ) ವಿಜಯಪುರ ಜಿಲ್ಲೆಯಲ್ಲಿ ಪದವಿ ಕಾಲೇಜುಗಳನ್ನು ಹತ್ತಿರದ ಬಾಗಲಕೋಟೆ ಜಿಲ್ಲೆ ಜಮಖಂಡಿಯಲ್ಲಿ ಪ್ರಾರಂಭವಾಗಿರುವ ನೂತನ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಳಿಸದೆ, ದೂರದ (೩೦೦ ಕೀ.ಮೀ) ಬೆಳಗಾವಿಗೆ ಸಂಯೋಜನೆಗೊಳಿಸಲು ಕಾರಣಗಳೇನು ;

(ಇ) ಗಡಿ ಭಾಗದ ಬಡ ವಿದ್ಯಾರ್ಥಿಗಳು ಪದವಿ ಮತ್ತು ಸ್ನಾತ್ತಕೋತ್ತರ ಪದವಿಗಳಿಗೆ ಸಬಂಧಿಸಿದ ಯಾವುದೇ ಪ್ರಮಾಣ ಪತ್ರಗಳನ್ನು ಪಡೆಯಬೇಕೆಂದರೆ ದೂರದ ಬೆಳಗಾವಿಗೆ ಹೋಗಿ ಬರಬೆಕಾದ ಪರಿಸ್ಥಿತಿ ಎದುರುಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು; ಕಾಲೇಜಿನ ಎಲ್ಲಾ ನೌಕರರು ಮತ್ತು ಕಾಲೇಜಿನ ಆಡಳಿತ ಮಂಡಳಿಯುವರಿಗೂ ಸಹ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು ;

(ಈ) ವಿಜಯಪೂರ ಜಿಲ್ಲೆಯಲ್ಲಿನ ಪದವಿ ಕಾಲೇಜುಗಳನ್ನು ಹತ್ತಿರದ ಬಾಗಲಕೋಟೆ ಜಿಲ್ಲೆ ಜಮಖಂಡಿಯಲ್ಲಿ ಪ್ರಾರಂಭವಾಗಿರುವ ನೂತನ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಳಿಸಿದ್ದಲ್ಲಿ ಪದವಿ ಮತ್ತು ಸ್ನಾತ್ತಕೋತ್ತರ ವಿದ್ಯಾರ್ಥಿಗಳ ಕಾಲೇಜಿನ ಎಲ್ಲಾ ನೌಕರರಿಗೆ ಮತ್ತು ಕಾಲೇಜಿನ ಆಡಳಿತ ಮಂಡಳಿಯವರಿಗೆ ಅನುಕೂಲ ಮಾಡಿದಂತಾಗುವುದಿಲ್ಲವೆ; ಈ ನಿಟ್ಟಿನಲ್ಲಿ ಸರ್ಕಾರವು ಚಿಂತನೆ ನಡೆಸಿದೆಯೇ ?

## ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ವಿದ್ಯಾರ್ಥಿಗಳಲ್ಲಿ ಕಲಿಕಾ ಗುಣಮಟ್ಟವನ್ನು ಸುಧಾರಿಸುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೫೩೩ (೬೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಸುಧಾರಣೆ ತರುವ ನಿಟ್ಟಿನಲ್ಲಿ ಜಾರಿಗೊಳಿಸಲಾದ ವೆಬ್ ಕಾಸ್ಟಿಂಗ್ ವ್ಯವಸ್ಥೆಯಿಂದ ಫಲಿತಾಂಶದಲ್ಲಿ ಕುಸಿತ ಕಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಸದರಿ ಫಲಿತಾಂಶ ಕುಸಿತವು ಶಿಕ್ಷಣ ತಜ್ಞರು, ಪಾಲಕರನ್ನು ತಲ್ಲಣಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಪಠ್ಯ ಶಾಲೆಗಳಲ್ಲಿ ಮಕ್ಕಳು ಕನಿಷ್ಠ ಅಂಕಗಳನ್ನು ಪಡೆಯದಿರುವುದು, ರಾಜ್ಯ ಪಠ್ಯಕ್ರಮದಲ್ಲಿ ಸರ್ಕಾರದ ಹೊಣೆಗಾರಿಕೆ ಪ್ರದರ್ಶಿಸುವುದು ಫಲಿತಾಂಶ ಕುಸಿತಕ್ಕೆ ಕಾರಣವಾಗಿದೆಯೇ; ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತೇರ್ಗಡೆಯಾದ ೬.೩೧ ಲಕ್ಷದಲ್ಲಿ ೩.೨೧ ಲಕ್ಷ ಮಕ್ಕಳ ಸರ್ಕಾರದ ಕೃಪಾಂಕದ ಅಂಕಗಳಿಂದ ಉತ್ತೀರ್ಣರಾಗಿರುವುದು ನಿಜವೇ; ಜಾಗತಿಕವಾಗಿ ಸ್ಪರ್ಧಿಸಲು ಮಕ್ಕಳಿಗೆ ಕೇವಲ ಅಂಕಗಳು ಮಾತ್ರವಲ್ಲ ಕೌಶಲ್ಯ ಕೂಡಾ ಮುಖ್ಯ ಎಂಬ ವಿಷಯ ಸರ್ಕಾರಕ್ಕೆ ತಿಳಿದಿಲ್ಲವೆ; ಈ ಕುರಿತು ಸರ್ಕಾರದ ನಿಲುವೇನು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಶಾಲಾ ಶಿಕ್ಷಣದಲ್ಲಿ ಮಕ್ಕಳ ಕಲಿಕಾ ಸಾಮರ್ಥ್ಯ ಹೆಚ್ಚಿಸದಿದ್ದಲ್ಲಿ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಯಲ್ಲಿನ ೩ ವಾರ್ಷಿಕ ಪರೀಕ್ಷೆಗಳೂ ಕೂಡಾ ಪ್ರಯೋಜನಕ್ಕೆ ಬಾರದೇ ಇರುವ ವಿಷಯ ಸರ್ಕಾರದ ಗಮನಕ್ಕೆ ಇದೆಯೇ; ಇದ್ದಲ್ಲಿ, ಸರ್ಕಾರ ಮಕ್ಕಳ ಕಲಿಕಾ ಮಟ್ಟವನ್ನು ಸುಧಾರಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ತೆಗೆದುಕೊಂಡಿದೆ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಕಲಿಕಾ ಗುಣಮಟ್ಟವು ದಿನದಿಂದ ದಿನಕ್ಕೆ ಕುಸಿತವಾಗುತ್ತಿರುವ ಬಗ್ಗೆ ಶಿಕ್ಷಣ ಇಲಾಖೆಯ ಪರದಿಗಳು ಹೇಳಿರುವುದು ನಿಜವೇ; ಕಲಿಕಾ ಗುಣಮಟ್ಟವನ್ನು ಸರಿದೂಗಿಸಬೇಕೆಂಬ ಉದ್ದೇಶದಿಂದಲೇ ೨೦೧೯ರಲ್ಲಿ ಆರ್.ಟಿ.ಇ ಕಾಯ್ದೆಗೆ ತಿದ್ದುಪಡಿ ತಂದು ೫ ಮತ್ತು ೮ನೇ ತರಗತಿ ಮಕ್ಕಳಿಗೆ

ಮೌಲ್ಯಾಂಖನ ನಡೆಸಿ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟ ಮೌಲ್ಯಮಾಪನ ಮಾಡಬೇಕು ಎಂಬ ಆದೇಶವನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಲಾಗುತ್ತಿದೆಯೇ ?

## ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೫೩೪ (೫೯೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಬೋಧಕ ವೃಂದದ ಹುದ್ದೆಗಳ ಅನುಪಾತಕ್ಕೆ ತಕ್ಕಂತೆ ಬೋಧಕೇತರ ವೃಂದದ ಹುದ್ದೆಗಳು ಮಂಜೂರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಇಲಾಖೆಯಲ್ಲಿ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದ ಹಾಗೂ ಹುದ್ದೆವಾರು ಮತ್ತು ಆಯುಕ್ತಾಲಯವಾರು ಮಾಹಿತಿ ನೀಡುವುದು)

(ಆ) ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಬೋಧಕ ಹುದ್ದೆಗಳನ್ನು ಮಂಜೂರು ಮಾಡುವ ಮಾದರಿಯಲ್ಲಿಯೇ ಬೋಧಕೇತರ ಹುದ್ದೆಗಳನ್ನು ಶಾಲೆಗಳಿಗೆ ಮತ್ತು ಕಛೇರಿಗಳಿಗೆ ಮಂಜೂರು ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ; (ವಿವರಿಸುವುದು)

(ಇ) ನೂತನವಾಗಿ ಪ್ರಾರಂಬಿಸಿದ ಕೆ.ಪಿ.ಎಸ್ ಶಾಲೆಗಳಿಗೆ ಬೋಧಕ ಹುದ್ದೆಗಳನ್ನು ಮಂಜೂರು ಮಾಡಿದಂತೆಯೇ ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಆದೇಶದ ಪ್ರತಿ ನೀಡುವುದು ಮತ್ತು ಮಾಡದೇ ಇದ್ದಲ್ಲಿ ಕಾರಣಗಳನ್ನು ತಿಳಿಸುವುದು ?

## ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳ ಬಗ್ಗೆ

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೩೫ (೭೨೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಹಾಗೂ ಸಮುದಾಯದ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೇಂದ್ರಗಳನ್ನು ಮಂಜೂರು ಮಾಡಲು ಇರುವ ನಿಯಮಗಳೇನು ;

(ಇ) ಈ ಕೇಂದ್ರಗಳನ್ನು ಮಂಜೂರು ಮಾಡುವಲ್ಲಿ ಪ್ರಾದೇಶಿಕ ತಾರತಮ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಬಂದಿದ್ದಲ್ಲಿ, ತಾರತಮ್ಯ ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳು ಅತ್ಯಂತ ಕಡಿಮೆ ಪ್ರಮಾಣದಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನಿಯಮಗಳನ್ವಯ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳವುದೇ ; (ವಿವರ ನೀಡುವುದು)

(ಉ) ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಿಗೆ ಮಂಜೂರಾಗಿರುವ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು ; (ಆರೋಗ್ಯ ಕೇಂದ್ರವಾರು. ವೃಂದವಾರು, ಜಿಲ್ಲಾವಾರು ವಿವರ ನೀಡುವುದು)

(ಊ) ಸದರಿ ಕೇಂದ್ರಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಸರ್ಕಾರ ಭರ್ತಿ ಮಾಡುವುದು ಯಾವಾಗ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ, ಖಾಸಗಿ, ಅನುದಾನಿತ, ಅನುದಾನರಹಿತ ಕಿರಿಯ ಪ್ರಾಥಮಿಕ ಹಿರಿಯ ಪ್ರಾಥಮಿಕ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೩೬ (೬೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ, ಖಾಸಗಿ, ಅನುದಾನಿತ, ಅನುದಾನರಹಿತ, ಕಿರಿಯ ಪ್ರಾಥಮಿಕ, ಹಿರಿಯ ಪ್ರಾಥಮಿಕ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಸರ್ಕಾರಿ ಖಾಸಗಿ ಅನುದಾನಿತ, ಅನುದಾನರಹಿತ, ಕಿರಿಯ ಪ್ರಾಥಮಿಕ, ಹಿರಿಯ ಪ್ರಾಥಮಿಕ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಕಾಲೇಜುವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಸರ್ಕಾರವು ಅವುಗಳನ್ನು ಮಂಜೂರು ಮಾಡಲು ಇರುವ ಮಾನದಂಡವೇನು ; ಜನಸಂಖ್ಯೆಗನುಗುಣವಾಗಿ ಸದರಿ ಶಾಲಾ ಕಾಲೇಜುಗಳನ್ನು ಮಂಜೂರು ಮಾಡಲಾಗುತ್ತದೆಯೇ ; (ವಿವರ ನೀಡುವುದು)

(ಈ) ದಕ್ಷಿಣ ಕರ್ನಾಟಕಕ್ಕೆ ಹೋಲಿಸಿದ್ದಲ್ಲಿ, ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸರ್ಕಾರಿ ಶಾಲಾ ಕಾಲೇಜುಗಳ ಸಂಖ್ಯೆ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವಶ್ಯಕತೆಗನುಗುಣವಾಗಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಶಾಲಾ ಕಾಲೇಜುಗಳನ್ನು ಮಂಜೂರು ಮಾಡಲು ಸಾಧ್ಯವಿಲ್ಲವೇ ; ಸಾಧ್ಯವಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು ?

## ಕರ್ನಾಟಕ ರಾಜ್ಯದಲ್ಲಿರುವ ಸರ್ಕಾರಿ ವಸತಿ ಪದವಿ ಪೂರ್ವ ಕಾಲೇಜುಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೭ (೬೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ವಸತಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; ಸದರಿ ಕಾಲೇಜುಗಳನ್ನು ಯಾವಾಗ ಮಂಜೂರು ಮಾಡಲಾಗಿದೆ ; ಈ ಕಾಲೇಜುಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಕಾಲೇಜುವಾರು ವಿವರ ನೀಡುವುದು)

(ಆ) ಸದರಿ ಕಾಲೇಜುಗಳಲ್ಲಿರುವ ಮತ್ತು ವಸತಿ ನಿಲಯಗಳಲ್ಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ಪ್ರತ್ಯೇಕ ವಿವರ ನೀಡುವುದು)

(ಇ) ಸದರಿ ಕಾಲೇಜುಗಳಲ್ಲಿ ಇರುವ ವಸತಿ ನಿಲಯಗಳನ್ನು ಯಾರು ನಿರ್ವಹಣೆ ಮಾಡುತ್ತಾರೆ, ನಿರ್ವಹಣಾ ವೆಚ್ಚ ಭರಿಸುವವರು ಯಾರು ; ವಿದ್ಯಾರ್ಥಿಗಳಿಂದ ವಸತಿ ನಿಲಯದಲ್ಲಿ ವಾಸ್ತವ್ಯವಿರಲು ಶುಲ್ಕ ಪಡೆಯಲಾಗುತ್ತಿದೆಯೇ ; ಹಾಗಿದ್ದಲ್ಲಿ, ನಿಗಧಿಪಡಿಸಲಾಗಿರುವ ಶುಲ್ಕ ಎಷ್ಟು ; (ವಿವರ ನೀಡುವುದು)

(ಈ) ಕೆಲವು ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ವಸತಿ ನಿಲಯಗಳಲ್ಲಿ ಪ್ರವೇಶ ಪಡೆಯಲು ಊಟದ ಶುಲ್ಕವನ್ನು ಸಹ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಶುಲ್ಕವು ವಿದ್ಯಾರ್ಥಿಗಳಿಗೆ ಹೊರೆಯಾಗುವುದಿಲ್ಲವೇ ? (ವಿವರ ನೀಡುವುದು)

(ಉ) ವಸತಿ ನಿಲಯದಲ್ಲಿ ಇರುವ ವಿದ್ಯಾರ್ಥಿಗಳಿಂದ ಶುಲ್ಕ ಪಡೆಯುವುದರಿಂದ ಸರ್ಕಾರ ವಸತಿ ಸಹಿತ ಕಾಲೇಜು ಪ್ರಾರಂಭಿಸುವ ಉದ್ದೇಶಕ್ಕೆ ವಿರುದ್ಧವಾಗುವುದಿಲ್ಲವೇ ; ಸದರಿ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳು ಉಚಿತವಾಗಿ ವಾಸ್ತವ್ಯ ಮತ್ತು ಊಟದ ವ್ಯವಸ್ಥೆ ಪಡೆಯುವಂತೆ ಸರ್ಕಾರ ಕ್ರಮ ಜರುಗಿಸಲು ಸಾಧ್ಯವಿಲ್ಲವೇ ; ವಿದ್ಯಾರ್ಥಿಗಳಿಗೆ ತೊಂದರೆಯಾಗಬಾರದೆಂದು ಸಾವಿರಾರು ವಸತಿ ನಿಲಯಗಳನ್ನು ಮಂಜೂರು ಮಾಡಿರುವ ಸರ್ಕಾರ ವಸತಿ ಕಾಲೇಜುಗಳಲ್ಲಿ ಇರುವ ವಸತಿ ನಿಲಯಗಳನ್ನು ಸಹ ನಿರ್ವಹಣೆ ಮಾಡಲು ಸಾಧ್ಯವಿಲ್ಲವೇ ; ಸಾಧ್ಯವಿದ್ದಲ್ಲಿ, ಸರ್ಕಾರದ ನಿಲುವೇನು ?

## ರಾಜ್ಯದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳ ಬಗ್ಗೆ

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೩೮ (೬೨೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸಮುದಾಯ ಆರೋಗ್ಯ ಕೇಂದ್ರಗಳು, ೧೦೦ ಬೆಡ್ ಆಸ್ಪತ್ರೆಗಳು, ಮಹಿಳಾ ಸರ್ಕಾರಿ ಆಸ್ಪತೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಆರೋಗ್ಯ ಕೇಂದ್ರಗಳು/ಆಸ್ಪತ್ರೆಗಳನ್ನು ಯಾವ ಆಧಾರದಲ್ಲಿ ಮಂಜೂರು ಮಾಡಲಾಗುತ್ತಿದೆ ; ಮಂಜೂರಾತಿಗೆ ಇರುವ ನಿಯಮಗಳೇನು ; (ವಿವರ ನೀಡುವುದು)

(ಇ) ಕಲ್ಯಾಣ ಕರ್ನಾಟಕ ಪ್ರದೇಶದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳು ಮಹತ್ವಾಕಾಂಕ್ಷಿ ಜಿಲ್ಲೆಗಳ ವ್ಯಾಪ್ತಿಯಲ್ಲಿದ್ದು, ಸದರಿ ಜಿಲ್ಲೆಗಳು ಆರೋಗ್ಯ ಸೇವೆಯಿಂದ ವಂಚಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಜಿಲ್ಲೆಯಲ್ಲಿ ಆರೋಗ್ಯ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರದ ಯೋಜನೆಗಳಾವುವು ; (ವಿವರ ನೀಡುವುದು)

(ಈ) ದಕ್ಷಿಣ ಕರ್ನಾಟಕಕ್ಕೆ ಹೋಲಿಸಿದ್ದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು, ೧೦೦ ಬೆಡ್ ಆಸ್ಪತ್ರೆಗಳು, ಮಹಿಳಾ ಮಕ್ಕಳ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವಶ್ಯಕತೆಗನುಗುಣವಾಗಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಅವುಗಳನ್ನು ಮಂಜೂರು ಮಾಡಲು ಸಾಧ್ಯವಿಲ್ಲವೇ ; ಸಾಧ್ಯವಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು ?

## ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳ ಉನ್ನತ ಶಿಕ್ಷಣ ಪ್ರವೇಶ ಪಡೆಯುವ (ಜಿಇಆರ್) ವಿದ್ಯಾರ್ಥಿಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೩೩ (೬೨೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳ ಉನ್ನತ ಶಿಕ್ಷಣ ಪ್ರವೇಶ ಪಡೆಯುವ (ಜಿಇಆರ್) ವಿದ್ಯಾರ್ಥಿಗಳ ಪ್ರಮಾಣವೆಷ್ಟು ; ರಾಜ್ಯದ ಸರಾಸರಿಗಿಂತ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳ ಜಿಇಆರ್ ಪ್ರಮಾಣ ಹೆಚ್ಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಸದರಿ ಜಿಲ್ಲೆಗಳ ವಿದ್ಯಾರ್ಥಿಗಳ ಉನ್ನತ ಶಿಕ್ಷಣ ಪಡೆಯುವಂತೆ ಪ್ರೇರಣೆ ನೀಡಲು ಆರ್ಥಿಕ ಉತ್ತೇಜನದಂತಹ ಕ್ರಮ ಜರುಗಿಸಲು ಸರ್ಕಾರ ಮುಂದಾಗುವುದೆ ; (ವಿವರ ನೀಡುವುದು)

(ಈ) ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯಲು ಉತ್ತೇಜಿಸಲು ಆ ಪ್ರದೇಶದ ವಿಶ್ವವಿದ್ಯಾಲಯಗಳು ಶುಲ್ಕ ರಹಿತ ಶಿಕ್ಷಣ ನೀಡುವಂತೆ ಕ್ರಮ ವಹಿಸಲು ಸರ್ಕಾರಕ್ಕೆ ತಗಲುವ ಆರ್ಥಿಕ ವೆಚ್ಚ ಎಷ್ಟು ; ಸರ್ಕಾರ ಸದರಿ ಆರ್ಥಿಕ ವೆಚ್ಚ ಭರಿಸಲು ಸಾಧ್ಯವಿಲ್ಲವೆ ; ಇದ್ದಲ್ಲಿ, ಯಾವಾಗ ಕ್ರಮ ವಹಿಸಲಾಗುವುದು ?

## ರಾಜ್ಯದ ಎಲ್ಲಾ ಮೂಲಗಳಿಂದ ಉತ್ಪಾದಿಸುವ ವಿದ್ಯುತ್ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೦ (೬೮೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಲ್ಲಾ ಮೂಲಗಳಿಂದ ಉತ್ಪಾದನೆಯಾಗುವ ವಿದ್ಯುತ್ ಎಷ್ಟು ಹಾಗೂ ರಾಜ್ಯದಲ್ಲಿ ಬೇಡಿಕೆ ಇರುವ ವಿದ್ಯುತ್ ಪ್ರಮಾಣ ಎಷ್ಟು; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಖಾಸಗಿ ಮೂಲಗಳಿಂದ ಉತ್ಪಾದಿಸುವ ವಿದ್ಯುತ್ ಎಷ್ಟು; ಮತ್ತು ಯಾವ ದರದಲ್ಲಿ ವಿದ್ಯುತ್‌ನ್ನು ಸರ್ಕಾರ ಖರೀದಿಸುತ್ತದೆ ; ರಾಜ್ಯದಲ್ಲಿ ವಿದ್ಯುತ್ ಬಳಕೆಯನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ೨೪ ಗಂಟೆ ವಿದ್ಯುತ್ ಒದಗಿಸಲು ಸರ್ಕಾರದ ಮುಂದಿರುವ ಸವಾಲುಗಳೇನು ; ಅದನ್ನು ಕಾರ್ಯಗತಗೊಳಿಸಲು ಕ್ರಮ ಕೈಗೊಳ್ಳಲಾಗಿದೆಯೇ ; ರಾಜ್ಯ ಸರ್ಕಾರವೇ ವಿದ್ಯುತ್ ಪೂರೈಕೆ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯದಲ್ಲಿ ವಿದ್ಯುತ್ ಪ್ರಸರಣವನ್ನು ಖಾಸಗಿಯವರಿಗೆ ನೀಡಲು ಚಿಂತನೆ ನಡೆದಿದೆಯೇ ; ರಾಜ್ಯದಲ್ಲಿ ಯಾವ ಯಾವ ಯೋಜನೆಗಳಿಗೆ ಉಚಿತ ವಿದ್ಯುತ್ ಪೂರೈಸಲಾಗಿದೆ ; ಇದಕ್ಕೆ ತಗಲುವ ವೆಚ್ಚ ಎಷ್ಟು ? (ವಿವರ ನೀಡುವುದು)

## ೨೦೨೧ ರಲ್ಲಿ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೧ (೬೮೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೧ ರಲ್ಲಿ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗಿದೆಯೇ ; ನೀಡದಿದ್ದಲ್ಲಿ, ಕಾರಣವೇನು ; (ವಿವರ ನೀಡುವುದು)

(ಆ) ಇದೇ ಸಂದರ್ಭದಲ್ಲಿ ಆಯ್ಕೆಯಾದ ಕೆಪಿಟಿಸಿಎಲ್, ಪಿಡಬ್ಲೂಡಿ ಇಲಾಖೆ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗಿದ್ದು, ಪ್ರಾಧ್ಯಾಪಕರಿಗೆ ಮಾತ್ರ ನೀಡದಿರುವುದು ಸರಿಯೇ ; (ವಿವರ ನೀಡುವುದು)

(ಇ) ೧೨೦೮ ಪ್ರಾಧ್ಯಾಪಕರ ಅಭ್ಯರ್ಥಿಗಳಿಗೆ ನ್ಯಾಯವನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ೨೦೨೧ ರಿಂದ ಉದ್ಯೋಗ ವಿಲ್ಲದೆ ಅವರ ಜೀವನ ಕ್ರಮದಲ್ಲಿ ಉಂಟಾದ ತೊಂದರೆಗಳ ಬಗ್ಗೆ ಸರ್ಕಾರ ಗವುನ ಹರಿಸಲಾಗಿದೆಯೇ ? (ವಿವರ ನೀಡುವುದು)

## ಕಸ್ತೂರಿ ರಂಗನ್ ವರದಿ ಜಾರಿಗೊಳಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೨ (೬೭೮) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಸ್ತೂರಿ ರಂಗನ್ ವರದಿಯನ್ನು ಜಾರಿಗೊಳಿಸಲು ಕೇಂದ್ರ ಸರ್ಕಾರದ ನಿಧಾರ್ರದ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಕಸ್ತೂರಿ ರಂಗನ್ ವರದಿಯನ್ನು ಕರಾವಳಿ, ಮಲೆನಾಡು ಪ್ರದೇಶಗಳಲ್ಲಿ ಜಾರಿಗೊಳಿಸಿದ್ದಲ್ಲಿ ಉಂಟಾದ ಪರಿಣಾಮಗಳ ಬಗ್ಗೆ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕಸ್ತೂರಿ ರಂಗನ್ ವರದಿಯನ್ನು ಜಾರಿಗೊಳಿಸಿದ್ದಲ್ಲಿ ರಾಜ್ಯದ ಅಭಿವೃದ್ಧಿ ಕುಂಠಿತಗೊಳ್ಳುವುದು ಮತ್ತು ಜನರಿಗೆ /ಕೃಷಿಕರಿಗೆ ಉಂಟಾಗುವ ಪರಿಣಾಮಗಳ ಬಗ್ಗೆ ಸರ್ಕಾರ ಗಮನಿಸಲಾಗಿದೆಯೇ ; ಈ ಬಗ್ಗೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಕಸ್ತೂರಿ ರಂಗನ್ ವರದಿಯನ್ನು ಜಾರಿಗೊಳಿಸಿದ್ದಲ್ಲಿ, ಕರ್ನಾಟಕದಲ್ಲಿ ನಿರ್ವಸಿತರಾಗುವ ಜನರ ಸಂಖ್ಯೆ ಎಷ್ಟು; ಅವರಿಗೆ ಪುನರ್ ವಸತಿ ಕಲ್ಪಿಸಲು ಚಿಂತಿಸಲಾಗಿದೆಯೇ ; (ವಿವರ ನೀಡುವುದು)

(ಉ) ಕರ್ನಾಟಕದ ಕೊಡಗು, ದಕ್ಷಿಣ ಕನ್ನಡ, ಉತ್ತರ ಕನ್ನಡದಲ್ಲಿರುವ ಕೃಷಿಕರಿಗೆ ಪ್ರವಾಸೋದ್ಯಮಕ್ಕೆ ದೊಡ್ಡಮಟ್ಟದ ತೊಂದರೆ ಉಂಟಾಗಲಿದ್ದು, ಈ ಬಗ್ಗೆ ಇಲಾಖೆ ಅಧ್ಯಯನ ನಡೆಸಿದೆಯೇ ? (ವಿವರ ನೀಡುವುದು)

## ಒಂದನೇ ತರಗತಿಯಿಂದ ಹೈಯರ್ ಸೆಕೆಂಡರಿ ವಿದ್ಯಾರ್ಥಿಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೩ (೬೭೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಒಂದನೇಯ ತರಗತಿಯಿಂದ ಹೈಯರ್ ಸೆಕೆಂಡರಿವರೆಗೆ ಕನ್ನಡ ಮಾಧ್ಯಮದಲ್ಲಿ ಓದಿದ ಕಾಸರಗೋಡಿನ ವಿದ್ಯಾರ್ಥಿಗಳಿಗೆ ಕನಾಟಕದ ಉನ್ನತ ಶಿಕ್ಷಣ (ಸಿಇಟಿ)ದಲ್ಲಿ ಮಾತೃ ಭಾಷೆ ಕೊಂಕಣಿ ಭಾಷೆ ಎಂಬ ಕಾರಣಕ್ಕಾಗಿ ಪ್ರವೇಶ ನಿರಾಕರಿಸಿರುವುದು ನಿಜವೇ ; (ವಿವರ ನೀಡುವುದು)

(ಆ) ಗಡಿನಾಡಿನಲ್ಲಿ ಕನ್ನಡ ಮಾಧ್ಯದಲ್ಲಿ ಶಿಕ್ಷಣ ಪಡೆದ ವಿದ್ಯಾರ್ಥಿಗಳಿಗೆ ಕೊಂಕಣಿ ಭಾಷೆ "ಮಾತೃ ಭಾಷೆ" ಎಂಬ ಕಾರಣಕ್ಕಾಗಿ ನಿರಾಕರಿಸುವುದು ಸರಿಯೇ ; ಈ ಬಗ್ಗೆ ಸರ್ಕಾರದ ಚಿಂತನೆಯೇನು ;

(ಇ) ಅವಕಾಶ ವಂಚಿತರಾದ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಲು ಮತ್ತು ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) KCET Eligility Criteria -2024 ರಲ್ಲಿ ಮಾತೃ ಭಾಷೆ ಕನ್ನಡ, ತುಳು ಮತ್ತು ಕೊಡವ ಎಂದು ಮಾತ್ರ ನಮೂದಿಸಿದ್ದು, ಕ್ರೈಸ್ತರು ಕೊಂಕಣಿ ಭಾಷೆ ಮಾಡನಾಡುವವರು ಈ ಪ್ರದೇಶದಲ್ಲಿ ಸುಮಾರು ೪೦ ಸಾವಿರಕ್ಕೂ ಅಧಿಕ ಮಂದಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕನ್ನಡ ಮಾಧ್ಯಮ ಶಾಲೆಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೪ (೬೮೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎಷ್ಟು ಕನ್ನಡ ಮಾಧ್ಯಮ ಶಾಲೆಗಳು ೨೦೨೧ ರಿಂದ ೨೦೨೪ರವರೆಗೆ ವಿದ್ಯಾರ್ಥಿಗಳಿಲ್ಲದೆ ಮುಚ್ಚಲ್ಪಟ್ಟಿದೆ ; ಈ ಮುಚ್ಚಲ್ಪಟ್ಟ ಶಾಲೆಗಳ ಆಸ್ತಿಯನ್ನು ಯಾರು ಉಸ್ತುವಾರಿ ನೋಡಿಕೊಳ್ಳುವರು ; (ವಿವರ ನೀಡುವುದು)

(ಆ) ಮುಚ್ಚಲ್ಪಟ್ಟ ಶಾಲೆಗಳ ಆವರಣಗಳಲ್ಲಿ ಸಾರ್ವಜನಿಕರು ಅಕ್ರಮ ವ್ಯವಹಾರಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಮುಚ್ಚಲ್ಪಟ್ಟ ಶಾಲೆಗಳ ಆಸ್ತಿಯನ್ನು ಯಾವ ಉದ್ದೇಶಕ್ಕಾಗಿ ಕಾಯ್ದಿರಿಸಲು ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಹಾಜರಾತಿಯನ್ನು ಹೆಚ್ಚಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

(ಉ) ಶಾಲೆಗಳಲ್ಲಿ ವಿದ್ಯುತ್‌ನ್ನು ಉಚಿತವಾಗಿ ನೀಡುವುದರಿಂದ ಇಲಾಖೆಗೆ ಬರುವ ಹೆಚ್ಚುವರಿ ವೆಚ್ಚ ಎಷ್ಟು? (ವಿವರ ನೀಡುವುದು)

## ಇಂಧನ ಇಲಾಖೆ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೫ (೭೩೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕವಿಪ್ರನಿನಿ ಮತ್ತು ಇತರ ಐದು ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಯಾವ ಕಾರ್ಯಭಾರ ನಿಯಮ (Work Load Norms) ಪ್ರಸ್ತುತ ಚಾಲ್ತಿಯಲ್ಲಿದೆ ; (ವಿವರಗಳನ್ನು ನೀಡುವುದು)

(ಆ) ರಾಜ್ಯದ ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳ ವಿದ್ಯುತ್ ಸ್ಥಾವರಗಳ ಮೀಟರ್ ರೀಡಿಂಗ್ ಲೆಕ್ಕ ಖಾತೆಗಳ ನಿರ್ವಹಣೆಗಾಗಿ ನಗರ ಪ್ರದೇಶಗಳಲ್ಲಿ ನೇಮಕಗೊಂಡಿರುವ ; (ಒಟ್ಟು ಕಂದಾಯ ನಿರ್ವಹಣೆ)TRM Agency ಯ ಜಿಲ್ಲಾವಾರು ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ಸ್ಥಾವರಗಳ ಮಾಪಕ ಓದುವಿಕೆಗಾಗಿ ನಿಯೋಜನೆಗೊಂಡು ಕಾರ್ಯನಿರ್ವಹಿಸುತ್ತಿರುವ ಮೀಟರ್ ರೀಡ್/ಮಾಪಕ ಓದುಗ/ಗ್ರಾಮ ವಿದ್ಯುತ್ ಪ್ರತಿನಿಧಿಗಳ ಸಂಖ್ಯೆ ಎಷ್ಟು; (ವಿವರಗಳನ್ನು ನೀಡುವುದು)

(ಈ) ಸದರಿ ವಿದ್ಯುತ್ ಸ್ಥಾವರಗಳ ಖಾತೆಗಳ ಮತ್ತು ಲೆಕ್ಕಗಳ ನಿರ್ವಹಣೆಗಾಗಿ ನಿಯೋಜಿಸಲಾದ Total Revenue Management Agency ಯಾವುದು ; ನಗರ ಪ್ರದೇಶ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೆಲಸ ಮಾಡುತ್ತಿರುವ ಏಜನ್ಸಿಗಳಾವುದು ; (ವಿವರಗಳನ್ನು ಜಿಲ್ಲಾವಾರು ನೀಡುವುದು)

(ಉ) Total Revenue Managementಗಾಗಿ ವಿದ್ಯುತ್ ಸರಬರಾಜು ಕಂಪನಿಗಳ ಪೈಕಿ ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯಲ್ಲಿ ನೇಮಕವಾಗಿರುವ ಏಜೆನ್ಸಿಗಳು ನಿರ್ವಹಿಸುತ್ತಿರುವ ಲೆಕ್ಕ ಖಾತೆಗಳಿಗೆ ಪ್ರತಿ ತಿಂಗಳು ಉಪ ವಿಭಾಗವಾರು ನಿಯೋಜಿಸಿರುವ ಮೀಟರ್ ರೀಡರ್‌ಗಳು ಪ್ರತಿ ತಿಂಗಳು ಯಾವ ದಿನಾಂಕದಿಂದ ಯಾವ ದಿನಾಂಕದವರೆಗೆ ಸಂಪೂರ್ಣ ಮೀಟರ್ ರೀಡಿಂಗ್ ಪ್ರಕ್ರಿಯೆಯು ಮುಕ್ತಾಯಗೊಳ್ಳುವುದು ;

(ಊ) Work Load Norms ಪ್ರಕಾರ ಒಬ್ಬ ಮಾಪಕ ಓದುಗ ಎಷ್ಟು ವಿದ್ಯುತ್ ಸ್ಥಾವರಗಳ ಮಾಪಕ ಓದುವಿಕೆಯನ್ನು ಒಂದು ತಿಂಗಳಲ್ಲಿ ಮುಕ್ತಾಯಗೊಳಿಸಬೇಕಾಗಿರುತ್ತದೆ ; (ವಿವರವಾದ ಮಾಹಿತಿ ನೀಡುವುದು)

(ಋ) Work Load Norms ಪ್ರಕಾರ ಹುದ್ದೆಗಳು ಮಂಜೂರಾಗಿವೆಯೇ ; ಪ್ರಸ್ತುತ ಎಷ್ಟು ಹುದ್ದೆಗಳ ಕೊರತೆ ಇದೆ ; (ವಿವರವಾದ ಮಾಹಿತಿ ನೀಡುವುದು)

(ಎ) ಮಾಪಕ ಓದುಗ (ಮೀಟರ್ ರೀಡ್‌ರ್) ಗಳ ಸಂಖ್ಯೆ ವಿದ್ಯುತ್ ಸ್ಥಾವರಗಳ ಸಂಖ್ಯೆಗೆ ಅನುಗುಣವಾಗಿದೆಯೇ ; ಇಲ್ಲವಾದಲ್ಲಿ, ಯಾವ ಬದಲಿ ವ್ಯವಸ್ಥೆಯಿಂದ ಸ್ಥಾವರಗಳ ಮಾಪನ ಕಾರ್ಯ ಜರುಗುತ್ತಿದೆ ; ಮೀಟರ್ ರೀಡ್ ಕೆಲಸಕ್ಕಾಗಿ ಮಾಡಲಾದ ಬದಲಿ ವ್ಯವಸ್ಥೆಯಲ್ಲಿ ಒಟ್ಟು ಎಷ್ಟು ಜನ ಇಲಾಖಾ ಸಿಬ್ಬಂದಿಗಳು ಕಾರ್ಯ ನಿರತರಾಗಿದ್ದಾರೆ ? (ವಿವರವಾದ ಮಾಹಿತಿ ನೀಡುವುದು)

## ವೈದ್ಯಕೀಯ ಶಿಕ್ಷಣದ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೬ (೬೬೬) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಶೈಕ್ಷಣಿಕ ಸಾಲಿನಲ್ಲಿ ಎಷ್ಟು ವೈದ್ಯಕೀಯ ಸೀಟುಗಳು ಲಭ್ಯವಿರುತ್ತವೆ ; ಇದರಲ್ಲಿ ಎನ್.ಆರ್.ಐ ಸೀಟುಗಳೆಷ್ಟು; ನೀಟ್ ಪರೀಕ್ಷೆಯ ಮೂಲಕ ತುಂಬಬಹುದಾದ ಸೀಟುಗಳೆಷ್ಟು; ಆಡಳಿತ ಮಂಡಳಿಯ ಸೀಟುಗಳೆಷ್ಟು; ಸರ್ಕಾರಿ ಸೀಟುಗಳೆಷ್ಟು; (ಕಾಲೇಜುವಾರು ವಿವರ ನೀಡುವುದು)

(ಆ) ೨೦೨೩-೨೪ನೇ ಸಾಲಿನಲ್ಲಿ ಸ್ನಾತಕೋತ್ತರ ವೈದ್ಯಕೀಯ ಪ್ರವೇಶಕ್ಕಾಗಿ ಕೆ.ಇ.ಎ ವತಿಯಿಂದ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿರುವ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣಕ್ಕಾಗಿ ಪ್ರವೇಶಾವಕಾಶ ದೊರೆಯಲಿಲ್ಲ ; ಇದರಲ್ಲಿ ರಾಜ್ಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ೨೦೨೩-೨೪ನೇ ಸಾಲಿನಲ್ಲಿ ಸಾತ್ನಕೋತ್ತರ ವೈದ್ಯಕೀಯ ಪ್ರವೇಶಕ್ಕಾಗಿ ಕೆಇಎ ವತಿಯಿಂದ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿರುವ ಅನ್ಯ ರಾಜ್ಯಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಪ್ರವೇಶಾವಕಾಶ ದೊರೆತಿದೆ ;

(ಈ) ರಾಜ್ಯದಲ್ಲಿ ಸ್ನಾತಕೋತ್ತರ ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚು ಇರುವುದರಿಂದ ಪೂರೈಕೆ ಮತ್ತು ಬೇಡಿಕೆಯ ನಡುವೆ ಅಗಾಧವಾದ ಅಂತರವಿರುವುದರಿಂದ ಸ್ನಾತಕೋತ್ತರ ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶದಲ್ಲಿ ಅಕ್ರಮ ಅವ್ಯವಹಾರಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರವು ವೈದ್ಯಕೀಯ ಸೀಟುಗಳ ಸಂಖ್ಯೆ ಹೆಚ್ಚಿಸಲು ಯಾವ ಕ್ರಮ ಕೈಗೊಂಡಿದೆ ?

## ವೈದ್ಯಕೀಯ ಶಿಕ್ಷಣದ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೭ (೬೬೭) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ವೈದ್ಯಕೀಯ ಶಿಕ್ಷಣ ಕಾಲೇಜುಗಳಲ್ಲಿ ಮಂಜೂರಾದ ಒಟ್ಟು ಉಪನ್ಯಾಸಕರ ಸಂಖ್ಯೆ ಎಷ್ಟು ; ಅದರಲ್ಲಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು ; (ಕಾಲೇಜುವಾರು ವಿವರ ನೀಡುವುದು)

(ಆ) ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಇರಬೇಕಾದ ಕನಿಷ್ಠ ಮೂಲಭೂತ ಸೌಕರ್ಯಗಳಾವುವು ;

(ಇ) ಕಳೆದ ೫ ವರ್ಷಗಳಲ್ಲಿ ಕನಿಷ್ಠ ಮೂಲಭೂತ ಸೌಕರ್ಯಗಳಿಲ್ಲವೆಂಬ ಕಾರಣಕ್ಕಾಗಿ ಎಷ್ಟು ಮೆಡಿಕಲ್ ಕಾಲೇಜುಗಳಿಗೆ ವಿದ್ಯಾರ್ಥಿಗಳ ಪ್ರವೇಶಾವಕಾಶವನ್ನು ತಡೆಹಿಡಿಯಲಾಗಿದೆ ; ಅವು ಯಾವುವು ?

## ಅರಣ್ಯ ಇಲಾಖೆಯಲ್ಲಿ ಮುಂಬಡ್ತಿ ನೀಡುವ ಬಗ್ಗೆ

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೮ (೭೩೭) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಣ್ಯ ಇಲಾಖೆಯಲ್ಲಿ ದಿನಾಂಕ ೨೪.೦೨.೧೯೯೪ ರವರೆಗೆ ಚಾಲ್ತಿಯಲ್ಲಿದ್ದ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿ. ೧೯೭೭ರ ನಿಯಮ ೧೭(ಸಿ)ರನ್ವಯ ನೇರ ನೇಮಕಾತಿ ಹುದ್ದೆಗಳ ಎದುರಾಗಿ ತಾತ್ಕಾಲಿಕವಾಗಿ ದ್ವಿತೀಯ ದರ್ಜೆ ಸಹಾಯಕ ವೃಂದದಿಂದ ಪ್ರಥಮ ದರ್ಜೆ ಸಹಾಯಕ ವೃಂದಕ್ಕೆ ಮುಂಬಡ್ತಿ ನೀಡಿ ಇವರನ್ನು ಪ್ರಥಮ ದರ್ಜೆ ಸಹಾಯಕ ವೃಂದದ ಜೇಷ್ಠತಾ ಪಟ್ಟಿಯಲ್ಲಿ ಸೇರ್ಪಡೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನಿಯಮ ೧೭(ಸಿ)ರನ್ವಯ ಎಷ್ಟು ದ್ವಿತೀಯ ದರ್ಜೆ ಸಹಾಯಕರಿಗೆ ಮುಂಬಡ್ತಿ ನೀಡಲಾಗಿದೆ ;

(ಆ) ಪ್ರಥಮ ದರ್ಜೆ ಸಹಾಯಕ ವೃಂದದ ಹುದ್ದೆಗಳಿಗೆ ೧೯೯೪ರ ಪೂರ್ವದಲ್ಲಿ "Promotion on purely temporary

basis"ಎಂದು ದ್ವಿತೀಯ ದರ್ಜೆ ಸಹಾಯಕರಿಗೆ ಮುಂಬಡ್ತಿ ನೀಡಿ ಇವರನ್ನು ಪ್ರಥಮ ದರ್ಜೆ ಸಹಾಯಕ ವೃಂದದ ಜೇಷ್ಠತಾ ಪಟ್ಟಿಯಲ್ಲಿ ಸೇರ್ಪಡೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ೧೯೯೪ ರ ಪೂರ್ವದಲ್ಲಿ "Promotion on purely temporary basis" ಎಂದು ಎಷ್ಟು ದ್ವಿತೀಯ ದರ್ಜೆ ಸಹಾಯಕರಿಗೆ ಮುಂಬಡ್ತಿ ನೀಡಲಾಗಿದೆ ;

(ಇ) ದ್ವಿತೀಯ ದರ್ಜೆ ಸಹಾಯಕರಿಗೆ ೧೯೯೪ ರ ಪೂರ್ವದಲ್ಲಿ ಪ್ರಥಮ ದರ್ಜೆ ಸಹಾಯಕ ವೃಂದಕ್ಕೆ "Promotion on purely temporary basis" ಎಂದು ಮುಂಬಡ್ತಿಯನ್ನು ಯಾವ ನಿಯಮಗಳಡಿ ನೀಡಲಾಗಿದೆ ;

(ಈ) ೧೯೯೪ರ ಪೂರ್ವದಲ್ಲಿ "Promotion on purely temporary basis"ಎಂದು ಮುಂಬಡ್ತಿ ಹೊಂದಿರುವ ನೌಕರರನ್ನು ಹಾಗೂ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿ, ೧೯೭೭ ರ ನಿಯಮ ೧೭(ಸಿ)ರನ್ವಯ ಮುಂಬಡ್ತಿ ಹೊಂದಿರುವ ನೌಕರರನ್ನು ಜೇಷ್ಠತೆಗೆ ಪರಿಗಣಿಸಲು ಕರ್ನಾಟಕ ಸಿವಿಲ್ ಸೇವಾ (ಜೇಷ್ಠತೆ) ನಿಯಮಾವಳಿ, ೧೯೫೭ರ ಯಾವ ನಿಯಮಗಳಡಿ ಅವಕಾಶ ಕಲ್ಪಿಸಲಾಗಿದೆ ಸಂಪೂರ್ಣ ಮಾಹಿತಿ ನೀಡುವುದು ?

## ವನ್ಯ ಜೀವಿ ಸಂರಕ್ಷಕರು ಮತ್ತು ವನ್ಯ ಜೀವಿಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೪೯ (೬೬೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಖಾಯಂ ಗುತ್ತಿಗೆ ಆಧಾರದ ಮೇಲೆ ವನ್ಯಜೀವಿ ಸಂರಕ್ಷಕರು (ಹಾವು, ಮಂಗ, ಮೊಸಳೆ, ರಣಹದ್ದು, ಬಾವಲಿ ಪಕ್ಷಿ) ಎಷ್ಟು ಜನ ಇದ್ದಾರೆ; ಎಷ್ಟು ಗೌರವಧನ ನೀಡಲಾಗುತ್ತಿದೆ; (ವಿವರ ನೀಡುವುದು)

(ಆ) ರಾಜ್ಯದ ಸಾರ್ವಜನಿಕ ಪ್ರದೇಶಗಳಲ್ಲಿ ವನ್ಯಜೀವಿ (ಹಾವು, ಮಂಗ, ಮೊಸಳೆ, ರಣಹದ್ದು, ಬಾವಲಿ ಪಕ್ಷಿ) ವನ್ಯಜೀವಿ ಸಂರಕ್ಷಕರ ಮೇಲೆ ಎಷ್ಟು ದಾಳಿಯಾಗಿದೆ ; ಎಷ್ಟು ಜನ ಮೃತಪಟ್ಟಿದ್ದಾರೆ; ಎಷ್ಟು ಪ್ರಕರಣ ದಾಖಲಾಗಿದೆ ; (ವಿವರ ನೀಡುವುದು)

(ಇ) ವನ್ಯಜೀವಿ ಸಂರಕ್ಷಕರು ಈ ವನ್ಯಜೀವಿಗಳ ಸಂರಕ್ಷಣೆಯ ಸಂದರ್ಭದಲ್ಲಿ ಹಾವು ಕಡಿತ ಪ್ರಾಣಿ ದಾಳಿಯಿಂದ ಮೃತಪಟ್ಟರೆ ಖಾಯಂ ಆಗಿ ಅಂಗವಿಕಲತೆ ಹೊಂದಿದರೆ ಸರ್ಕಾರದಿಂದ ಸಿಗುವ ಸೌಲಭ್ಯಗಳೇನು ; (ವಿವರ ನೀಡುವುದು)

(ಈ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಾದ್ಯಂತ ವನ್ಯಜೀವಿಗಳಿಂದ (ಹಾವು, ಮಂಗ, ಮೊಸಳೆ, ರಣಹದ್ದು, ಬಾವಲಿ ಪಕ್ಷಿ) ಎಷ್ಟು ಸಾರ್ವಜನಿಕರ ಮೇಲೆ ದಾಳಿಯಾಗಿವೆ ಎಷ್ಟು ಜನರು ಮರಣ ಹೊಂದಿದ್ದಾರೆ ; ಎಷ್ಟು ಪ್ರಕರಣಗಳು ದಾಖಲಾಗಿವೆ ; (ವಿವರ ನೀಡುವುದು)

(ಉ) ಕಳೆದ ಎರಡು ವರ್ಷಗಳಿಂದ (ಹಾವು, ಮಂಗ, ಮೊಸಳೆ, ರಣಹದ್ದು, ಬಾವಲಿ ಪಕ್ಷಿ) ವನ್ಯಜೀವಿಗಳನ್ನು ಸಂರಕ್ಷಿಸಿ ಅರಣ್ಯಕ್ಕೆ ಬಿಡಲಾಗಿದೆ ; ಎಷ್ಟು ಹಾವುಗಳು ಬಾವಲಿಗಳು, ರಣಹದ್ದುಗಳು, ಮೊಸಳೆಗಳು ಇವುಗಳ ಸಂಪೂರ್ಣ ವಿವರ ನೀಡುವುದು ?

## ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳಿಗೆ ಎನ್‌ಎಂಸಿ ದಂಡ ವಿಧಿಸಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೫೦ (೬೧೦) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಷ್ಟ್ರೀಯ ವೈದ್ಯಕೀಯ ಆಯೋಗವು (National Medical Commission (NMC)) ಕರ್ನಾಟಕ ವೈದ್ಯಕೀಯ ಕಾಲೇಜುಗಳಿಗೆ ದಂಡ ವಿಧಿಸಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಕಾರಣಗಳೇನು; ಯಾವ ಯಾವ ಕಾಲೇಜುಗಳಿಗೆ ದಂಡ ವಿಧಿಸಲಾಗಿದೆ; ದಂಡದ ಮೊತ್ತ ಎಷ್ಟು ; (ವೈದ್ಯಕೀಯ ಕಾಲೇಜುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ವೈದ್ಯರು, ಸಿಬ್ಬಂದಿ, ಯಂತ್ರೋಪಕರಣಗಳು ಸೇರಿದಂತೆ ಮೂಲಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ವೈದ್ಯರು ಮತ್ತು ಸಿಬ್ಬಂದಿ ನೇಮಕಾತಿ ಅಗತ್ಯ ಯಂತ್ರೋಪಕರಣಗಳ ಒದಗಿಸುವುದು ಸೇರಿದಂತೆ ಮೂಲಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿರುವ ಹುಲಿ ಮತ್ತು ಆನೆಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೫೧ (೬೧೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಹುಲಿ ಮತ್ತು ಆನೆಗಳ ಸಂಖ್ಯೆ ಎಷ್ಟು; ರಾಷ್ಟ್ರ ಮಟ್ಟದಲ್ಲಿ ಹುಲಿ ಮತ್ತು ಆನೆಗಳ ಸಂಖ್ಯೆಯಲ್ಲಿ ರಾಜ್ಯದ ಸ್ಥಾನವೇನು ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿ ೨೦೨೦ನೇ ಸಾಲಿನಿಂದ ಈವರೆಗೆ ನಾನಾ ಕಾರಣಗಳಿಗಾಗಿ ಮೃತಪಟ್ಟ ಹುಲಿ ಮತ್ತು ಆನೆಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಗಂಡು-ಹೆಣ್ಣು; ಸಹಜ-ಅಸಹಜ ಸಾವು ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಇ) ಸದರಿ ಅವಧಿಯಲ್ಲಿ ಹುಲಿ, ಚಿರತೆ ಮತ್ತು ಆನೆಗಳ ದಾಳಿಯಿಂದ ಮೃತಪಟ್ಟ ಜನ-ಜಾನುವಾರುಗಳ ಸಂಖ್ಯೆ ಎಷ್ಟು ಹಾಗೂ, ವಿತರಿಸಲಾದ ಪರಿಹಾರದ ಮೊತ್ತ ಎಷ್ಟು; ಪಾವತಿಸಬೇಕಾದ ಬಾಕಿ ಪರಿಹಾರ ಮೊತ್ತ ಎಷ್ಟು ; (ಜಿಲ್ಲಾವಾರು, ವರ್ಷವಾರು, ಸಂಪೂರ್ಣ ಮಾಹಿತಿ ನೀಡುವುದು)

(ಈ) ಆನೆಗಳ ದಾಳಿಯಿಂದ ಉಂಟಾದ ಕೃಷಿ ನಷ್ಟ ಎಷ್ಟು; ವಿತರಿಸಲಾದ ಪರಿಹಾರ ಮೊತ್ತ ಎಷ್ಟು ;

(ಉ) ರಾಜ್ಯದಲ್ಲಿ ಇತ್ತೀಚೆಗೆ ನಡೆಸಲಾದ 'ಆನೆ ಗಣತಿ'ಯಲ್ಲಿ ಗುರುತಿಸಲಾದ ಆನೆಗಳ (ಗಂಡು-ಹೆಣ್ಣು) ಒಟ್ಟು ಸಂಖ್ಯೆ ಎಷ್ಟು ; (ಆನೆ ಗಣತಿಗೆ ಸಂಬಂಧಿಸಿದಂತೆ ಸಂಪೂರ್ಣ ಮಾಹಿತಿ ನೀಡುವುದು)

(ಊ) ಮಾನವ ಮತ್ತು ವನ್ಯಜೀವಿ ಸಂಘರ್ಷವನ್ನು ತಡೆಯಲು ಸರ್ಕಾರ ಕೈಗೊಂಡಿರುವ ಇತ್ತೀಚಿನ ಕ್ರಮಗಳೇನು ?

## ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣದಲ್ಲಿ 'ರಾಜ್ಯ ಶಿಕ್ಷಣ ನೀತಿ' ಜಾರಿಗೆ ತರುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೫೨ (೬೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪-೨೫ನೇ ಶೈಕ್ಷಣಿಕ ಸಾಲಿಗೆ ರಾಜ್ಯ ಮತ್ತು ಕೇಂದ್ರ ಪಠ್ಯಕ್ರಮ (CBSE, ICSE) ಅನುಸರಿಸುವ ಶಾಲೆಗಳಲ್ಲಿ ಒಂದನೇ ತರಗತಿಗೆ ಮಗುವನ್ನು ದಾಖಲಿಸಲು ನಿಗದಿಪಡಿಸಿರುವ ವಯೋಮಾನ ಎಷ್ಟು ;

(ಆ) ಶೈಕ್ಷಣಿಕ ವರ್ಷದ ಜೂನ್ ೧ಕ್ಕೆ ಮಗುವಿಗೆ ೬ ವರ್ಷ ಪೂರ್ಣಗೊಂಡಿರುವುದು ಕಡ್ಡಾಯ ಎನ್ನುವ ನಿಯಮ ಯಾವ ಶೈಕ್ಷಣಿಕ ಸಾಲಿನಿಂದ ಅನ್ವಯಿಸಲಿದೆ ;

(ಇ) ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದಲ್ಲಿ ಕೇಂದ್ರ ಪಠ್ಯಕ್ರಮ (CBSE, ICSE) ಅನುಸರಿಸುವ ಶಾಲೆಗಳು ಒಂದನೇ ತರಗತಿಗೆ ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳಲು ೫.೫ ವರ್ಷ (೫ ವರ್ಷ ೫ ತಿಂಗಳು) ೫.೧೦ ವರ್ಷ ೬ ವರ್ಷ ಹೀಗೆ ಮನಸೋಇಚ್ಛೆ ವಯೋಮಿತಿ ನಿರ್ದಿಷ್ಟಪಡಿಸಿಕೊಂಡು ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರವು ಕೇಂದ್ರ ಪಠ್ಯಕ್ರಮ (CBSE, ICSE) ಅನುಸರಿಸುವ ಶಾಲೆಗಳಿಗೆ ಈ ಕುರಿತು ಯಾವ ರೀತಿಯ ನಿರ್ದೇಶನ ನೀಡಲಿದೆ ;

(ಉ) ಕರ್ನಾಟಕ ರಾಜ್ಯ ಶಿಕ್ಷಣ ನೀತಿ ಆಯೋಗವು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ; ಆಯೋಗದಿಂದ ವರದಿಯನ್ನು ಯಾವಾಗ ನಿರೀಕ್ಷಿಸಬಹುದು ; (ಸಂಪೂರ್ಣ ಮಾಹಿತಿ ನೀಡುವುದು)

(ಊ) ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣದಲ್ಲಿ ರಾಜ್ಯ ಶಿಕ್ಷಣ ನೀತಿಯು ಯಾವ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬರಲಿದೆ ? (ಈ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು)

## ವಿದ್ಯುತ್ ಅವಘಡ : ಮಾನವ ಮತ್ತು ಪ್ರಾಣಿಗಳ ಜೀವಹಾನಿ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೫೩ (೬೧೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦೨೦ ರಿಂದ ಈವರೆಗೆ ವಿದ್ಯುತ್ ಅವಘಡಗಳಿಂದ ಮೃತಪಟ್ಟವರ ಸಂಖ್ಯೆ ಎಷ್ಟು; ಇವರಲ್ಲಿ, ವಿದ್ಯುತ್ ಸರಬರಾಜು ಕಂಪನಿಗಳ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವರ್ಷವಾರು ವಿದ್ಯುತ್ ಸರಬರಾಜು ಕಂಪನಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಇದೇ ಅವಧಿಯಲ್ಲಿ ಜೀವ ಕಳೆದುಕೊಂಡ ಪ್ರಾಣಿಗಳ ಸಂಖ್ಯೆ ಎಷ್ಟು ; (ವರ್ಷವಾರು ವಿದ್ಯುತ್ ಸರಬರಾಜು ಕಂಪನಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ವಿದ್ಯುತ್ ಪ್ರವಹಿಸುವ ವಾಹಕಗಳು, ಉಪಕರಣಗಳ ಸ್ಪರ್ಶದಿಂದಾಗಿ ಜೀವ ಕಳೆದುಕೊಂಡವರ ಸಂಖ್ಯೆ ಎಷ್ಟು ; ಹಾಗೂ ನೆಲಕ್ಕೆ

ತಾಕಿದ/ಬಿದ್ದಿದ್ದ ತಂತಿಗಳು ತಾಗಿ ಪ್ರಾಣ ಕಳೆದಕೊಂಡ ಮತ್ತು ಗಾಯಗೊಂಡ ಜನರು ಮತ್ತು ಜೀವ ಕಳೆದಕೊಂಡ ಪ್ರಾಣಿಗಳ ಸಂಖ್ಯೆ ಎಷ್ಟು ;

(ಈ) ವಿದ್ಯುತ್ ಅವಘಡಗಳಲ್ಲಿ ವ್ಯಕ್ತಿ ಅಥವಾ ಪ್ರಾಣಿಗಳು ಮೃತಪಟ್ಟರೆ, ಮನುಷ್ಯ ಶಾಶ್ವತ ಅಂಗವೈಕಲ್ಯತೆಗೆ ಒಳಗಾದರೆ ನೀಡುವ ಪರಿಹಾರದ ಮೊತ್ತ ಎಷ್ಟು ;

(ಉ) ವಿದ್ಯುತ್ ಆಕಸ್ಮಿಕ ಅವಘಡಗಳಿಗೆ ಕಾರಣಗಳೇನು ?

## ಎಸ್ಕಾಂಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೪ (೬೬೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಈ ಹಿಂದೆ ಇದ್ದ ಸ್ಲ್ಯಾಬ್ ಆಧಾರಿತ ವಿದ್ಯುತ್ ಬಿಲ್ಲು ನೀಡುವ ಪದ್ಧತಿಯನ್ನು ಏಕಾಏಕಿ ಕೈ ಬಿಡಲು ಕಾರಣವೇನು; ವಿದ್ಯುತ್ ಬಿಲ್‌ನಲ್ಲಿ ಇಂಧನ ಹೊಂದಾಣಿಕೆ ಮೊತ್ತವನ್ನು ಹೆಚ್ಚುವರಿಯಾಗಿ ಸೇರಿಸಲು ಕಾರಣವೇನು ; ಈ ಕ್ರಮದಿಂದ ಸಾರ್ವಜನಿಕರಿಗೆ ಹೊರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ದಾಖಲಾತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಈವರೆಗೆ ಕೃಷಿ ಪಂಪ್‌ಸೆಟ್ ಆಧಾರಿತ ವಿದ್ಯುತ್ ಸಂಪರ್ಕಕ್ಕಾಗಿ ಇಲಾಖೆಗೆ ಬಂಧಿರುವ ಅರ್ಜಿಗಳೆಷ್ಟು ; ಇಲಾಖೆಯಿಂದ ನೀಡಲಾದ ವಿದ್ಯುತ್ ಸಂಪರ್ಕಗಳೆಷ್ಟು; ಬಾಕಿಯಿರುವ ಅರ್ಜಿಗಳೆಷ್ಟು ಬಾಕಿಯಿರಲು ಕಾರಣವೇನು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಈವರೆಗೆ ಕೃಷಿ ಪಂಪ್‌ಸೆಟ್ ಆಧಾರಿತ ವಿದ್ಯುತ್ ಸಂಪರ್ಕಗಳ ಬಾಬ್ತು ಸರ್ಕಾರದಿಂದ ಎಸ್ಕಾಂಗಳಿಗೆ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು ; ಬಾಕಿಯಿರುವ ಮೊತ್ತವೆಷ್ಟು ; ಬಾಕಿಯಿರಲು ಕಾರಣವೇನು ; (ಮಾಹಿತಿ ಒದಗಿಸುವುದು)

(ಈ) ಸಿಬ್ಬಂದಿ ಹಾಗೂ ಸಂಪನ್ಮೂಲಗಳ ಕೊರತೆಯಿಂದ ಎಸ್ಕಾಂಗಳ ಸೇವೆಯಲ್ಲಿ ವ್ಯತ್ಯಯ ಆಗುತ್ತಿದ್ದು ಇದರ ಪರಿಣಾಮ ಗ್ರಾಹಕರ ಮೇಲಾಗುತ್ತಿದ್ದು ಸೇವೆಯನ್ನು ಉನ್ನತೀಕರಿಸಲು ಈವರೆಗೆ ಕೈಗೊಂಡ ಕಾಮಗಾರಿಗಳಿಗಾಗಿ ವೆಚ್ಚ ಮಾಡಲಾದ ಮೊತ್ತವೆಷ್ಟು; ಬಾಕಿಯಿರುವ ಕಾಮಗಾರಿಗಳಾವುವು ; (ಎಸ್ಕಾಂವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಎಸ್ಕಾಂಗಳಲ್ಲಿ ವಿದ್ಯುತ್ ಸಿಬ್ಬಂದಿ ನೇಮಕಾತಿಯನ್ನು ಎಸ್ಕಾಂವಾರು ಮಾಡುತ್ತಿದ್ದು ಹೆಚ್ಚು ಹುದ್ದೆ ಖಾಲಿಯಿರುವಲ್ಲಿ ನೇಮಕಾತಿಯಾಗುವ ಸಿಬ್ಬಂದಿಗಳು ಪರೀಕ್ಷಾರ್ಥ ಅವಧಿಯ ನಂತರ ತಮ್ಮ ತವರು ಜಿಲ್ಲೆಗಳಿಗೆ ಅಂತರ್ ಎಸ್ಕಾಂ ವರ್ಗಾವಣೆ ಪಡೆದುಕೊಳ್ಳುವುದರಿಂದ ವಿವಿಧ ಎಸ್ಕಾಂಗಳಲ್ಲಿ ಸಿಬ್ಬಂದಿಗಳ ಅಸಮತೋಲನವಾಗುತ್ತಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಡಿತರ ಚೀಟಿಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೫ (೬೬೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಡಿತರ ಚೀಟಿಗಳ ಕುರಿತು ರಾಜ್ಯದಲ್ಲಿ ನೋಂದಣಿಯಾಗಿರುವ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು; ಈಗ ಚಾಲ್ತಿಯಲ್ಲಿರುವ ಒಟ್ಟು ಪಡಿತರ ಚೀಟಿಗಳ ಸಂಖ್ಯೆ ಎಷ್ಟು; ರಾಜ್ಯದಲ್ಲಿ ಪ್ರಸ್ತುತ ಎಷ್ಟು ವಿಧದ ಪಡಿತರ ಚೀಟಿಗಳು ಇವೆ ; (ವಿವರ ನೀಡುವುದು)

(ಆ) ಕಳೆದ ಒಂದು ವರ್ಷದಿಂದ ಹಾಗೂ ಅದಕ್ಕಿಂತ ಹಳೆಯದಾದ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿದ ಪ್ರಕರಣಗಳು ಎಷ್ಟು; ಅವುಗಳಲ್ಲಿ ವಿಲೇವಾರಿಯಾದ ಪ್ರಕರಣಗಳ ಸಂಖ್ಯೆ ಎಷ್ಟು; ವಿಲೇವಾರಿ ಬಾಕಿಯಾಗಲು ಕಾರಣವೇನು ; (ವಿವರ ನೀಡುವುದು)

(ಇ) ಪಡಿತರ ಚೀಟಿಗಾಗಿ ಹೊಸ ಅರ್ಜಿಗಳು, ತಿದ್ದುಪಡಿ ಮಾರ್ಪಾಡು, ಸೇರ್ಪಡೆ ಹಾಗೂ ಹೆಸರು ತೆಗೆದು ಹಾಕು ಇತ್ಯಾದಿ ಅರ್ಜಿಗಳ ವಿಲೇವಾರಿ ಪ್ರಕ್ರಿಯೆಯು ಸ್ಥಗಿತವಾಗಿರುವ ಕಾರಣ ರಾಜ್ಯದಲ್ಲಿ ಅನೇಕ ಅರ್ಹ ಕುಟುಂಬಗಳು ಪಡಿತರದಿಂದ ಹಾಗೂ ಪಡಿತರ ಚೀಟಿಯ ಆಧಾರದಲ್ಲಿ ನೀಡುವ ಹಲವು ಸೌಲಭ್ಯಗಳಾದ ವೈದ್ಯಕೀಯ ಚಿಕಿತ್ಸೆ, ವಿದ್ಯಾಭ್ಯಾಸ, ಉದ್ಯೋಗ ಹಾಗೂ ಮೀಸಲಾತಿ ಸೌಕರ್ಯ ಪಡೆಯುವಲ್ಲಿ ತೊಂದರೆಯಾಗಿದ್ದು, ಅವರಿಗೆ ಅಗತ್ಯವಿರುವ ಪಡಿತರ ಚೀಟಿಯನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಪಡಿತರ ಚೀಟಿ ನೀಡಲು ಇರುವ ಮಾನದಂಡಗಳು ಯಾವುವು; ಈ ಮಾನದಂಡಗಳನ್ನು ಆಧರಿಸಿ ಈಗಾಗಲೇ ನೀಡಿರುವ ಪಡಿತರ ಚೀಟಿಗಳಲ್ಲಿ ಅನರ್ಹ ಪಡಿತರ ಚೀಟಿಗಳನ್ನು ಗುರುತಿಸಲಾಗಿದೆಯೇ; ಹಾಗೂ ಅವುಗಳನ್ನು ರದ್ದುಪಡಿಸಲು ಸರ್ಕಾರ ಏನು ಕ್ರಮವಹಿಸಿದೆ ;

(ಉ) ರಾಜ್ಯದಲ್ಲಿ ನೀಡಿರುವ ಪಡಿತರ ಚೀಟಿಗಳು ರಾಜ್ಯದ ಒಟ್ಟು ಕುಟುಂಬಗಳ ಸಂಖ್ಯೆಗಿಂತ ಹೆಚ್ಚು ಅಥವಾ ಬಿಪಿಎಲ್ ಪಡಿತರ ಸಂಖ್ಯೆ ಅನುಪಾತವು ಬೇರೆ ರಾಜ್ಯಗಳಿಗೆ ಹೋಲಿಸಿದರೆ ಹೆಚ್ಚು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಏನು ಕ್ರಮ ಜರುಗಿಸಲಾಗಿದೆ ? (ವಿವರ ನೀಡುವುದು)

## ಆರೋಗ್ಯ ಇಲಾಖೆಯಲ್ಲಿ ಅಧಿಕಾರಿ ವೈದ್ಯ ಹಾಗೂ ಇತರ ಸಿಬ್ಬಂದಿಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೬ (೬೬೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಆರೋಗ್ಯ ಇಲಾಖೆಯಲ್ಲಿ ಪ್ರಸ್ತುತ ಇರುವ ಅಧಿಕಾರಿಗಳು, ವೈದ್ಯರು ಹಾಗೂ ಇತರ ಸಿಬ್ಬಂದಿಗಳನ್ನು ಸೇರಿದಂತೆ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದ ಆರೋಗ್ಯ ಇಲಾಖೆಯಲ್ಲಿ ಒಟ್ಟು ಮಂಜೂರಾದ ಹುದ್ದೆಗಳು ಎಷ್ಟು; ಎಷ್ಟು ಹುದ್ದೆಗಳಿಗೆ ಸರ್ಕಾರಿ ಅಧಿಕಾರಿ, ವೈದ್ಯರು, ಸಿಬ್ಬಂದಿಗಳು ಇದ್ದಾರೆ; ಖಾಲಿಯಿರುವ ಹುದ್ದೆಗಳೆಷ್ಟು ; (ಹುದ್ದೆವಾರು ಜಿಲ್ಲಾವಾರು ವಿವರ ನೀಡುವುದು)

(ಇ) ಮಂಜೂರಾಗಿ ಖಾಲಿಯಿರುವ ಯಾವ್ಯಾವ ಹುದ್ದೆಗಳಲ್ಲಿ ಎಷ್ಟು ಜನ ಎನ್ ಹೆಚ್ ಎಂ ಒಳಗುತ್ತಿಗೆ/ಹೊರಗುತ್ತಿಗೆ ಸಿಬ್ಬಂದಿಗಳು ಮತ್ತು ತಾತ್ಕಾಲಿಕ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; (ಹುದ್ದೆವಾರು ಜಿಲ್ಲಾವಾರು ವಿವರ ನೀಡುವುದು)

(ಈ) ಕರ್ನಾಟಕ ರಾಜ್ಯದ ಆರೋಗ್ಯ ಇಲಾಖೆಯಲ್ಲಿ ಕೆಲಸ ಮಾಡುತ್ತಿರುವ ಗುತ್ತಿಗೆ ಆಧಾರಿತ ಎನ್‌ಹೆಚ್‌ಎಂ ಹಾಗೂ ಇತರ ತಾತ್ಕಾಲಿಕ ಸಿಬ್ಬಂದಿಗಳಿಗೆ ನೀಡಲಾಗುತ್ತಿರುವ ಸವಲತ್ತುಗಳು ಹಾಗೂ ವೇತನವೆಷ್ಟು ಮತ್ತು ಈ ವೇತನದಲ್ಲಿ ಯಾವೆಲ್ಲ ಭತ್ಯೆಗಳು ಸೇರಿವೆ; ಒಂದೇ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಹಾಗೂ ಗುತ್ತಿಗೆ ಸಿಬ್ಬಂದಿಗಳ ವೇತನದ ವ್ಯತ್ಯಾಸವೆಷ್ಟು ; (ವಿವರ ನೀಡುವುದು)

(ಉ) ಆರೋಗ್ಯ ಇಲಾಖೆಯು ಒಂದು ಪ್ರಮುಖ ಇಲಾಖೆಯಾಗಿದ್ದು, ಇದರ ನಿಯಮಿತ ಕಾರ್ಯನಿರ್ವಹಣೆಯಲ್ಲಿ ಎನ್‌ಹೆಚ್‌ಎಂ ಗುತ್ತಿಗೆ ಆಧಾರಿತ ಅಧಿಕಾರಿ, ವೈದ್ಯ, ಸಿಬ್ಬಂದಿಗಳ ಪಾತ್ರ ಮಹತ್ವದ್ದಾಗಿದ್ದರೂ ಅವರಿಗೆ ಅಗತ್ಯ ಸವಲತ್ತುಗಳನ್ನು ನೀಡುವ ಬಗ್ಗೆ ಸರ್ಕಾರ ಏನು ಕ್ರಮವಹಿಸಿದೆ ; (ವಿವರ ನೀಡುವುದು)

(ಊ) ಸುಮಾರು ೧೫-೨೦ ವರ್ಷಗಳಿಂದ ವಾರ್ಷಿಕ ಗುತ್ತಿಗೆ ನವೀಕರಣದೊಂದಿಗೆ ಆರೋಗ್ಯ ಇಲಾಖೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಎನ್‌ಹೆಚ್‌ಎಂ ಒಳಗುತ್ತಿಗೆ/ಹೊರಗುತ್ತಿಗೆ ಸಿಬ್ಬಂದಿಗಳು ತಮ್ಮನ್ನು ಖಾಯಂ ಮಾಡುವಂತೆ ಮಾಡಿರುವ ಒತ್ತಾಯಕ್ಕೆ ಸರ್ಕಾರ ಯಾವ ರೀತಿ ಸ್ಪಂದಿಸುತ್ತಿದೆ ? (ವಿವರ ನೀಡುವುದು)

## ಪ್ರೌಢ ಶಾಲೆಗಳಲ್ಲಿ ಪದವಿ ಪೂರ್ವ ತರಗತಿಗಳನ್ನು ವಿಸ್ತರಿಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೭ (೬೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರೌಢ ಶಾಲೆಗಳನ್ನು ಪದವಿ ಪೂರ್ವ ಕಾಲೇಜುಗಳಾಗಿ ಉನ್ನತೀಕರಿಸಲು ಇಲಾಖೆಯು ಹೊರಡಿಸಿರುವ ನಿಯಮ ಹಾಗೂ ಮಾರ್ಗಸೂಚಿಗಳೇನು ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಈ ಮಾರ್ಗಸೂಚಿಗಳನ್ವಯ ಎಷ್ಟು ಪ್ರೌಢ ಶಾಲೆಗಳನ್ನು ಪದವಿ ಪೂರ್ವ ಕಾಲೇಜುಗಳಾಗಿ ಉನ್ನತೀಕರಿಸುವ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗಿದೆ ; ಇವುಗಳಲ್ಲಿ ಎಷ್ಟು ಪ್ರಸ್ತಾವನೆಗಳನ್ನು ಪುರಸ್ಕರಿಸಿ ಇಲಾಖೆಯಿಂದ ಆದೇಶಿಸಲಾಗಿದೆ ; (ಪ್ರೌಢ ಶಾಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ವಿವೇಕ ಯೋಜನೆಯಡಿ ಪದವಿ ಪೂರ್ವ ಕಾಲೇಜುಗಳ ಕಟ್ಟಡ ಮಂಜೂರಾತಿ ಆದೇಶದಲ್ಲಿ ಹೆಸರು ತಪ್ಪಾಗಿದ್ದು, ಕಾಮಗಾರಿ ಮುಂದುವರೆಯಲು ತೊಡಕಾಗಿದ್ದು ಈ ಕುರಿತು ಸರ್ಕಾರ ಕೈಗೊಂಡ ಪರಿಹಾರ ಕ್ರಮಗಳೇನು ; ಈ ನಿರ್ಲಕ್ಷಗಳನ್ನು ಶೀಘ್ರ ಸರಿಪಡಿಸಲು ಸರ್ಕಾರ ಕ್ರಮವಹಿಸುತ್ತಿಲ್ಲದಿರುವುದಕ್ಕೆ ಕಾರಣಗಳೇನು ;

(ಈ) ಉಡುಪಿ ಜಿಲ್ಲೆ ಕುಂದಾಪುರ ತಾಲ್ಲೂಕು ಬಸ್ರೂರು ಸರ್ಕಾರಿ ಪ್ರೌಢ ಶಾಲೆಯನ್ನು ಉನ್ನತೀಕರಿಸುವ ಪ್ರಸ್ತಾವನೆಯನ್ನು ಇಲಾಖೆಯಲ್ಲಿ ಸ್ವೀಕರಿಸಲಾಗಿದೆಯೇ ಈ ಬಗ್ಗೆ ಈವರೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಈ ಬಗ್ಗೆ ಸಚಿವಾಲಯದ ಹಂತದಲ್ಲಿ ಮಂಡನೆಯಾದ ಕಛೇರಿ ಟಿಪ್ಪಣಿಯ ಪ್ರತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಉ) ಬಸ್ರೂರು ಪ್ರೌಢ ಶಾಲೆಯಲ್ಲಿ ಸುತ್ತಮುತ್ತಲಿನ ೨೦ ಗ್ರಾಮಗಳ ಬಡ ಕುಟುಂಬಗಳ ಸುಮಾರು ೪೮೫ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಪ್ರತಿ ತರಗತಿಯಲ್ಲಿ ಎ.ಬಿ.ಸಿ ವಿಭಾಗಗಳಿದ್ದು, ಬಡ ವಿದ್ಯಾರ್ಥಿಗಳು ೧೦ನೇ ತರಗತಿ ನಂತರ ಹೆಚ್ಚಿನ ಶುಲ್ಕ ಕೊಟ್ಟು ಖಾಸಗಿ ಕಾಲೇಜಿಗೆ ತೆರಳಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಪ್ರೌಢ ಶಾಲೆಯನ್ನು ಉನ್ನತೀಕರಿಸುವುದು ಅತೀ ಅವಶ್ಯಕವಾಗಿದ್ದು, ಯಾವಾಗ ಉನ್ನತೀಕರಿಸಿ ಆದೇಶ ಹೊರಡಿಸಲಾಗುವುದು ? (ವಿವರ ನೀಡುವುದು)

## ಕರ್ನಾಟಕ ಪಬ್ಲಿಕ್ ಸ್ಕೂಲ್ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೮ (೬೬೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಪಬ್ಲಿಕ್ ಸ್ಕೂಲ್ ಸ್ಥಾಪನೆಯ ಮೂಲ ಉದ್ದೇಶಗಳೇನು; ಅವುಗಳ ನಿಯಮಗಳೇನು ; ಇತರ ಶಾಲೆಗಳಿಗೆ ಹೋಲಿಸಿದರೆ ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳಲ್ಲಿ ಇರುವ ವಿವಿಧ ಅನುಕೂಲಗಳು ಯಾವುವು ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಇರುವ ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಶಿಕ್ಷಕರ ವಿದ್ಯಾರ್ಥಿ ಅನುಪಾತ ಸಹಿತ ಶಾಲಾವಾರು ವಿವರ ನೀಡುವುದು)

(ಇ) ಈ ಶಾಲೆಗಳಲ್ಲಿ ಕೊರತೆ ಇರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಶಾಲಾವಾರು ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಂದ ಹೆಚ್ಚುವರಿ ಪಬ್ಲಿಕ್ ಸ್ಕೂಲ್‌ಗಳಿಗೆ ಎಷ್ಟು ಪ್ರಸ್ತಾವನೆ ಸರ್ಕಾರಕ್ಕೆ ಸಲ್ಲಿಸಲ್ಪಟ್ಟಿದೆ ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; (ಪ್ರಸ್ತಾವನೆವಾರು ವಿವರ ನೀಡುವುದು)

(ಉ) ಪ್ರತಿ ಪಬ್ಲಿಕ್ ಸ್ಕೂಲ್‌ಗಳಿಗೆ ಮಂಜೂರಾದ ಶಿಕ್ಷಕರ ಹುದ್ದೆಗಳೆಷ್ಟು; ಇದರಲ್ಲಿ ಭರ್ತಿಯಾಗಿರುವ ಹುದ್ದೆಗಳೆಷ್ಟು ; ಈ ಶಾಲೆಗಳಲ್ಲಿ ವಿಷಯವಾರು ಶಿಕ್ಷಕರ ನೇಮಕಾತಿಗೆ ಏನು ಕ್ರಮವಹಿಸಲಾಗಿದೆ ; ನೇಮಕಾತಿ ಮಾಡಿದ ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು ; (ಶಾಲಾವಾರು ವಿವರ ನೀಡುವುದು)

(ಊ) ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳಿಗೆ ನವೋದಯ ಶಾಲೆಗಳ ಮಾದರಿಯಲ್ಲಿ ಮೂಲಭೂತ ಸೌಲಭ್ಯ ಅಭಿವೃದ್ಧಿಪಡಿಸಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ ? (ವಿವರ ನೀಡುವುದು)

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೫ (೭೨೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಒಟ್ಟು ಎಷ್ಟು ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; (ಜಿಲ್ಲಾ ಮತ್ತು ನಗರ ಹಾಗೂ ಪಿ.ಹೆಚ್.ಸಿ ವೃಂದವಾರು ಮಾಹಿತಿ ಒದಗಿಸುವುದು)

(ಆ) ಆರೋಗ್ಯ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇದೆಯೇ; ಹಾಗಿದ್ದಲ್ಲಿ, ಎಷ್ಟು ಹುದ್ದೆಗಳು ಖಾಲಿ ಇವೆ ? (ಹುದ್ದೆವಾರು ವಿವರ ಒದಗಿಸುವುದು)

## ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಫಲಿತಾಂಶ ಕಡಿಮೆ ಬಂದಿರುವ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೬೦ (೭೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೪ರ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತಿ ಕಡಿಮೆ ಫಲಿತಾಂಶ ಬಂದಿರುವುದು ಸರ್ಕಾರದ ಗಮನಕ್ಕೆ ಇದೆಯೇ ;

(ಆ) ಹಾಗಿದ್ದಲ್ಲಿ, ಅತಿ ಕಡಿಮೆ ಫಲಿತಾಂಶ ಬರಲು ಕಾರಣವೇನು ; (ವಿವರ ನೀಡುವುದು)

(ಇ) ಈ ವರ್ಷ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಿ ಪರೀಕ್ಷೆ ನಡೆಸಿರುವುದು ವಿದ್ಯಾರ್ಥಿಗಳಿಗೆ ಮಾನಸಿಕ ಕುಂಠಿತ ಉಂಟಾಗಿ ಪರೀಕ್ಷೆಯುಲ್ಲಿ ಕಡಿಮೆ ಅಂಕ ಪಡೆಯುಲು ಕಾರಣವಾಯಿತೆ ;

(ಈ) ಫಲಿತಾಂಶವನ್ನು ಹೆಚ್ಚಿಸಲು ಗ್ರೇಸ್ ಮಾರ್ಕ್ಸ್ ನೀಡಿರುವುದಕ್ಕೆ ಕಾರಣಗಳೇನು ಯಾವ ಮಾನದಂಡದ ಮೇಲೆ ಗ್ರೇಸ್ ಮಾರ್ಕ್ಸ್ ನೀಡಲಾಗಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ವಿತರಣೆ ಮಾಡುತ್ತಿರುವ ಬಿಪಿಎಲ್ ಕಾರ್ಡ್‌ಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೬೧ (೭೨೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಒಂದು ವರ್ಷದಲ್ಲಿ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ನೀಡಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಕಳೆದ ಒಂದು ವರ್ಷದಲ್ಲಿ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ರದ್ದುಪಡಿಸಲಾಗಿದೆ ; ರದ್ದುಪಡಿಸಲು ಕಾರಣವೇನು ; (ವಿವರ ಒದಗಿಸುವುದು)

(ಇ) ಬಡವರು ಬಿ.ಪಿ.ಎಲ್ ಕಾರ್ಡ್ ಪಡೆಯುವುದಕ್ಕೆ ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬಿ.ಪಿ.ಎಲ್ ಕಾರ್ಡ್ ಪಡೆಯಲು ಇರುವ ಮಾನದಂಡಗಳೇನು ? (ವಿವರ ನೀಡುವುದು)

## ಸಿಇಟಿ ಪರೀಕ್ಷೆಯಲ್ಲಿ ಪಠ್ಯಕ್ರಮದಿಂದ ಹೊರಗಿನವುಗಳ ಪ್ರಶ್ನೆಗಳು ಬಂದಿರುವ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೬೨ (೭೨೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿಇಟಿ ಪರೀಕ್ಷೆಯಲ್ಲಿ ೪೦% ಪಠ್ಯಕ್ರಮದಿಂದ ಹೊರತಾದ ಪ್ರಶ್ನೆಗಳಿರುವುದು ನಿಜವೇ ;

(ಆ) ಸಿಇಟಿ ಪರೀಕ್ಷೆ ಪ್ರತಿ ವಿದ್ಯಾರ್ಥಿಯ ಫಲಿತಾಂಶವು ವ್ಯತ್ಯಾಸ ಆಗಿದ್ದು ಇದರಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಮೇಲೆ ಆಗುವ ಪರಿಣಾಮಗಳ ಬಗ್ಗೆ ಸರ್ಕಾರದ ನಿಲುವೇನು ; (ವಿವರ ಒದಗಿಸುವುದು)

(ಇ) ಮುಂದೆ ಈ ರೀತಿ ಆಗದಂತೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ಒದಗಿಸುವುದು)

## ಸಮಗ್ರ ಆರೋಗ್ಯ ಮಾಹಿತಿ ಪಾಲ್ಟ್‌ಫಾರ್ಮ್ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೬೩ (೭೨೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಮಗ್ರ ಆರೋಗ್ಯ ಮಾಹಿತಿ ಪಾಲ್ಟ್‌ಫಾರ್ಮ್ (1H1P) ಎಂದರೇನು ;

(ಆ) ರಾಜ್ಯದಲ್ಲಿ ಮರಾಠಿ ಭಾಷೆ ಮಾತನಾಡುವ ನಾಗರಿಕರಿಗೆ ಆರೋಗ್ಯ ವಿಮೆಯನ್ನು ವಿಸ್ತರಿಸಲು ಯೋಜಿಸಿರುವ ಮಹಾರಾಷ್ಟ್ರ ಸರ್ಕಾರದ ವಿರುದ್ಧ ರಾಜ್ಯ ಸರ್ಕಾರವು ಯಾವ ಕ್ರಮ ಕೈಗೊಂಡಿದೆ ; ಇದು ಸಂವಿಧಾನಿಕ ಮಾನದಂಡಗಳನ್ನು ಉಲ್ಲಂಘಿಸಿದಂತಾಗುವುದಿಲ್ಲವೆ ;

(ಇ) ರಾಜ್ಯದಲ್ಲಿ ಆರೋಗ್ಯ ಕರ್ನಾಟಕ–ಆಯುಷ್ಮಾನ್ ಭಾರತ್ ಯೋಜನೆ ಪ್ರಾರಂಭವಾದ ನಂತರ ಕರ್ನಾಟಕದಲ್ಲಿ ಲಭ್ಯವಿರುವ ರಾಜ್ಯ ಆರೋಗ್ಯ ವಿಮಾ ಯೋಜನೆಗಳು ಯಾವುವು ;

(ಈ) ಒಂದು ರಾಜ್ಯದ ಆಡಳಿತವು ಮತ್ತೊಂದು ರಾಜ್ಯದ ನಾಗರಿಕರಿಗೆ ಮೂಲಭೂತ ಸೌಲಭ್ಯಗಳನ್ನು ಹಾಗೂ ಆರೋಗ್ಯ ವಿಮೆ ಯೋಜನೆಯನ್ನು ನೀಡಲು ಸಂವಿಧಾನದಡಿಯಲ್ಲಿ ಅನುಮತಿಸಲಾಗಿದೆಯೇ ; ಇದು ಸಂವಿಧಾನಿಕ ಮಾನದಂಡಗಳನ್ನು ಉಲ್ಲಂಘಿಸುವಂತಾದರೆ ಈ ಕುರಿತು ರಾಜ್ಯ ಸರ್ಕಾರವು ಮಹಾರಾಷ್ಟ್ರ ಸರ್ಕಾರದ ಅಸಂವಿಧಾನಿಕ ಕ್ರಮಗಳನ್ನು ಖಂಡಿಸಲು ಕೈಗೊಂಡಿರುವ ಕ್ರಮಗಳು ಏನು ?

## ಸರ್ಕಾರಿ ಕಾಲೇಜು ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೬೪ (೭೩೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ನಗರ ಪ್ರದೇಶದಲ್ಲಿ ಸರ್ಕಾರಿ ಪದವಿ ಕಾಲೇಜುಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಪ್ರದೇಶದಲ್ಲಿ ಸರ್ಕಾರವು ಹೆಚ್ಚಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಸ್ಥಾಪಿಸಲು ಯೋಜನೆ ರೂಪಿಸಿದೆಯೇ ; ರೂಪಿಸಿದ್ದಲ್ಲಿ, ಈ ಕಾಲೇಜುಗಳ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಿ ಪೂರ್ಣಗೊಳಿಸಲಾಗುವುದು ? (ಮಾಹಿತಿ ನೀಡುವುದು)

## ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೬೫ (೭೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಾದ್ಯಂತ ಒಟ್ಟು ಎಷ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿವೆ; ಈ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ೨೫ ಕ್ಕಿಂತ ಕಡಿಮೆ ವಿದ್ಯಾರ್ಥಿಗಳು ವ್ಯಾಸಂಗ ಮಾಡುವ ಶಾಲೆಗಳ ಸಂಖ್ಯೆ ಎಷ್ಟು ; ಇಂತಹ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿಸಲು

ಸರ್ಕಾರವು ಏನು ಕ್ರಮ ಕೈಗೊಂಡಿದೆ ;

(ಇ) ಇತ್ತೀಚಿನ ದಿನಗಳಲ್ಲಿ ಹೊಸದಾಗಿ ಎಷ್ಟು ಶಾಲಾ ಕೊಠಡಿಗಳನ್ನು ನಿರ್ಮಿಸಲಾಗಿದೆ ; ಅವುಗಳು ಹೊಸದಾಗಿ ಯಾವ ಯಾವ ತಾಲ್ಲೂಕು ಮತ್ತು ಜಿಲ್ಲೆಗಳಲ್ಲಿ ನಿರ್ಮಿಸಲಾಗಿದೆ ; (ವಿವರವನ್ನು ನೀಡುವುದು)

(ಈ) ರಾಜ್ಯದಲ್ಲಿ ಹೆಣ್ಣು ಮಕ್ಕಳ ಬಾಲಕಿಯರ ಶಾಲೆಗಳ ಸಂಖ್ಯೆ ಎಷ್ಟು; ಈ ಶಾಲೆಗಳಲ್ಲಿ ಬಾಲಕಿಯರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆಯೇ ;

(ಉ) ಇತ್ತೀಚಿನ ದಿನಗಳಲ್ಲಿ ೧೦ನೇ ತರಗತಿ ಫಲಿತಾಂಶದಲ್ಲಿ ಉತ್ತೀರ್ಣಗೊಳ್ಳುತ್ತಿರುವವರ ಸಂಖ್ಯೆ ಕಡಿಮೆಯಾಗುತ್ತಿರುವುದಕ್ಕೆ ಕಾರಣಗಳೇನು ; ಮತ್ತು ಎಸ್.ಎಸ್. ಎಲ್.ಸಿ ವಿದ್ಯಾರ್ಥಿಗಳಿಗೆ ಕೃಪಾಂಕ ನೀಡಲಾಗುತ್ತಿದೆಯೇ ?

## ಅನ್ನ ಸುವಿದ ಯೋಜನೆ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬೬ (೭೩೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅತ್ಯಂತ ದುರ್ಬಲ ವರ್ಗಗಳ ೮೦ ವರ್ಷ ಮೇಲ್ಪಟ್ಟ ಹಿರಿಯ ನಾಗರೀಕರ ಮನೆ ಬಾಗಿಲಿಗೆ ಅನ್ನಭಾಗ್ಯದ ಅಡಿಯಲ್ಲಿ ಅಕ್ಕಿ ವಿತರಿಸಲು ಸರ್ಕಾರದ ವತಿಯಿಂದ ಜಾರಿಗೆ ತಂದಿರುವ ಅನ್ನ ಸುವಿಧ ಯೋಜನೆಯಡಿ ಎಷ್ಟು ಫಲಾನುಭವಿಗಳು

ಅನುಕೂಲ ಪಡೆದಿದ್ದಾರೆ ;

(ಆ) ಈ ಯೋಜನೆಯಡಿ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳಿಗೆ ಪಡಿತರವನ್ನು ನೀಡಲಾಗಿದೆ ಮತ್ತು ಇನ್ನೆಷ್ಟು ಫಲಾನುಭವಿಗಳು ಈ ಯೋಜನೆಯಿಂದ ವಂಚಿತರಾಗಿದ್ದಾರೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕರ್ನಾಟಕ ಪ್ರಾಣಿ ಸಂಗ್ರಹಾಲಯಗಳ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೬೭ (೭೩೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿರುವ ಪ್ರಾಣಿ ಸಂಗ್ರಹಾಲಯಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿ ಹೊಸ ಪ್ರಾಣಿ ಸಂಗ್ರಹಾಲಯಗಳನ್ನು ಆರಂಭಿಸುವುದಕ್ಕೆ ಸರ್ಕಾರವು ಯಾವುದಾದರೂ ಪ್ರಸ್ತಾವನೆಗಳನ್ನು ಸ್ವೀಕರಿಸಿದೆಯೇ ;

(ಇ) ಹಾಗಿದ್ದಲ್ಲಿ, ಅದರ ವಿವರಗಳು ಮತ್ತು ಈ ಬಗ್ಗೆ ಸರ್ಕಾರವು ಕೈಗೊಂಡ ಕ್ರಮವೇನು ;

(ಈ) ರಾಜ್ಯದಲ್ಲಿ ಪ್ರಾಣಿ ಸಂಗ್ರಹಾಲಯಗಳ ಕಾರ್ಯಕ್ಷಮತೆಯನ್ನು ಮೌಲ್ಯೀಕರಿಸಲು ಶ್ರೇಣಿಕರಣ ಪದ್ಧತಿಯನ್ನು ರೂಡಿಸುವುದಕ್ಕೆ ಸಂಬಂಧಿಸಿದಂತೆ ಸರ್ಕಾರವು ಯಾವುದಾದರೂ ಪ್ರಸ್ತಾವನೆಯನ್ನು ಹೊಂದಿದೆಯೇ ; ಹಾಗಿದ್ದಲ್ಲಿ, ಅದರ ವಿವರಗಳೇನು ;

(ಉ) ರಾಜ್ಯದಲ್ಲಿ ಹೊಸ ಪ್ರಾಣಿ ಸಂಗ್ರಹಾಲಯಗಳನ್ನು ಆರಂಭಿಸಲು ಅರಣ್ಯ ಇಲಾಖೆಯು ಮೀಸಲಿರಿಸಿದ ಅನುದಾನವೆಷ್ಟು ?

## ಸರ್ಕಾರಿ ಇಂಜಿನಿಯರಿಂಗ್ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿನ ಖಾಲಿ ಹುದ್ದೆ ತುಂಬುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೫೬೮ (೫೯೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಇಂಜಿನಿಯರಿಂಗ್, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸಂಖ್ಯೆ ಎಷ್ಟು ; (ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

(ಆ) ಸದರಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ ಬೋಧಕೇತರರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸದರಿ ಸಂಸ್ಥೆಗಳಿಗೆ ಸರ್ಕಾರದಿಂದ ಮಂಜೂರಾಗಿರುವ ಸಿಬ್ಬಂದಿಗಳೆಷ್ಟು ; (ವಿವರ ನೀಡುವುದು)

(ಈ) ಸದರಿ ಕಾಲೇಜುಗಳಲ್ಲಿ ಸಿಬ್ಬಂದಿಗಳ ಕೊರತೆಯಿಂದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ತುಂಬಲಾಗುತ್ತದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಬಿ.ಪಿ.ಎಲ್ ಸೇರಿದಂತೆ ಪಡಿತರ ಚೀಟಿಗಳ ಮಾಹಿತಿ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೯ (೬೩೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು

ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಕಲಿ ಬಿ.ಪಿ.ಎಲ್. ಕಾರ್ಡ್‌ಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ನಕಲಿ ಬಿ.ಪಿ.ಎಲ್ ಕಾರ್ಡ್‌ದಾರರ ವಿರುದ್ಧ ಕ್ರಮ ಜರುಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಈ ನಕಲಿ ಕಾರ್ಡ್‌ಗಳನ್ನು ತಡೆಯುವಲ್ಲಿ ಸರ್ಕಾರ ಯಾವ ರೀತಿ ಯೋಜನೆ ರೂಪಿಸಿದೆ ; (ಮಾಹಿತಿ ಒದಗಿಸುವುದು)

(ಆ) ರಾಜ್ಯದಲ್ಲಿ ಬಡತನ ರೇಖೆಗಿಂತ ಕಡಿಮೆ ಇರುವವರ ಸಂಖ್ಯೆ ಎಷ್ಟು ; ಈಗಾಗಲೇ ಬಿ.ಪಿ.ಎಲ್ / ಎ.ಪಿ.ಎಲ್ ಪಡಿತರ ಕಾರ್ಡ್‌ಗಳನ್ನು ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹೊಸ ಬಿ.ಪಿ.ಎಲ್ ಪಡಿತರ ಕಾರ್ಡ್‌ಗಳನ್ನು ನೀಡಲು ಸರ್ಕಾರ ಮುಂದಾಗಿದೆಯೇ ; ಅವುಗಳನ್ನು ಯಾವ ಕಾಲ ಮಿತಿಯಲ್ಲಿ ನೀಡಲಾಗುವುದು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಅರಣ್ಯ ಭೂಮಿಯನ್ನು ಒತ್ತುವರಿ ಮಾಡಿರುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೫೭೦ (೬೭೩) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒತ್ತುವರಿ ಮಾಡಲಾಗಿರುವ ಅರಣ್ಯ ಭೂಮಿಯ ಪ್ರಮಾಣವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಒತ್ತುವರಿಯಾದ ಅರಣ್ಯ ಪ್ರದೇಶದ ಎಷ್ಟು ಭೂಮಿಯನ್ನು ಮರು ವಶಪಡಿಸಿಕೊಳ್ಳಲಾಗಿದೆ ; ಎಷ್ಟು ಬಾಕಿ ಇದೆ ; (ವಿವರ ನೀಡುವುದು)

(ಇ) ಶಾಶ್ವತವಾಗಿ ಒತ್ತುವರಿಯಾಗುವುದನ್ನು ತಡೆಯಲು ಸರ್ಕಾರ ಯಾವ ಕ್ರಮಕೈಗೊಂಡಿದೆ ; ಬಾಕಿ ಒತ್ತುವರಿ ಜಮೀನನ್ನು ಯಾವ ಕಾಲಮಿತಿಯೊಳಗಾಗಿ ಮರು ವಶಪಡಿಸಿಕೊಳ್ಳಲಾಗುವುದು ?

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಅರಣ್ಯ ವ್ಯಾಪ್ತಿಯ ಅಪರಾಧಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೫೭೧ (೬೭೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲೆ ವ್ಯಾಪ್ತಿಯ ಅರಣ್ಯದಲ್ಲಿ ಮರಗಳ್ಳತನ, ಅಕ್ರಮ ಗಣಿಗಾರಿಕೆ ಕಾಡು ಪ್ರಾಣಿಗಳ ಭೇಟಿಯಂತಹ ಅಪರಾಧ ಪ್ರಕರಣಗಳು ಎಷ್ಟು ದಾಖಲಾಗಿವೆ ; (ವಿವರ ನೀಡುವುದು)

(ಆ) ಈ ಪ್ರಕರಣಗಳು ಪ್ರಸ್ತುತ ಯಾವ ಯಾವ ನ್ಯಾಯಾಲಯಗಳಲ್ಲಿ ವಿಚಾರಣೆಯಲ್ಲಿವೆ ; (ವಿವರ ನೀಡುವುದು)

(ಇ) ಈ ರೀತಿ ಅಕ್ರಮಂಗಳಲ್ಲಿ ಇಲಾಖಾ ಸಿಬ್ಬಂದಿಗಳು ಭಾಗಿಯಾಗಿರುವುದು ನಿಜವೇ ; ನಿಜವಾಗಿದ್ದಲ್ಲಿ, ಆರೋಪಿಗಳ ಸಂಖ್ಯೆ ಎಷ್ಟು ; (ಹೆಸರು ಹುದ್ದೆ ಸಹಿತ ವಿವರ ನೀಡುವುದು)

(ಈ) ಅಂತಹ ಸಿಬ್ಬಂದಿಗಳ ಮೇಲೆ ಇದುವರೆಗೂ ಯಾವ ರೀತಿಯ ಕ್ರಮಗಳು ಜರುಗಿಸಲಾಗಿದೆ ?

## ವಿಜಯಪುರ ಜಿಲ್ಲೆಯಲ್ಲಿರುವ ಸರ್ಕಾರಿ ಹಾಗೂ ಖಾಸಗಿ ಪದವಿ ಕಾಲೇಜುಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೫೭೨ (೬೭೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆ ವ್ಯಾಪ್ತಿಯಲ್ಲಿ ಎಷ್ಟು ಸರ್ಕಾರಿ ಹಾಗೂ ಖಾಸಗಿ ಪದವಿ ಕಾಲೇಜುಗಳಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕಾಲೇಜುಗಳಿಗೆ ಎಷ್ಟು ಬೋಧಕ ಮತ್ತು ಬೋಧಕೇತರ ಹುದ್ದೆಗಳು ಮಂಜೂರು ಆಗಿವೆ ; ಅವುಗಳಲ್ಲಿ ಭರ್ತಿಯಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು ; (ಹುದ್ದೆವಾರು ದಿನಾಂಕ ಸಹಿತ ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಸರ್ಕಾರವು ಯಾವ ಕಾಲಮಿತಿಯೊಳಗಾಗಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಿದೆ ?

## ವಿಜಯಪುರ ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಸಮುದಾಯ ಆರೋಗ್ಯ ಕೇಂದ್ರದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೫೭೩ (೬೭೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆ ವ್ಯಾಪ್ತಿಯಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಎಷ್ಟು ಸ್ವಂತ ಕಟ್ಟಡದಲ್ಲಿವೆ ; ಎಷ್ಟು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ ; ಮಂಜೂರಾದ ಹುದ್ದೆಗಳೆಷ್ಟು ; ಎಷ್ಟು ಹುದ್ದೆ ಖಾಲಿ ಇವೆ ; (ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲ ಮಿತಿಯೊಳಗಾಗಿ ಭರ್ತಿ ಮಾಡಲಾಗುವುದು ?

## ವಿಜಯಪುರ ಜಿಲ್ಲೆಯಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಪಡೆದವರ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೫೭೪ (೬೭೪) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿ ಇದುವರೆಗೂ ಎಷ್ಟು ವಿದ್ಯಾರ್ಥಿಗಳು ಕೌಶಲ್ಯಾಭಿವೃದ್ಧಿ ತರಬೇತಿಗಾಗಿ ಸೇರ್ಪಡೆಗೊಂಡಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದರಲ್ಲಿ ಎಷ್ಟು ಜನ ವಿದ್ಯಾರ್ಥಿಗಳು/ವಿದ್ಯಾರ್ಥಿನಿಯರು ತರಬೇತಿ ಪಡೆಯುತ್ತಿದ್ದಾರೆ ; ಈಗಾಗಲೇ ಎಷ್ಟು ವಿದ್ಯಾರ್ಥಿಗಳು ತರಬೇತಿ ಪಡೆದಿದ್ದಾರೆ ? (ವಿವರ ನೀಡುವುದು)

## ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಇನ್ನೂ ನೇಮಕಾತಿ ಆದೇಶ ನೀಡದಿರುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೫ (೫೮೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ೧,೨೪೨ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ಭರ್ತಿಗೆ ಪ್ರಕ್ರಿಯೆ ನಡೆಸಿ ಹಲವಾರು ವರ್ಷಗಳೇ ಕಳೆದಿದ್ದರೂ, ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಇದುವರೆಗೆ ನೇಮಕಾತಿ ಆದೇಶ ನೀಡದಿರುವುದರಿಂದ ಅವರುಗಳ ಬದುಕು ಅತಂತ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಇದುವರೆಗೆ ನೇಮಕಾತಿ ಆದೇಶ ನೀಡದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗುವುದು ?

## ಅನುದಾನ ರಹಿತ ಕನ್ನಡ ಮಾಧ್ಯಮ ಶಾಲೆಗಳು ಎದುರಿಸುತ್ತಿರುವ ಸಮಸ್ಯೆಗಳ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೬ (೫೯೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವ್ಯಾಸಂಗ ಮಾಡುತ್ತಿರುವ ಅನುದಾನರಹಿತ ಕನ್ನಡ ಮಾಧ್ಯಮ ಶಾಲೆಗಳ ಸಂಖ್ಯೆ ಎಷ್ಟು ; ಸದರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ ಎಷ್ಟು ;

(ಆ) ಸದರಿ ಅನುದಾನರಹಿತ ಕನ್ನಡ ಮಾಧ್ಯಮ ಶಾಲೆಗಳು ಸರ್ಕಾರದ ಬೆಂಬಲದ ಕೊರತೆಯಿಂದಾಗಿ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಗ್ರಾಮೀಣ ಭಾಗದಲ್ಲಿಯೇ ಬಹುತೇಕವಾಗಿ

ಕೇಂದ್ರೀಕೃತಗೊಂಡು, ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದಿರುವ ಬಡ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿರುವ ಅನುದಾನರಹಿತ ಕನ್ನಡ ಮಾಧ್ಯಮ ಶಾಲೆಗಳ ಸಬಲೀಕರಣಕ್ಕೆ ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಯಾವ ಕಾಲಮಿತಿಯೊಳಗೆ ಸದರಿ ಅನುದಾನರಹಿತ ಕನ್ನಡ ಮಾಧ್ಯಮ ಶಾಲೆಗಳ ಸಬಲೀಕರಣಕ್ಕೆ ಬೇಕಾದ ಯೋಜನೆ ಹಾಗೂ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಕ್ಕೆ ತರಲಾಗುವುದು ?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿನ ಬಹುತೇಕ ಶಿಕ್ಷಕರ ಹುದ್ದೆಗಳು ಖಾಲಿ ಇರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೭ (೫೯೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಮಂಜೂರಾಗಿರುವ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಬಹುತೇಕ ಶಿಕ್ಷಕರ ಹುದ್ದೆಗಳು ದೀರ್ಘಕಾಲದಿಂದ ಖಾಲಿ ಇರುವುದರಿಂದ ಶೈಕ್ಷಣಿಕವಾಗಿ ಅತ್ಯಂತ ಮುಖ್ಯ ಘಟ್ಟವಾದ ಪ್ರಾಥಮಿಕ, ಪ್ರೌಢಶಿಕ್ಷಣದ ಕಾಲಘಟ್ಟದಲ್ಲಿ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣ ಪಡೆಯುವಲ್ಲಿ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿ ಆ ಮೂಲಕ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಸಿಗುವಂತೆ ಸರ್ಕಾರ ಕ್ರಮ ವಹಿಸುವುದೇ ?

## ಸರ್ಕಾರಿ ಶಾಲೆಗಳ ಮಕ್ಕಳಿಗೆ ಶೂ ಮತ್ತು ಸಾಕ್ಸ್ ಖರೀದಿಗೆ ಅತ್ಯಂತ ಕಡಿಮೆ ಮೊತ್ತ ನಿಗದಿ ಮಾಡಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೭೮ (೫೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಶಾಲೆಗಳ ಮಕ್ಕಳಿಗೆ ಶೂ ಮತ್ತು ಸಾಕ್ಸ್ ಖರೀದಿಗೆ ಪ್ರಸ್ತುತ ನಿಗದಿಪಡಿಸಿರುವ ಮೊತ್ತ ಅತ್ಯಂತ ಕಡಿಮೆ ಇದ್ದು, ಪ್ರಸ್ತುತ ದಿನಮಾನದಲ್ಲಿ ಈ ಹಣದಲ್ಲಿ ಗುಣಮಟ್ಟದ ಶೂ ಮತ್ತು ಸಾಕ್ಸ್ ಖರೀದಿ ಸಾಧ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಸ್ತುತ ಮಾರುಕಟ್ಟೆ ದರವನ್ನು ಅವಲೋಕಿಸಿ, ಗುಣಮಟ್ಟದ ಶೂ ಮತ್ತು ಸಾಕ್ಸ್ ಖರೀದಿ ಮಾಡಲು ನೈಜವಾಗಿ ಬೇಕಾದ ಮೊತ್ತವನ್ನು ನಿಗದಿಪಡಿಸಲು ಸರ್ಕಾರ ಇದುವರೆಗೆ ಸೂಕ್ತ ಕ್ರಮ ವಹಿಸದಿರಲು ಕಾರಣಗಳೇನು ;

(ಇ) ಸರ್ಕಾರಿ ಶಾಲೆಗಳ ಮಕ್ಕಳಿಗೆ ಶೂ ಮತ್ತು ಸಾಕ್ಸ್ ಖರೀದಿಗೆ ನಿಗದಿಪಡಿಸಿರುವ ಅನುದಾನವನ್ನು ಪ್ರಸ್ತುತ ಮಾರುಕಟ್ಟೆ ದರವನ್ನು ಗಮನದಲ್ಲಿಟ್ಟುಕೊಂಡು ಗಣನೀಯವಾಗಿ ಹೆಚ್ಚಿಸಲು ಸರ್ಕಾರ ಈ ಕೂಡಲೇ ಕ್ರಮವಹಿಸುವುದೇ ?

## "ಅನ್ನ ಭಾಗ್ಯ ಯೋಜನೆ"ಯ ಹಣ ಫಲಾನುಭವಿಗಳ ಖಾತೆಗೆ ಕಳೆದ ೩ ತಿಂಗಳಿನಿಂದ ಜಮೆಯಾಗದಿರುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೫೭೯ (೫೯೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ "ಅನ್ನ ಭಾಗ್ಯ ಯೋಜನೆ" ಯ ಹಣ ಕಳೆದ ಮೂರು ತಿಂಗಳಿನಿಂದ ಫಲಾನುಭವಿಗಳ ಖಾತೆಗೆ ಜಮೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, "ಅನ್ನಭಾಗ್ಯ ಯೋಜನೆ" ಯ ಅನುಷ್ಠಾನಕ್ಕೆ ಪದೇ ಪದೇ ತಾಂತ್ರಿಕ ಅಂಶಗಳು ಅಡ್ಡಿಯಾಗುತ್ತಿರುವುದಕ್ಕೆ ಕಾರಣಗಳೇನು ;

(ಇ) ಇದುವರೆಗೆ "ಅನ್ನಭಾಗ್ಯ ಯೋಜನೆ" ಯ ಎಷ್ಟು ತಿಂಗಳ ಹಣ ಫಲಾನುಭವಿಗಳ ಖಾತೆಗೆ ಜಮೆ ಮಾಡಲು ಬಾಕಿ ಉಳಿದಿದೆ ;

(ಈ) ಫಲಾನುಭವಿಗಳ ಖಾತೆಗೆ ಹಣ ಜಮೆ ಮಾಡಲು ದೀರ್ಘ ಕಾಲದ ವಿಳಂಬವಾಗುತ್ತಿರುವುದನ್ನು ತಪ್ಪಿಸಲು ಸರ್ಕಾರ ಇದುವರೆಗೆ ಸೂಕ್ತ ಕ್ರಮವಹಿಸದೇ ಇರಲು ಕಾರಣಗಳೇನು ;

(ಉ) ಅನಗತ್ಯ ಹಾಗೂ ಕಾರಣವಾದ ವಿಳಂಬದಿಂದಾಗಿ, ಸಕಾಲದಲ್ಲಿ ಯೋಜನೆಯ ಲಾಭ ಪಡೆಯುವುದರಿಂದ ಫಲಾನುಭವಿಗಳು ವಂಚಿತರಾಗುತ್ತಿದ್ದು, ಇದನ್ನು ತಪ್ಪಿಸಲು ಸರ್ಕಾರ ಏನು ಕ್ರಮ ವಹಿಸಲಿದೆ ಹಾಗೂ ಯಾವ ಕಾಲಮಿತಿಯೊಳಗೆ ಬಾಕಿ ಇರುವ ಪೂರ್ಣ ಮೊತ್ತವನ್ನು ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗುವುದು ?

## ಡೆಂಗ್ಯೂ ನಿಯಂತ್ರಣಕ್ಕೆ ಕ್ರಮ ಕೈಗೊಂಡಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೦ (೬೦೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಡೆಂಗ್ಯೂ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಜೂನ್ ೨೦೨೪ ಅಂತ್ಯಕ್ಕೆ ಎಷ್ಟು ಡೆಂಗ್ಯೂ ಪ್ರಕರಣಗಳು ವರದಿಯಗಿವೆ ; ಮೃತಪಟ್ಟವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಡೆಂಗ್ಯೂ ಮಾರಣಾಂತಿಕವಾಗಿದ್ದು, ಇದರ ತಡೆಗೆ ಸರ್ಕಾರ ಕೈಗೊಂಡಿರುವ ಜಾಗೃತಿ ಹಾಗೂ ಮುನ್ನೆಚ್ಚರಿಕೆ ಕ್ರಮಗಳೇನು ; ಕಳೆದ ಒಂದು ವರ್ಷದಿಂದ ಡೆಂಗ್ಯೂ ತಡೆಗಟ್ಟಲು ಸರ್ಕಾರ ವೆಚ್ಚ ಮಾಡಿರುವ ಹಣ ಎಷ್ಟು ;

(ಇ) ಡೆಂಗ್ಯೂ ಪೀಡಿತ ರೋಗಿಗಳಿಗೆ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಲಭ್ಯವಿದೆಯೇ ; ರಾಜ್ಯಾದ್ಯಂತ ಖಾಸಗಿ ಆಸ್ಪತ್ರೆಗಳಲ್ಲೂ ಈ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡುವ ಕುರಿತು ಸರ್ಕಾರದ ನಿಲುವೇನು ?

## ಗೃಹ ಜ್ಯೋತಿ ಯೋಜನೆಯಡಿ ನೀಡಿರುವ ಉಚಿತ ವಿದ್ಯುತ್ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೧ (೬೦೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗೃಹಜ್ಯೋತಿ ಯೋಜನೆಯಡಿ ಈವರೆಗೆ ನೋಂದಾಯಿಸಲ್ಪಟ್ಟಿರುವ ಗ್ರಾಹಕರ ಸಂಖ್ಯೆ ಎಷ್ಟು ; ಈ ಪೈಕಿ ಪೂರ್ಣ ಪ್ರಮಾಣದಲ್ಲಿ ಹಾಗೂ ಭಾಗಶಃ ಯೋಜನೆಯ ಲಾಭ ಪಡೆದಿರುವ ಗ್ರಾಹಕರ ಸಂಖ್ಯೆ ಎಷ್ಟು ; (ಹೆಸ್ಕಾಂವಾರು ವಿವರ ನೀಡುವುದು)

(ಆ) ಉಚಿತ ವಿದ್ಯುತ್‌ಗೆ ಸಂಬಂಧಪಟ್ಟಂತೆ ಗ್ಯಾರಂಟಿ ಘೋಷಿಸುವಾಗ ನೀಡಲಾಗಿದ್ದ ಆಶ್ವಾಸನೆ ಏನು ; ಗ್ಯಾರಂಟಿ ಅನುಷ್ಠಾನಕ್ಕೆ ತರುವಾಗ ಷರತ್ತುಗಳನ್ನು ವಿಧಿಸಿದ್ದು ಏಕೆ ;

(ಇ) ಎಲ್ಲಾ ಗ್ರಾಹಕರಿಗೆ ೨೦೦ ಯೂನಿಟ್ ಉಚಿತ ವಿದ್ಯುತ್ ನೀಡುವ ಆಶ್ವಾಸನೆ ಈಡೇರಿಸುವ ಕುರಿತು ಸರ್ಕಾರದ ನಿಲುವೇನು ; ಎಲ್ಲಾ ಗ್ರಾಹಕರಿಗೆ ೨೦೦ ಯೂನಿಟ್ ಉಚಿತ ವಿದ್ಯುತ್ ನೀಡಲು ಆಗುವ ವೆಚ್ಚ ಎಷ್ಟು ; ಈಗ ಆಗುತ್ತಿರುವ ವೆಚ್ಚ ಎಷ್ಟು ? (ವಿವರ ನೀಡುವುದು)

## ಆಸ್ಪತ್ರೆಗಳಿಗೆ ಅಗತ್ಯ ಔಷಧಿ ಖರೀದಿಯಲ್ಲಿ ಆಗಿರುವ ವ್ಯತ್ಯಾಸಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೨ (೬೦೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಆಸ್ಪತ್ರೆಗಳ ನಿರ್ಮಾಣ ಹಾಗೂ ದುರಸ್ತಿಗೆ ಮೀಸಲಿಟ್ಟಿರುವ ಹಣ ಎಷ್ಟು ;

(ಆ) ಕಳೆದ ಒಂದು ವರ್ಷದಿಂದ ಆಸ್ಪತ್ರೆಗಳ ದುರಸ್ತಿಗೆ ವೆಚ್ಚ ಮಾಡಿರುವ ಹಣ ಎಷ್ಟು ; ಹೊಸದಾಗಿ ಎಷ್ಟು ಜಿಲ್ಲೆ/ತಾಲ್ಲೂಕು ಆಸ್ಪತ್ರೆ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳ ಕಟ್ಟಡ ನಿರ್ಮಾಣ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದ ಆಸ್ಪತ್ರೆಗಳಲ್ಲಿ ಔಷಧದ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಔಷಧ ಕೊರತೆಗೆ ಕಾರಣಗಳೇನು ; ಅಗತ್ಯ ಔಷಧವನ್ನು ಸಮಯಕ್ಕೆ ಸರಿಯಾಗಿ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಈ) ಆಸ್ಪತ್ರೆಗೆ ಅಗತ್ಯವಿರುವ ಔಷಧ ಖರೀದಿಯ ಟೆಂಡರ್ ಪ್ರಕ್ರಿಯೆಯಲ್ಲಿ ಆಗಿರುವ ವ್ಯತ್ಯಾಸಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಪರಿಶೀಲನೆ ನಡೆಸಲಾಗಿದೆಯೇ ; ಪರಿಶೀಲನೆ ವೇಳೆ ಕಂಡು ಬಂದಿರುವ ನ್ಯೂನತೆಗಳೇನು ? (ವಿವರ ನೀಡುವುದು)

## ಶರಾವತಿ ಭೂ ಅಂತರ್ಗತ ಯೋಜನೆ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೩ (೬೦೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶರಾವತಿ ಭೂ ಅಂತರ್ಗತ ಜಲವಿದ್ಯುತ್ ಯೋಜನೆಯನ್ನು ಕೈಗೆತ್ತಿಕೊಳ್ಳಲು ಸರ್ಕಾರ ಅನುಮತಿ ನೀಡಿದೆಯೇ ; ಇದರ ಯೋಜನಾ ವೆಚ್ಚ ಎಷ್ಟು ; ಯೋಜನೆಯಿಂದ ಎಷ್ಟು ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಆಗಲಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಯೋಜನೆಗೆ ಶರಾವತಿ ಕಣಿವೆ ವ್ಯಾಪ್ತಿಯ ಸಂಗಳೀಕ ಅಭಯಾರಣ್ಯ ಬಾಧಿತವಾಗುವ ಹಿನ್ನೆಲೆಯಲ್ಲಿ ಯೋಜನೆಗೆ ತೀವ್ರ ವಿರೋಧ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯೋಜನೆಗೆ ಅನುಮತಿ ನೀಡಲು ಕಾರಣಗಳೇನು ; ಯೋಜನೆಯಿಂದಾಗುವ ಪರಿಣಾಮಗಳ ಕುರಿತು ಅಧ್ಯಯನ ಆಗಿದೆಯೇ ; (ವರದಿಯ ಪ್ರತಿ ನೀಡುವುದು)

(ಇ) ಯೋಜನೆಗೆ ಟೆಂಡರ್ ಕರೆಯಲಾಗಿದೆಯೇ ; ಟೆಂಡರ್‌ನಲ್ಲಿ ಭಾಗವಹಿಸಿದ್ದ ಸಂಸ್ಥೆಗಳು ನಮೂದಿಸಿದ್ದ ಟೆಂಡರ್ ಮೊತ್ತ ಎಷ್ಟು; ಯಾವ ಸಂಸ್ಥೆಗೆ ಟೆಂಡರ್ ನೀಡಲಾಗಿದೆ ; (ವಿವರ ನೀಡುವುದು)

(ಈ) ಯೋಜನೆ ಜಾರಿಯಿಂದಾಗಿ ಶರಾವತಿ ನದಿ ಹರಿವಿನಲ್ಲಿ ಇಳಿಕೆಯಾಗುವ ಹಾಗೂ ಅಭಯಾರಣ್ಯ ಬಾಧಿತವಾಗುವ ಕಾರಣ ಯೋಜನೆಯನ್ನು ಕೈಬಿಡುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಶಾಲೆಗಳಲ್ಲಿ ಶಾಲಾಭಿವೃದ್ಧಿ ಸಮಿತಿ ರಚಿಸದಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೪ (೬೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಶಿಕ್ಷಣ ಹಕ್ಕು ಕಾಯ್ದೆಯ ೨೧ನೇ ವಿಧಿ ಪ್ರಕಾರ ಶಾಲೆಗಳಲ್ಲಿ ಶಾಲಾಭಿವೃದ್ಧಿ ಸಮಿತಿಯನ್ನು ರಚಿಸಲು ಸರ್ಕಾರ ಆದೇಶ ಹೊರಡಿಸಿದೆಯೇ ; ಆದೇಶ ಹೊರಡಿಸಿದ್ದು ಯಾವಾಗ ; (ಆದೇಶದ ಪ್ರತಿ ಒದಗಿಸುವುದು)

(ಇ) ಸರ್ಕಾರದ ಈ ಆದೇಶವನ್ನು ಎಲ್ಲಾ ಶಾಲೆಗಳು ಪಾಲಿಸಿವೆಯೇ ; ಹಾಗಿದ್ದಲ್ಲಿ ಈವರೆಗೆ ಎಷ್ಟು ಶಾಲೆಗಳು ಶಾಲಾಭಿವೃದ್ಧಿ ಸಮಿತಿಯನ್ನು ರಚಿಸಿವೆ ; ಶಾಲಾಭಿವೃದ್ಧಿ ಸಮಿತಿ ರಚನೆಯಲ್ಲಿ ರಾಜ್ಯದಲ್ಲಿ ಸಾಧಿಸಿರುವ ಪ್ರಗತಿ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಸಮುದಾಯದ ಪಾಲ್ಗೊಳ್ಳುವಿಕೆಗಾಗಿ ಶಾಲೆಗಳಲ್ಲಿ ಶಾಲಾ ನಿರ್ವಹಣಾ ಸಮಿತಿ ರಚಿಸಲು ಸೂಚಿಸಲಾಗಿದ್ದು, ಎಲ್ಲಾ ಶಾಲೆಗಳಲ್ಲಿ ಶಾಲಾಭಿವೃದ್ಧಿ ಸಮಿತಿಯನ್ನು ಯಾವ ಕಾಲಮಿತಿಯಲ್ಲಿ ರಚಿಸಲಾಗುವುದು ಮತ್ತು ಕೈಗೊಂಡಿರುವ ಕ್ರಮಗಳೇನು ?

## ಆಯುಷ್ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೮೫ (೬೧೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಆಯುಷ್ ಇಲಾಖೆಯಲ್ಲಿ ಜಿಲ್ಲಾ ಆಯುಷ್ ಅಧಿಕಾರಿಗಳ ಅವಶ್ಯಕತೆ ಇದೆಯೇ ; ಹಾಗಿದ್ದಲ್ಲಿ, ಇವರಿಗೆ ನಿಗದಿಪಡಿಸಿರುವ ಜವಾಬ್ದಾರಿ ಮತ್ತು ಕರ್ತವ್ಯಗಳ ಮಾಹಿತಿ ನೀಡುವುದು)

(ಆ) ಆಯುಷ್ ಇಲಾಖೆಯ ತಾಲ್ಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ಒಳರೋಗಿಗಳಿಗೆ ಚಿಕಿತ್ಸೆ ನೀಡಲು ಮಾನವ ಸಂಪನ್ಮೂಲಗಳ ಕೊರತೆಯಿದೆಯೇ ; ಹಾಗಿದ್ದಲ್ಲಿ, ಯಾವ ಶ್ರೇಣಿಯ ಸಿಬ್ಬಂದಿಗಳ ಕೊರತೆಯಿದೆ ಮತ್ತು ಕೊರತೆಯಿರುವ ಸಿಬ್ಬಂದಿಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗಿದೆ ; (ವಿವರ ನೀಡುವುದು)

(ಇ) ಆಯುಷ್ ಇಲಾಖೆಯಲ್ಲಿ ಪ್ರೈಮರಿ ಸೆಕೆಂಡರಿ ಟರ್ಷಿಯರಿ ಹಂತದ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆಯೇ ; ಕಾರ್ಯನಿರ್ವಹಿಸದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಆಸ್ಪತ್ರೆಗಳನ್ನು ತೆರೆಯಲು ಕ್ರಮ ವಹಿಸಲಾಗುವುದು ; (ಮಾಹಿತಿ ನೀಡುವುದು)

(ಈ) ರಾಜ್ಯದ ಆಯುಷ್ ಇಲಾಖೆಯಲ್ಲಿರುವ 'ಎ' ಮತ್ತು 'ಬಿ' ಗ್ರೂಪ್ ಹುದ್ದೆಗಳಿಗೆ ಸಿ ಅಂಡ್ ಆರ್ ನಿಯಮಗಳನ್ನು ರೂಪಿಸಿಕೊಂಡಿದೆಯೇ; ನಿಯಮಾನುಸಾರ ಸಿ ಅಂಡ್ ಆರ್ ನಿಯಮಗಳನ್ನು ಕಾಲಕಾಲಕ್ಕೆ ಪರಿಷ್ಕರಿಸಲಾಗಿದೆಯೇ ? (ಸಿ ಅಂಡ್ ಆರ್ ನಿಯಮಗಳ ಸಹಿತ ಮಾಹಿತಿ ನೀಡುವುದು)

## ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದಿರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೮೬ (೬೧೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು; ಈ ಹುದ್ದೆಗಳು ಯಾವುವು ; ಈ ಹುದ್ದೆಗಳು ಯಾವ ದಿನಾಂಕದಿಂದ ಖಾಲಿ ಉಳಿದಿವೆ ; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದಿಂದ ಅನುಮತಿ ಪಡೆಯಲಾಗಿದೆಯೇ ; ಸರ್ಕಾರ ಅನುಮತಿ ನೀಡಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಕೆ.ಪಿ.ಟಿ.ಸಿ.ಎಲ್ ನಲ್ಲಿ ರೂಪಿಸಿಕೊಂಡಿರುವ ಆರ್ ಅಂಡ್ ಪಿ ನಿಯಮಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೮೭ (೬೧೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕ.ವಿ.ಪ್ರ.ನಿ.ನಿ ದಲ್ಲಿ ರೂಪಿಸಿಕೊಂಡಿರುವ ಆರ್ ಅಂಡ್ ಪಿ ನಿಯಮಗಳಲ್ಲಿ ಪದವೀಧರ ಸಹಾಯಕ ಅಭಿಯಂತರರು(ವಿ) ರವರುಗಳಿಗೆ ಪದೋನ್ನತಿಯನ್ನು ಎಷ್ಟು ವರ್ಷಕ್ಕೊಮ್ಮೆ ಮತ್ತು ಯಾವ ಪ್ರತಿಶತದಲ್ಲಿ ನೀಡಲು ನಿಯಮ ರೂಪಿಸಲಾಗಿದೆ ; ಈ

ನಿಯಮಗಳಂತೆ ೧೪ ವರ್ಷಕ್ಕೂ ಹೆಚ್ಚು ಸೇವೆ ಸಲ್ಲಿಸಿರುವ ೨೬೭ ಪದವೀಧರ ಸಹಾಯಕ ಅಭಿಯಂತರರು(ವಿ) ರವರುಗಳಿಗೆ ಪದೋನ್ನತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅರ್ಹರಿರುವ ಪದವೀಧರ ಸಹಾಯಕ ಅಭಿಯಂತರರು(ವಿ) ರವರುಗಳಿಗೆ ಯಾವ ಕಾಲಮಿತಿಯೊಳಗೆ ಪದೋನ್ನತಿ ನೀಡಲು ಸರ್ಕಾರ ಕ್ರಮವಹಿಸುವುದು ; (ಸಂಪೂರ್ಣ ವಿವರ ನೀಡುವುದು)

(ಇ) ಕ.ವಿ..ಪ್ರ.ನಿ.ನಿ ಯಲ್ಲಿ ಡಿಪ್ಲೋಮ ಮತ್ತು ಪದವೀಧರ ಅಭಿಯಂತರರ ನೇಮಕ ಮತ್ತು ಪದೋನ್ನತಿಯಲ್ಲಿ ಇರುವ ತಾರತಮ್ಯಗಳನ್ನು ಸರಿಪಡಿಸುವಂತೆ ಸರ್ಕಾರಕ್ಕೆ ಸ್ವೀಕೃತವಾಗಿರುವ ಮನವಿಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ವಿದ್ಯುತ್ ದರದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೮ (೬೨೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ದೇವಸ್ಥಾನಗಳಿಗೆ ಬಳಸುವ ಒಂದು ಯುನಿಟ್ ವಿದ್ಯುತ್‌ಗೆ ಎಷ್ಟು ದರವನ್ನು ನಿಗದಿಪಡಿಸಿದೆ ;

(ಆ) ರಾಜ್ಯದಲ್ಲಿ ಸರ್ಕಾರವು ಮಸೀದಿ ಮತ್ತು ಚರ್ಚ್‌ಗಳು ಬಳಸುವ ಒಂದು ಯುನಿಟ್ ವಿದ್ಯುತ್‌ಗೆ ಎಷ್ಟು ದರವನ್ನು ನಿಗದಿಪಡಿಸಿದೆ ;

(ಇ) ಗುರುದ್ವಾರ, ದರ್ಗಾ ಹಾಗೂ ಮದರಸಗಳು ಬಳಸುವ ಒಂದು ಯುನಿಟ್ ವಿದ್ಯುತ್‌ಗೆ ಎಷ್ಟು ದರವನ್ನು ನಿಗದಿಪಡಿಸಿದೆ ?

## ಹಲಾಲ್ ಪ್ರಮಾಣ ಪತ್ರ ನೀಡುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮೯ (೬೧೯) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹಲಾಲ್ ಪ್ರಮಾಣ ಪತ್ರವನ್ನು ಸರ್ಕಾರವು ನೀಡುತ್ತಿದೆಯೇ ; ಅದಕ್ಕಾಗಿ ಪ್ರತ್ಯೇಕ ಇಲಾಖೆಯನ್ನು ರಚಿಸಲಾಗಿದೆಯೇ ; ಹಲಾಲ್ ಪ್ರಮಾಣೀಕೃತ ಆಹಾರ ಎಂಬುದಾಗಿ ಜಾಹೀರಾತು ನೀಡಿ ಮಾರಾಟ ಮಾಡುವ ವಸ್ತುಗಳ ಕುರಿತು ಸರ್ಕಾರದ ನಿಲುವೇನು ;

(ಆ) ಹಲಾಲ್ ಪ್ರಮಾಣೀಕೃತ ಆಹಾರವನ್ನು ಮಾರಾಟ ಮಾಡುವವರಿಂದ ವಿಶೇಷ ತೆರಿಗೆ ಸಂಗ್ರಹಿಸುವ ಕುರಿತು ಸರ್ಕಾರದ ನಿಲುವೇನು ;

(ಇ) ಹಲಾಲ್ ಪ್ರಮಾಣೀಕೃತ ಆಹಾರವನ್ನು ಮಾರಾಟ ಮಾಡುವವರು ತಮ್ಮ ಮಳಿಗೆಯ ಹೊರಗೆ ಸಾರ್ವಜನಿಕರಿಗೆ ತಿಳಿಯುವ ರೀತಿಯಲ್ಲಿ ಹಲಾಲ್ ಎಂದರೆ ಏನು ಎಂಬುದರ ಕುರಿತು ಸ್ಪಷ್ಟ ಮಾಹಿತಿಯನ್ನು ಜಾಹೀರಾತು ರೂಪದಲ್ಲಿ ದೊಡ್ಡದಾಗಿ ಪ್ರದರ್ಶಿಸುವ ಬಗ್ಗೆ ಸರ್ಕಾರದ ನಿಲುವೇನು ; ಈ ಕುರಿತು ಸರ್ಕಾರ ಯಾವಾಗ ಆದೇಶ ಹೊರಡಿಸಲಿದೆ ?

## ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೯೦ (೬೨೩) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು; ಖಾಸಗಿ ವೈದ್ಯಕೀಯ ಕಾಲೇಜುಗಳು ಹಾಗೂ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶಕ್ಕೆ ಅವಕಾಶವಿದೆ ; (ವಿವರ ನೀಡುವುದು)

(ಆ) ಸರ್ಕಾರಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಬೋಧಕ ಹಾಗೂ ಬೋಧಕೇತರರ ಹುದ್ದೆವಾರು ವಿವರ ನೀಡುವುದು)

(ಇ) ಸರ್ಕಾರಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ನೀಡಲಾಗುವ ಮೂಲವೇತನ ಹಾಗೂ ಇತರ ಭತ್ಯೆಗಳು ಎಷ್ಟು ; ಆಯ್ಕೆ ಕಾಲಿಕ ವೇತನ ಬಡ್ತಿಯನ್ನು ಎಷ್ಟು ವರ್ಷಗಳಿಗೊಮ್ಮೆ ನೀಡಲಾಗುತ್ತದೆ ;

(ಈ) ಕಾರವಾರ ವೈದ್ಯಕೀಯ ಶಿಕ್ಷಣ ಸಂಸ್ಥೆಯಲ್ಲಿ ಕಳೆದ ೭ ವರ್ಷಗಳಲ್ಲಿ ಎಷ್ಟು ಬೋಧಕ ಸಿಬ್ಬಂದಿಗಳಿಗೆ ಆಯ್ಕೆ ಕಾಲಿಕ ವೇತನ ಬಡ್ತಿ ನೀಡಲಾಗಿದೆ ; ಎಷ್ಟು ಬೋಧಕ ಸಿಬ್ಬಂದಿಗಳಿಗೆ ನೀಡಲು ಬಾಕಿ ಇದೆ ; ಯಾವಾಗ ಬಾಕಿ ಮೊತ್ತ ಪಾವತಿಸಲಾಗುವುದು ; (ವಿವರ ನೀಡುವುದು)

(ಉ) ಕಾರವಾರ ವೈದ್ಯಕೀಯ ಶಿಕ್ಷಣ ಸಂಸ್ಥೆಯಲ್ಲಿ ನಡೆದಿರುವ ಭ್ರಷ್ಟಾಚಾರ, ಅವ್ಯವಹಾರಗಳ ಬಗ್ಗೆ ವಿಚಾರಣೆ ನಡೆಸಲು ಸಮಿತಿ ರಚಿಸುವ ಬಗ್ಗೆ ಸರ್ಕಾರದ ನಿಲುವೇನು ?

## ಡೆಂಗ್ಯೂ ಜ್ವರದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೯೧ (೬೨೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಳೆಗಾಲದ ಸಮಯದಲ್ಲಿ ಹರಡುವ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ; ಉಚಿತ ಚಿಕಿತ್ಸೆ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಲ್ಲಿ ಸದರಿ ಬಿಲ್ಲಿನ ಮೊತ್ತವನ್ನು ಸರ್ಕಾರದಿಂದ ಪಾವತಿಸಲು ಕೈಗೊಂಡ ಕ್ರಮಗಳೇನು ;

(ಆ) ಡೆಂಗ್ಯೂ ಜ್ವರದಿಂದ ಭಾದಿತರಾದವರ ಸಂಖ್ಯೆ ಎಷ್ಟು ; ಮರಣ ಹೊಂದಿದವರ ಸಂಖ್ಯೆ ಎಷ್ಟು ; ಮರಣ ಹೊಂದಿದವರಿಗೆ ಸರ್ಕಾರದಿಂದ ಪರಿಹಾರ ನೀಡಲಾಗುವುದೇ ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ವೈದ್ಯಕೀಯ ತುರ್ತು ಪರಿಸ್ಥಿತಿ ಘೋಷಣೆ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಆಶಾ ಕಾರ್ಯಕರ್ತೆಯರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೫೯೨ (೬೨೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಆಶಾ ಕಾರ್ಯಕರ್ತೆಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಆಶಾ ಕಾರ್ಯಕರ್ತೆಯರಿಗೆ ನೀಡಲಾಗುವ ಗೌರವ ಧನವೆಷ್ಟು; ಪ್ರತಿ ತಿಂಗಳು ಗೌರವ ಧನ ಪಾವತಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಆಶಾ ಕಾರ್ಯಕರ್ತೆಯರು ಗ್ರಾಮೀಣ ಆರೋಗ್ಯ ಸೇವೆಯಲ್ಲಿ ಅತೀ ಅವಶ್ಯಕತೆ ಇರುವ ತಳವಮಟ್ಟದ ಆರೋಗ್ಯ ಕಾರ್ಯಕರ್ತೆಯರಾಗಿದ್ದು, ಅವರನ್ನು ಖಾಯಂಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಡೆಂಗ್ಯೂ ಜ್ವರದ ಜಾಗರೂಕತೆ ಹಾಗೂ ಔಷಧಿ ವಿತರಣೆಯಲ್ಲಿ ಎಷ್ಟು ಆಶಾ ಕಾರ್ಯಕರ್ತೆಯರು ತೊಡಗಿಕೊಂಡಿದ್ದಾರೆ ; ಈ ಆಶಾ ಕಾರ್ಯಕರ್ತೆಯರಿಗೆ ನೀಡಲಾಗುತ್ತಿರುವ ಸೌಲಭ್ಯಗಳೇನು ; ಆಶಾ ಕಾರ್ಯಕರ್ತೆಯರಿಗೆ ಬಿ.ಪಿ.ಎಲ್ ಕಾರ್ಡ್ ನೀಡಲು ಕ್ರಮ ಕೈಗೊಳ್ಳಲಾಗಿದೆಯೇ ?

## ಬಳ್ಳಾರಿಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಾಮಗಾರಿ ಕುಂಠಿತಗೊಂಡಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೯೩ (೫೭೮) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ನಗರದಲ್ಲಿನ ಗ್ರಾಮೀಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಬರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ ಕಾಮಗಾರಿಯು ಪ್ರಾರಂಭಗೊಂಡಿದ್ದು ಯಾವಾಗ ; ಸದರಿ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ ; ಈ ಕಾಮಗಾರಿ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ನಿರ್ಮಾಣ ಕಾಮಗಾರಿ ಕುಂಠಿತವಾಗಲು ಕಾರಣಗಳೇನು ; ನಿಗದಿತ ಅವಧಿಯೊಳಗೆ ಕಾಮಗಾರಿಯನ್ನು ಮುಕ್ತಾಯಗೊಳಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ ;

(ಇ) ಬಳ್ಳಾರಿಯಲ್ಲಿ ನಿಮಾನ್ಸ್ ಆಸ್ಪತ್ರೆಯ ಸಹಯೋಗದೊಂದಿಗೆ ಮಾನಸಿಕ ಆಸ್ಪತ್ರೆ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಮಾನಸಿಕ ಆಸ್ಪತ್ರೆ ನಿರ್ಮಿಸಲು ಅನುಮತಿ ನೀಡುವುದೇ ; ಇಲ್ಲವಾದಲ್ಲಿ ಸಕಾರಣದೊಂದಿಗೆ ಮಾಹಿತಿ ನೀಡುವುದು ?

## ರಾಜ್ಯದಲ್ಲಿನ ಶಾಲಾ ಕಟ್ಟಡಗಳ ನಿರ್ಮಾಣಕ್ಕೆ ಹೆಚ್ಚಿನ ಅನುದಾನ ನೀಡುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೯೪ (೫೭೯) ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಶಾಲಾ ಶಿಕ್ಷಣ ಇಲಾಖೆಯ ಶಾಲಾ ಕಟ್ಟಡಗಳ ನಿರ್ಮಾಣ/ಅಭಿವೃದ್ಧಿಗಾಗಿ ಕಳೆದ ಮೂರು ವರ್ಷಗಳಲ್ಲಿ ನೀಡಲಾದ ಅನುದಾನ ಎಷ್ಟು; ಇವುಗಳಲ್ಲಿ ಎಷ್ಟು ಕಟ್ಟಡಗಳ/ಕೊಠಡಿಗಳ ನಿರ್ಮಾಣ ಮಾಡಲಾಗಿದೆ ; (ಜಿಲ್ಲಾವಾರು ವಿವರಗಳೊಂದಿಗೆ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿನ ಸರ್ಕಾರಿ ಶಾಲೆಗಳ ಕಟ್ಟಡಗಳ ನಿರ್ಮಾಣ/ಅಭಿವೃದ್ಧಿಗೆ ಪ್ರತ್ಯೇಕವಾಗಿ ಅನುದಾನವನ್ನು ಮೀಸಲಿಟ್ಟು ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಶಿಕ್ಷಣ ಇಲಾಖೆಯಿಂದ ನಿರ್ಮಾಣ ಮಾಡಲಾದ/ಅಭಿವೃದ್ಧಿ ಪಡಿಸಲಾದ ಶಾಲಾ ಕಟ್ಟಡಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ಸಿ.ಇ.ಟಿ. ಪರೀಕ್ಷೆಯಲ್ಲಿ ಅಂಗವಿಕಲರಿಗೆ ಮೀಸಲಿಟ್ಟ ಸೀಟುಗಳನ್ನು ಅನರ್ಹರು ಪಡೆಯುತ್ತಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೯೫ (೫೮೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸಿಇಟಿ ಪ್ರವೇಶ ಪರೀಕ್ಷೆಯಲ್ಲಿ ಅಂಗವಿಕಲರಿಗೆ ಮೀಸಲಿಟ್ಟಿರುವ ಸೀಟುಗಳನ್ನು ಪಡೆಯಲು ಅನರ್ಹರು

ಪ್ರಯುತ್ನಿಸುತ್ತಿರುವುದು ನಿಜವೇ ; ಹಾಗಿದ್ದಲ್ಲಿ ಅವರ ವಿವರಗಳೊಂದಿಗೆ ಮಾಹಿತಿ ನೀಡುವುದು ;

(ಆ) ಈ ರೀತಿ ಶೇ.40ಕ್ಕಿಂತ ಕಡಿಮೆ ಅಂಗವಿಕಲತೆ ಇದ್ದರೂ ಸಹ ಹೆಚ್ಚಾಗಿ ಅಂಗವಿಕಲತೆಯನ್ನು ತೋರಿಸಿರುವ ಅಧಿಕಾರಿ/ವೈದ್ಯರುಗಳ ಮೇಲೆ ಕ್ರಮಕೈಗೊಳ್ಳುವಂತೆ ಶಿಫಾರಸ್ಸು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಅನರ್ಹರು ಮತ್ತು ಶೇ.40ಕ್ಕಿಂತ ಕಡಿಮೆ ಅಂಗವಿಕಲತೆಯನ್ನು ಹೊಂದಿರುವವರು ಈ ಅಂಗವಿಕಲ ಕೋಟಾದ ಸೀಟುಗಳನ್ನು ಅನರ್ಹರು. ಪಡೆಯದಂತೆ ತೆಗೆದುಕೊಂಡಿರುವ ಕ್ರಮವೇನು ; (ಮಾಹಿತಿ ನೀಡುವುದು)

(ಈ) ಈ ಅಂಗವಿಕಲರ ಕೋಟಾದ ಸೀಟುಗಳನ್ನು ಪಡೆಯಲು ಅಂಗವಿಕಲರ ಪ್ರಮಾಣ ಪತ್ರವನ್ನು ನಿಗಧಿಪಡಿಸಿರುವ ಜಿಲ್ಲಾ ಮಟ್ಟದ ಅಧಿಕಾರಿ/ಜಿಲ್ಲಾ ಸರ್ಕಾರಿ ವೈದ್ಯರುಗಳಲ್ಲಿ ಮುಂಚಿತವಾಗಿಯೇ ಪರಿಶೀಲನೆ ಮಾಡಿಸಿ ಅರ್ಜಿಸಲ್ಲಿಸುವಂತೆ ತೆಗೆದುಕೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳಿಗೆ ನರರೋಗ ತಜ್ಞರುಗಳನ್ನು ನೇಮಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೯೬ (೫೮೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಜಿಲ್ಲಾಸ್ಪತ್ರೆಗಳಲ್ಲಿರುವ ನರರೋಗ ತಜ್ಞರ ಸಂಖ್ಯೆ ಎಷ್ಟು; ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಸಂಖ್ಯೆಯಲ್ಲಿದ್ದಾರೆ ; (ಮಾಹಿತಿ ನೀಡುವುದು)

(ಆ) ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳು/ವೈದ್ಯಕೀಯ ಕಾಲೇಜುಗಳಲ್ಲಿ ನಿಮಾನ್ಸ್ ಮಾದರಿಯಲ್ಲಿ ನರರೋಗ ವಿಭಾಗದ ಸಾಮರ್ಥ್ಯವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ನಿಟ್ಟಿನಲ್ಲಿ ನಿಮಾನ್ಸ್ ಆಸ್ಪತ್ರೆಯೊಂದಿಗೆ ಒಡಂಬಡಿಕೆಯನ್ನು ಮಾಡಿಕೊಂಡು, ಆಯ್ದ ಆಸ್ಪತ್ರೆಗಳ ವೈದ್ಯರುಗಳಿಗೆ ನಿಮಾನ್ಸ್‌ನಿಂದ ಸೂಕ್ತ ತರಬೇತಿಗಳನ್ನು ಕೊಡಿಸಲು ಹಾಗೂ ಆ ಮೂಲಕ ಜಿಲ್ಲೆಗಳಲ್ಲೂ ಸಹ ಉತ್ತಮ ನರರೋಗದ ವಿಭಾಗಗಳನ್ನು ಸ್ಥಾಪಿಸಲು ಇರುವ ಸರ್ಕಾರದ ಚಿಂತನೆಗಳೇನು ; (ವಿವರ ನೀಡುವುದು)

(ಈ) ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಉತ್ತಮ ನರರೋಗ ವಿಭಾಗಗಳನ್ನು ಸ್ಥಾಪಿಸಲು ಸರ್ಕಾರದ ತೀರ್ಮಾನಗಳೇನು ? (ಮಾಹಿತಿ ನೀಡುವುದು)

## ಆಯುಷ್ ಇಲಾಖೆಯಲ್ಲಿನ ಅಧಿಕಾರಿಗಳು ಹಲವು ವರ್ಷಗಳಿಂದ ಒಂದೇ ಹುದ್ದೆಯಲ್ಲಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೯೭ (೫೮೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ಹಿಸುತ್ತಿರುವ ಜಿಲ್ಲಾ ಆಯುಷ್ ಅಧಿಕಾರಿಗಳ ಸಂಖ್ಯೆ ಎಷ್ಟು ; ಇವರುಗಳ ಕೆಲಸ ಕಾರ್ಯಗಳೇನು ; ಸದರಿಯವರು ಒಂದೇ ಹುದ್ದೆಯಲ್ಲಿ/ಜಿಲ್ಲೆಯಲ್ಲಿ ಎಷ್ಟು ವರ್ಷಗಳ ಕಾಲ ಕಾರ್ಯನಿರ್ವಹಿಸಬಹುದು ; (ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಿಂದ ಒಂದೇ ಜಾಗ/ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಆಯುಷ್ ಅಧಿಕಾರಿಗಳ ಸಂಖ್ಯೆ ಎಷ್ಟು ; ಸದರಿ ಅಧಿಕಾರಿಗಳು ಯಾವ ವರ್ಷದಿಂದ ಕಾರ್ಯನಿರ್ವಹಿಸುತ್ತಿದ್ದಾರೆ ; (ಸಂಪೂರ್ಣ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಒಂದೇ ಜಿಲ್ಲೆಯಲ್ಲಿ ೦೩ ವರ್ಷಗಳಿಗಿಂತ ಹೆಚ್ಚು ಕಾಲ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಆಯುಷ್ ಅಧಿಕಾರಿಗಳನ್ನು ಕೂಡಲೇ ವರ್ಗಾಯಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಆಡಳಿತದಲ್ಲಿ ಪಾರದರ್ಶಕತೆ ತರುವ ನಿಟ್ಟಿನಲ್ಲಿ ಜಿಲ್ಲಾ ಆಯುಷ್ ಅಧಿಕಾರಿಗಳನ್ನು ಪ್ರತಿ ೦೩ ವರ್ಷಗಳಿಗೊಮ್ಮೆ ಕಡ್ಡಾಯವಾಗಿ ವರ್ಗಾಯಿಸಲು ಸರ್ಕಾರದ ಕ್ರಮಗಳೇನು ; (ಮಾಹಿತಿ ನೀಡುವುದು)

(ಉ) ಔಷಧಿ ಖರೀದಿ ಹಾಗೂ ಇತರೆ ಟೆಂಡರ್ ಸಂಬಂಧಿತ ವಿಷಯದಲ್ಲಿ ಕೆಲವು ಜಿಲ್ಲಾ ಆಯುಷ್ ಅಧಿಕಾರಿಗಳು ಕೆ.ಟಿ.ಪಿ ಆಕ್ಟ್ ವಿರುದ್ಧವಾಗಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಸರ್ಕಾರಿ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-**

೫೯೮ (೬೩೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಪ್ರಾಥಮಿಕ (೧ ರಿಂದ ೫ ಹಾಗೂ ೬ ರಿಂದ ೮ನೇ ತರಗತಿಗಳಿಗೆ) ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಇಲ್ಲಿಯವರೆಗೂ ನಿವೃತ್ತಿ, ನಿಧನ ಹಾಗೂ ಪದೋನ್ನತಿ ಹಾಗೂ ರಾಜೀನಾಮೆಯಿಂದ ತೆರವಾಗಿರುವ ಹುದ್ದೆಗಳೆಷ್ಟು ; (ಪ್ರತ್ಯೇಕವಾಗಿ ವಿವರವಾದ ಮಾಹಿತಿ ನೀಡುವುದು)

(ಆ) ಪ್ರಸ್ತುತ ತೆರವಾಗಿರುವ ಹುದ್ದೆಗಳಲ್ಲಿ ಆರ್ಥಿಕ ಇಲಾಖೆ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ ; (ವಿವರವಾದ ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಇ) ಆರ್ಥಿಕ ಇಲಾಖೆ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಿದ್ದಲ್ಲಿ, ನೇಮಕಾತಿ ಪ್ರಕ್ರಿಯೆಗಳು ಯಾವ ಹಂತದಲ್ಲಿವೆ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಸಣ್ಣ ಮತ್ತು ಮಧ್ಯಮ ಕಾಫಿ ಬೆಳೆಗಾರರ ೧೦ ಹೆಚ್.ಪಿ ವರೆಗಿನ ನೀರಾವರಿ ವಿದ್ಯುತ್ ಪಂಪ್‌ಸೆಟ್‌ಗಳ ಶುಲ್ಕದ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

ಅರ್ಜಿ (೭೩೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ರಾಜ್ಯದಲ್ಲಿನ ಸಣ್ಣ ಮತ್ತು ಮಧ್ಯಮ ಕಾಫಿ ಬೆಳೆಗಾರರ ೧೦HP ವರೆಗಿನ ನೀರಾವರಿ ವಿದ್ಯುತ್ ಪಂಪ್ ಸೆಟ್‌ಗಳ ವಿದ್ಯುತ್ ಶುಲ್ಕವನ್ನು ಪಾವತಿಸಲು ವಿಧಿಸಿರುವ ಷರತ್ತುಗಳೇನು ;

(ಆ) ಸರ್ಕಾರಿ ಆದೇಶ ಸಂಖ್ಯೆ:ಎನರ್ಜಿ/೫೨೧/PSR/೨೦೨೧, ದಿನಾಂಕ:೨೦.೦೭.೨೦೨೨ ರಲ್ಲಿ ೧೦HP ವರೆಗಿನ ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಶುಲ್ಕವನ್ನು ಸಣ್ಣ ಮತ್ತು ಮಧ್ಯಮ ಕಾಫಿ, ಬೆಳೆಗಾರರು ಬಳಸಿದ ವಿದ್ಯುತ್ ಬಿಲ್ಲುಗಳನ್ನು ಪಾವತಿಸಿದ ನಂತರ ರೈತರ ಖಾತೆಗೆ ಮರುಪಾವತಿ ಮಾಡುವ ಷರತ್ತಿನ ಆದೇಶದಿಂದ ರೈತರ ವಿದ್ಯುತ್ ಬಿಲ್ಲು ಪಾವತಿಸಲು ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಷರತ್ತುನ್ನು ಸಡಿಲಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಇ) ಸದರಿ ಯೋಜನೆಯು ಜಾರಿಯಲ್ಲಿದೆಯೇ ; ಕೊಡಗು ಜಿಲ್ಲೆಗೆ ಸಂಬಂಧಿಸಿದಂತೆ ಸದರಿ ಯೋಜನೆಯ ಅಡಿಯಲ್ಲಿ ಬರುವ ಅರ್ಹ ಫಲಾನುಭವಿಗಳ ಸಂಖ್ಯೆ ಎಷ್ಟು ?

## ಶ್ರೀಗಂಧ ಬೆಳೆಯ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೦೦ (೭೩೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಶ್ರೀಗಂಧ ಬೆಳೆಯಲು ಮತ್ತು ಮಾರಾಟ ಮಾಡಲು ಅರಣ್ಯ ಇಲಾಖೆಯ ಅನುಮತಿ ಅಗತ್ಯವಿದೆಯೇ ; ಅಗತ್ಯವಿದ್ದಲ್ಲಿ ಈ ಸಂಬಂಧ ಇಲಾಖೆಯು ರೂಪಿಸಿರುವ ನಿಯಮಗಳೇನು ; ಹೆಚ್ಚು ಶ್ರೀಗಂಧ ಬೆಳೆಯಲು ಅರಣ್ಯ ಇಲಾಖೆಯು ಪ್ರೋತ್ಸಾಹ ನೀಡುತ್ತಿದೆಯೇ ; ನೀಡುತ್ತಿದ್ದಲ್ಲಿ, ಈ ಸಂಬಂಧ ಇಲಾಖೆಯು ರೂಪಿಸಿರುವ ಕಾರ್ಯಕ್ರಮಗಳೇನು ; (ಸಂಪೂರ್ಣ ವಿವರವನ್ನು ನೀಡುವುದು)

(ಆ) ರಾಜ್ಯದ ರೈತರಿಗೆ ಅರಣ್ಯ ಇಲಾಖೆಯಿಂದ ಶ್ರೀಗಂಧದ ಸಸಿಗಳನ್ನು ಸರಬರಾಜು ಮಾಡಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಯಾರು ಸರಬರಾಜು ಮಾಡಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಯಾರು ಸರಬರಾಜು ಮಾಡುತ್ತಿದ್ದಾರೆ ; ಪ್ರತೀ ಸಸಿಗೆ ತಗಲುವ ವೆಚ್ಚವೆಷ್ಟು ; ರಾಜ್ಯದಲ್ಲಿ ಎಷ್ಟು ಹೆಕ್ಟೇರ್ ವಿಸ್ತೀರ್ಣದಲ್ಲಿ ಶ್ರೀಗಂಧ ಬೆಳೆಯಲಾಗಿದೆ ; ಎಷ್ಟು ಜನ ಬೆಳೆಗಾರರಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಟಾವಿಗೆ ಬಂದ ಶ್ರೀಗಂಧಕ್ಕೆ ಮಾರುಕಟ್ಟೆಯಲ್ಲಿ ಲಭ್ಯವಿರುವ ದರವೆಷ್ಟು ; ಅದಕ್ಕೆ ಅರಣ್ಯ ಇಲಾಖೆ ಮತ್ತು ಕರ್ನಾಟಕ ಸೋಪ್ಸ್ ಅಂಡ್ ಡಿಟರ್ಜೆಂಟ್ ನಿಗಮವು ನಿಗದಿಪಡಿಸಿರುವ ಬೆಲೆ ಎಷ್ಟು ; (ಕಳೆದ ೫ ವರ್ಷಗಳ ಮಾಹಿತಿ ನೀಡುವುದು)

(ಈ) ಶ್ರೀಗಂಧಕ್ಕೆ ಮಾರುಕಟ್ಟೆಯಲ್ಲಿ ಲಕ್ಷಾಂತರ ರೂಪಾಯಿ ಬೆಲೆ ಇದ್ದರೂ ಅರಣ್ಯ ಇಲಾಖೆಯು ಅತ್ಯಂತ ಕಡಿಮೆ ಬೆಲೆ ನಿಗದಿ ಮಾಡಿ ರೈತರಿಗೆ ಅನ್ಯಾಯ ಮಾಡುತ್ತಿರುವ ಆರೋಪಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಏನು ? (ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಕೊರತೆಯಾಗಿರುವ ವೈದ್ಯರ ಮತ್ತು ಯಂತ್ರೋಪಕರಣಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೧ (೬೪೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಜಿಲ್ಲಾ ಕೇಂದ್ರ, ತಾಲ್ಲೂಕು ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಎಲ್ಲಾ ಆಸ್ಪತ್ರೆಗಳಲ್ಲಿರುವ ನಿಗದಿತ ಹುದ್ದೆಗಳೆಷ್ಟು ; ಎಲ್ಲಾ ಆಸ್ಪತ್ರೆಗಳಲ್ಲಿ ವೈದ್ಯರು ನೇಮಕವಾಗಿದ್ದಾರೆಯೇ ; ನೇಮಕವಾಗಿಲ್ಲವಾದಲ್ಲಿ ಯಾವ ಕಾಲಮಿತಿಯೊಳಗೆ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ;

(ಇ) ಕೊಡಗು ಜಿಲ್ಲೆಯ ಎಲ್ಲಾ ಜಿಲ್ಲಾ ಕೇಂದ್ರ ತಾಲ್ಲೂಕು ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಆಸ್ಪತ್ರೆಗಳ ಸ್ಥಿತಿಗತಿಗಳು ಮತ್ತು ಕೊರತೆಯಾಗಿರುವ ಮೂಲಸೌಕರ್ಯಗಳೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ವಿರಾಜಪೇಟೆ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಯಂತ್ರೋಕರಣಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಉ) ಕೊಡಗು ಜಿಲ್ಲೆಯ ಕೆಲ ಆಸ್ಪತ್ರೆಗಳಲ್ಲಿ ಮೂಲಸೌಕರ್ಯ ಮತ್ತು ವೈದ್ಯರ ಅಲಭ್ಯತೆಯಿಂದಾಗಿ ಸಾರ್ವಜನಿಕರಿಂದ ದೂರುಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೊಡಗು ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಿಗೆ ಪೂರೈಕೆಯಾಗುತ್ತಿರುವ ಔಷಧಿ ಹಾಗೂ ಅನುದಾನದ ವಿವರ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೦೨ (೬೪೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯ ಜಿಲ್ಲಾ ತಾಲ್ಲೂಕು ಸಮುದಾಯ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಅಭಿವೃದ್ಧಿಗಾಗಿ ಮತ್ತು ಮೂಲಸೌಕರ್ಯಗಳನ್ನು ಒದಗಿಸಲು ೨೦೨೨ ರಿಂದ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು ;

(ಆ) ಸದರಿ ಆಸ್ಪತ್ರೆಗಳಿಗೆ ಔಷಧಿ ಮತ್ತು ಇನ್ನಿತರ ವೈದ್ಯಕೀಯ ಸಂಬಂಧಿತ ಅಗತ್ಯ ವಸ್ತುಗಳನ್ನು ಪೂರೈಕೆ ಮಾಡುವ ಗುತ್ತಿಗೆಯನ್ನು ಯಾವ ಕಂಪನಿಗೆ ನೀಡಲಾಗಿದೆ ; ೨೦೨೨ ರಿಂದ ಇಲ್ಲಿಯವರೆಗೆ ಎಷ್ಟು ಪ್ರಮಾಣದ ಔಷಧಿ ಮತ್ತು ಇನ್ನಿತರೆ ವಸ್ತುಗಳ ಪೂರೈಕೆ ಮಾಡಲಾಗಿದೆ ; (ಆಸ್ಪತ್ರೆಗಳವಾರು ವಿವರ ನೀಡುವುದು)

(ಇ) ಸ್ವತ: ಆಸ್ಪತ್ರೆಗಳೇ ಔಷಧಿ ಹಾಗೂ ಇನ್ನಿತರ ಅಗತ್ಯ ವಸ್ತುಗಳ ಖರೀದಿಗಾಗಿ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು? (ಔಷಧಿಯ ಪ್ರಮಾಣ ಮತ್ತು ಅನುದಾನವನ್ನು ಆಸ್ಪತ್ರೆಗಳವಾರು ವಿವರ ನೀಡುವುದು)

## ವೈದ್ಯಕೀಯ ಕಾಲೇಜಿನಲ್ಲಿರುವ ವಸತಿ ಗೃಹಗಳ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೦೩. (೭೦೦) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ವೈದ್ಯಕೀಯ ಕಾಲೇಜಿನಲ್ಲಿ ಎಷ್ಟು ವಿದ್ಯಾರ್ಥಿ ವಸತಿ ನಿಲಯಗಳಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸರ್ಕಾರಿ ವೈದ್ಯಕೀಯ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ವಸತಿ ಗೃಹಗಳಲ್ಲಿ ಅಗತ್ಯ ಸಿಬ್ಬಂದಿಯನ್ನು ನೇಮಿಸಲಾಗಿದೆಯೇ ಮತ್ತು ವೈದ್ಯಕೀಯ ವಿದ್ಯಾರ್ಥಿಗಳಿಗೆ ಮೂಲ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆಯೇ ;

(ಈ) ಸದರಿ ವಸತಿ ಗೃಹಗಳು ವೈದ್ಯಕೀಯ ವಿದ್ಯಾರ್ಥಿಗಳಿಂದ ಪಡೆಯುತ್ತಿರುವ ಶುಲ್ಕ ಎಷ್ಟು ; (ಕಾಲೇಜುವಾರು ಮಾಹಿತಿ ನೀಡುವುದು)

(ಉ) ಸರ್ಕಾರಿ ವೈದ್ಯಕೀಯ ಕಾಲೇಜಿನಲ್ಲಿ ವೈದ್ಯಕೀಯ ವಸತಿ ನಿಲಯದಿಂದ ಕಾಲೇಜಿನವರೆಗೆ ಬಸ್‌ಗಳ ವ್ಯವಸ್ಥೆ ಇದಿಯೇ ; ಹಾಗಿದ್ದಲ್ಲಿ, ಅದಕ್ಕೆ ವಿದ್ಯಾರ್ಥಿಗಳಿಂದ ಪಡೆಯುತ್ತಿರುವ ಶುಲ್ಕ ಎಷ್ಟು ಮತ್ತು ಎಷ್ಟು ಬಸ್ಸ್‌ಗಳನ್ನು ಒದಗಿಸಲಾಗಿದೆ ? (ಕಾಲೇಜುವಾರು ಮಾಹಿತಿ ನೀಡುವುದು)

## ಅತಿಥಿ ಶಿಕ್ಷಕರ ಹುದ್ದೆಗಳ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೦೪ (೬೯೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ಒಟ್ಟು ಮಂಜೂರಾದ ಶಿಕ್ಷಕರ ಹುದ್ದೆಗಳು ಎಷ್ಟು ; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಲ್ಯಾಣ ಕರ್ನಾಟಕ ವಿಭಾಗದಲ್ಲಿ ಅತೀ ಹೆಚ್ಚು ಶಿಕ್ಷಕರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದಲ್ಲಿ, ಶಿಕ್ಷಕರ ನೇಮಕಾತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಜಿಲ್ಲಾವಾರು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮಾಹಿತಿ ನೀಡುವುದು)

(ಇ) ಪ್ರಸಕ್ತ ವರ್ಷ ಕಲ್ಯಾಣ ಕರ್ನಾಟಕದ ಜಿಲ್ಲೆಗಳಿಗೆ ಮಂಜೂರಾದ ಅತಿಥಿ ಶಿಕ್ಷಕರ ಹುದ್ದೆಗಳು ಎಷ್ಟು ; ಯಾವ ಯಾವ ಜಿಲ್ಲೆಗಳಿಗೆ ಎಷ್ಟು ಅತಿಥಿ ಶಿಕ್ಷಕರ ಹುದ್ದೆ ಮಂಜೂರು ಮಾಡಲಾಗಿದೆ ; ಇಲ್ಲಿಯವರೆಗೆ ಎಷ್ಟು ಜನ ಅತಿಥಿ ಶಿಕ್ಷಕರು ಕರ್ತವ್ಯಕ್ಕೆ ಹಾಜರಾಗಿದ್ದಾರೆ ;

(ಈ) ಈ ಅತಿಥಿ ಶಿಕ್ಷಕರಿಗೆ ಸರ್ಕಾರ ನೀಡುತ್ತಿರುವ ಮಾಸಿಕ ಗೌರವ ಸಂಭಾವನೆ ಎಷ್ಟು ; ಇದಕ್ಕಾಗಿ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಡೆಂಗ್ಯೂ ಜ್ವರದಿಂದ ಜನಗಳಿಗೆ ಸಮಸ್ಯೆಯಾಗುತ್ತಿರುವ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೬೦೫ (೭೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಡೆಂಗ್ಯೂ ಜ್ವರ ತೀವ್ರವಾಗಿ ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಈ ಜ್ವರ ನಿಯಂತ್ರಿಸಲು ಅಗತ್ಯ ಔಷಧಿ ಮತ್ತು ತಜ್ಞ ವೈದ್ಯರ ಸೇವೆ ಸರ್ಕಾರಿ ಆಸ್ಪತ್ರೆಗಳಲ್ಲಿ ಲಭ್ಯವಿದೆಯೇ ; (ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಎಷ್ಟು ಡೆಂಗ್ಯೂ ಜ್ವರ ಪ್ರಕರಣಗಳು ವರದಿಯಾಗಿವೆ ಹಾಗೂ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಪ್ರಕರಣಗಳು ವರದಿಯಾಗಿವೆ ಮತ್ತು ಇದರಿಂದ ಸಾವಿಗೀಡಾದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಖಾಯಿಲೆ ನಿಯಂತ್ರಣಕ್ಕಾಗಿ ಸರ್ಕಾರ ಆರೋಗ್ಯ ತಜ್ಞರೊಂದಿಗೆ ಎಷ್ಟು ಸಭೆ ನಡೆಸಲಾಗಿದೆ ; ಹಾಗೂ ಇದಕ್ಕಾಗಿ ಕಾರ್ಯಪಡೆ ರಚನೆಯಾಗಿದೆಯೇ ;

(ಉ) ಇಂತಹ ಪರಿಸ್ಥಿತಿಯ ದುರುಪಯೋಗ ಪಡೆದುಕೊಂಡು ಖಾಸಗಿ ಆಸ್ಪತ್ರೆಗಳು ರೋಗಿಗಳಿಂದ ಹೆಚ್ಚು ಹಣ ಪಡೆದು ಚಿಕಿತ್ಸೆ ನೀಡುತ್ತಿರುವುದರಿಂದ ಜನಸಾಮಾನ್ಯರು ತೊಂದರೆಗೊಳಗಾಗುತ್ತಿದ್ದು, ಇದರ ನಿಯಂತ್ರಣಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಮಾಹಿತಿ ನೀಡುವುದು)

(ಊ) ಈ ಮಳೆಗಾಲದ ಆರಂಭದಿಂದ ರಾಜ್ಯದಲ್ಲಿ ಹೆಚ್ಚು ಮಳೆಯಾಗುತ್ತಿದ್ದು, ಸೊಳ್ಳೆಗಳ ಕಾಟ ಹೆಚ್ಚಾಗಿದ್ದು ಸೊಳ್ಳೆ ನಿಯಂತ್ರಣಕ್ಕಾಗಿ ಅಗತ್ಯ ಔಷಧಿ ಸಿಂಪಡಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ; (ಮಾಹಿತಿ ನೀಡುವುದು)

(ಋ) ಡೆಂಗ್ಯೂ ಜ್ವರಕ್ಕೆ ಸರ್ಕಾರದಿಂದ ಔಷಧಿ ನೀಡಲಾಗುತ್ತಿದೆಯೇ ; ಇದ್ದಲ್ಲ, ಅದರ ವೆಚ್ಚವೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸರ್ಕಾರಿ ಶಾಲೆಗಳು ಎದುರಿಸುತ್ತಿರುವ ಸಮಸ್ಯೆಗಳ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೦೬ (೬೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಶಾಲೆಗಳು ಮೂಲಭೂತ ಸೌಲಭ್ಯಗಳ ಕೊರತೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಆ) ವಿಜಯಪುರ-ಬಾಗಲಕೋಟೆ ಜಿಲ್ಲೆಗಳಲ್ಲಿ ಸರ್ಕಾರಿ ಶಾಲೆಗಳು ಎದುರಿಸುತ್ತಿರುವ ಸಮಸ್ಯೆಗಳು ಯಾವುವು ; (ಶಾಲಾವಾರು ವಿವರ ನೀಡುವುದು)

(ಇ) ಸದರಿ ಜಿಲ್ಲೆಗಳಲ್ಲಿಯ ಸರ್ಕಾರಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯವನ್ನು ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿನ ಶಿಕ್ಷಕರ ಕೊರತೆಯ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೬೦೭ (೭೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರತಿ ವರ್ಷ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳು ಫಲಿತಾಂಶಗಳಲ್ಲಿ ಕಳಪೆ ಸಾಧನೆ ತೋರಿ ಹಿಂದುಳಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪ್ರತಿ ಬಾರಿ ಈ ರೀತಿಯ ಕಳಪೆ ಫಲಿತಾಂಶ ಬರಲು ಕಾರಣವೇನು ; (ವಿವರ ನೀಡುವುದು)

(ಆ) ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ಒಟ್ಟು ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; ಈ ಶಾಲೆಗಳಲ್ಲಿನ ವಿದ್ಯಾರ್ಥಿಗಳು ಹಾಗೂ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ಎಲ್ಲಾ ಶಾಲೆಗಳವಾರು ವಿವರ ನೀಡುವುದು)

(ಇ) ಈ ಕಳಪೆ ಫಲಿತಾಂಶಕ್ಕೆ ಶಾಲೆಗಳಲ್ಲಿನ ಶಿಕ್ಷಕರ ಕೊರತೆಯೇ ಒಂದು ಬಹುದೊಡ್ಡ ಕಾರಣವಲ್ಲವೇ ;

(ಈ) ಕಲ್ಯಾಣ ಕರ್ನಾಟಕ ಭಾಗದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಸರ್ಕಾರದಿಂದ ಮುಂಜೂರಾದ, ಭರ್ತಿಯಾದ ಹಾಗೂ ಪ್ರಸ್ತುತ ಖಾಲಿಯಿರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಉ) ಈ ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಅನುಮತಿ ನೀಡಿದೆಯೇ ? ನೀಡಿದ್ದಲ್ಲಿ, ಎಷ್ಟು ಹುದ್ದೆಗಳನ್ನು ನೇಮಕ ಮಾಡಲು ಅನುಮತಿ ನೀಡಿದೆ ? (ವಿವರ ನೀಡುವುದು)

## ರಾಜ್ಯದ ಸಾರ್ವಜನಿಕ ಗ್ರಂಥಾಲಯಗಳು ವಾರಪೂರ್ತಿ ಕಾರ್ಯನಿರ್ವಹಿಸಲು ಕ್ರಮ ಕೈಗೊಳ್ಳುವ ಕುರಿತು

**ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :-**

೬೦೮ (೭೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ರಾಜ್ಯದಲ್ಲಿರುವ ಸಾರ್ವಜನಿಕ ಗ್ರಂಥಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪಟ್ಟಿಯನ್ನು ನೀಡುವುದು)

(ಆ) ಈ ಗ್ರಂಥಾಲಯಗಳು ಕಾರ್ಯನಿರ್ವಹಿಸುತ್ತಿರುವ ಸಮಯವೆಷ್ಟು;

(ಇ) ಸಾರ್ವಜನಿಕ ಗ್ರಂಥಾಲಯಗಳು ತಿಂಗಳಲ್ಲಿ ಪ್ರತಿ ಸೋಮವಾರ, ಎರಡನೇ ಶನಿವಾರ, ಮಂಗಳವಾರ, ನಾಲ್ಕನೇ ಶನಿವಾರ ಹಾಗೂ ಎಲ್ಲಾ ಸರ್ಕಾರಿ ರಜಾ ದಿನಗಳಂದು ಕಾರ್ಯನಿರ್ವಹಿಸದಿರುವುದರಿಂದ ಸಾರ್ವಜನಿಕರು ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಾಗಿ ಓದುತ್ತಿರುವ ಲಕ್ಷಾಂತರ ಬಡ ವಿದ್ಯಾರ್ಥಿಗಳಿಗೆ ಅನಾನೂಕೂಲವಾಗುವುದಿಲ್ಲವೇ; ಗ್ರಂಥಾಲಯಗಳಲ್ಲಿ ಅತ್ಯುತ್ತಮ ಓದುವ ವಾತಾರಣವಿರುವುದರಿಂದ ವಿದ್ಯಾರ್ಥಿಗಳು ರಜಾದಿನಗಳಂದು ಓದಿನಿಂದ ವಂಚಿತರಾಗುವುದಿಲ್ಲವೇ ; ವಾರಪೂರ್ತಿ ರಾಜ್ಯದ ಗ್ರಂಥಾಲಯಗಳನ್ನು ವಿದ್ಯಾರ್ಥಿಗಳ ಹಾಗೂ ಓದುಗರ ಹಿತದೃಷ್ಟಿಯಿಂದ ತೆರೆಯಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ;

(ಈ) ಯಾವ ಕಾಲಮಿತಿಯಲ್ಲಿ ಪಕ್ಕದ ರಾಜ್ಯಗಳಲ್ಲಿರುವಂತೆ ನಮ್ಮ ರಾಜ್ಯದಲ್ಲೂ ಸಹ ಗ್ರಂಥಾಲಗಳು ವಾರಪೂರ್ತಿ ಕಾರ್ಯನಿರ್ವಹಿಸಲು ಕ್ರಮ ವಹಿಸಲಾಗುವುದು ? (ವಿವರ ನೀಡುವುದು)

## ಪ್ರಸಕ್ತ ಸಾಲಿನಲ್ಲಿ ಕೆ–ಸಿಇಟಿ ಪರೀಕ್ಷೆಯಲ್ಲಿ ಪಠ್ಯಕ್ರಮ ಹೊರತುಪಡಿಸಿ ಪ್ರಶ್ನೆ ಪತ್ರಿಕೆಯನ್ನು ಸಿದ್ಧಪಡಿಸಿರುವ ಕುರಿತು

**ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :–**

೬೧೯ (೭೧೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವೃತ್ತಿಪರ ಕೋರ್ಸುಗಳಾದ ಇಂಜನಿಯರಿಂಗ್, ವೈದ್ಯಕೀಯ ಸೇರಿದಂತೆ ವಿವಿಧ ಸ್ನಾತಕೋತ್ತರ ಪದವಿ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪ್ರಸಕ್ತ ಸಾಲಿನಲ್ಲಿ ನಡೆಸಿದ ಕೆ-ಸಿಇಟಿ ಪ್ರವೇಶ ಪರೀಕ್ಷೆಯ ಪಠ್ಯಕ್ರಮವನ್ನು ಹೊರತುಪಡಿಸಿ ಸುಮಾರು ೪೫ಕ್ಕೂ ಹೆಚ್ಚು ಪ್ರಶ್ನೆಗಳನ್ನು ಕೇಳಿ ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ಆತಂಕವುಂಟು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೆ-ಸಿಇಟಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳನ್ನು ಸಿದ್ಧಪಡಿಸುವಾಗ ಅನುಸರಿಸಿದ್ದ ನಿಯಮ ಹಾಗೂ ಮಾನದಂಡಗಳೇನು ;

(ಇ) ಈ ಪರೀಕ್ಷೆಗೆ ಪ್ರಶ್ನೆ ಪತ್ರಿಕೆಗಳನ್ನು ಸಿದ್ದಪಡಿಸಲು ರಾಜ್ಯದಲ್ಲಿ ನುರಿತ ವಿಷಯ ತಜ್ಞರಿಲ್ಲವೇ ; (ಸ್ಪಷ್ಟನೆಯನ್ನು ನೀಡುವುದು)

(ಈ) ಪ್ರಸಕ್ತ ವರ್ಷದ ಕೆ-ಸಿಇಟಿ ಪ್ರಶ್ನೆ ಪತ್ರಿಕೆಗಳನ್ನು ಸಿದ್ದುಪಡಿಸಿ ರಾಜ್ಯ ಸರ್ಕಾರಕ್ಕೆ ಮುಜುಗರವನ್ನುಂಟು ಮಾಡಿದ್ದ ತಜ್ಞರು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಇನ್ನೊಮ್ಮೆ ಇಂತಹ ಪ್ರಕರಣಗಳು ಮರುಕಳಿಸದಂತೆ ಸರ್ಕಾರ ಕೈಗೊಳ್ಳಬಹುದಾದ ಮುಂಜಾಗ್ರತೆ ಕ್ರಮಗಳೇನು ?

## ರಾಜ್ಯದಲ್ಲಿ ರಕ್ತನಿಧಿ (ಬ್ಲಡ್ ಬ್ಯಾಂಕ್) ಗಳಲ್ಲಿ ರಕ್ತದ ಕೊರತೆಯನ್ನು ಎದುರಿಸುತ್ತಿರುವ ಕುರಿತು

**ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :-**

೬೧೦ (೭೨೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಖಾಸಗಿ ಹಾಗೂ ಸರ್ಕಾರಿ ಬ್ಲಡ್ ಬ್ಯಾಂಕ್ ಕೇಂದ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಬಹುತೇಕ ಆಸ್ಪತ್ರೆಗಳಲ್ಲಿ ರಕ್ತದ ಕೊರತೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಕ್ತದ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಒಬ್ಬ ರಕ್ತದಾನಿಯಿಂದ ಸಂಗ್ರಹಿಸಬಹುದಾದ ಕನಿಷ್ಠ ಹಾಗೂ ಗರಿಷ್ಠ ಪ್ರಮಾಣದ ರಕ್ತ ಎಷ್ಟು ; ಇವುಗಳಿಗೆ ಇಲಾಖೆಯ ಮಾನದಂಡವನ್ನು ನಿಗಧಿಪಡಿಸಿದೆಯೇ ;

(ಈ) ಪ್ರಸ್ತುತ ರಾಜ್ಯದಲ್ಲಿ ಯಾವ ಯಾವ ಸರ್ಕಾರಿ ಬ್ಲಡ್ ಬ್ಯಾಂಕ್‌ಗಳಲ್ಲಿ ಎಷ್ಟೆಷ್ಟು ಪ್ರಮಾಣದ ರಕ್ತವು ಸಂಗ್ರಹವಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ತುರ್ತು ಸಂದರ್ಭದಲ್ಲಿ ಸಾರ್ವಜನಿಕರಿಗೆ ರಕ್ತ ಸಿಗುವಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ; ರಾಜ್ಯದ ಯಾವ ಯಾವ ಜಿಲ್ಲೆಗಳ ಬ್ಲಡ್ ಬ್ಯಾಂಕ್‌ಗಳ (ರಕ್ತನಿಧಿ ಕೇಂದ್ರ)ದಲ್ಲಿ ರಕ್ತದ ಸಂಗ್ರಹವಿದೆ ಎಂಬುದನ್ನು ಪ್ರತಿ ದಿನ ಸಾರ್ವಜನಿಕರಿಗೆ ತಿಳಿಸಲು ಆರೋಗ್ಯ ಇಲಾಖೆಯಿಂದ ಒಂದು ಪೋರ್ಟಲ್‌ನ್ನು ತೆರೆದು ಅದರಲ್ಲಿ ಮಾಹಿತಿಯನ್ನು ಒದಗಿಸುವ ವ್ಯವಸ್ಥೆಯನ್ನು ಮಾಡಬಹುದಲ್ಲವೇ ? (ಸ್ಪಷ್ಟ ಮಾಹಿತಿಯೊಂದಿಗೆ ವಿವರವನ್ನು ನೀಡುವುದು)

**ಕಲ್ಯಾಣ ಕರ್ನಾಟಕ ಭಾಗದ ಶಿಕ್ಷಕರು / ಉಪನ್ಯಾಸಕರುಗಳ ಕುರಿತು**

**ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :-**

೬೧೧ (೭೨೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಭಾಗದ ಶಾಲಾ/ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅನುದಾನಿತ/ಅನುದಾನರಹಿತ/ಸರ್ಕಾರಿ ಶಿಕ್ಷಕರುಗಳ/ಉಪನ್ಯಾಸಕರುಗಳ ಸಂಖ್ಯೆ ಎಷ್ಟು ; ಸರ್ಕಾರಿ, ಅನುದಾನಿತ, ಅನುದಾನರಹಿತ ಶಾಲಾ ಕಾಲೇಜುಗಳ ಶಿಕ್ಷಕರು/ ಉಪನ್ಯಾಸಕರುಗಳ ಶಾಲೆ, ವಿಳಾಸ, ದೂರವಾಣಿ ಸಂಖ್ಯೆ ಸಮೇತ ತಾಲ್ಲೂಕುವಾರು ಪಟ್ಟಿ ನೀಡುವುದು ;

(ಆ) ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳ ಶಿಕ್ಷಣ ಇಲಾಖೆಯಲ್ಲಿನ ಎಲ್ಲಾ ಸಿಬ್ಬಂದಿಗಳ ಮಾಹಿತಿ ಒದಗಿಸುವುದು ?

## ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿರುವ ವಿವಿಧ ಶಿಕ್ಷಕರ ನೇಮಕಾತಿಯ ಕುರಿತು

**ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೬೧೨ (೫೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಪ್ರಾಥಮಿಕ ಮತ್ತು ಫ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರು, ಚಿತ್ರಕಲಾ ಶಿಕ್ಷಕರು, ಸಂಗೀತ ಶಿಕ್ಷಕರು ಹಾಗೂ ಕ್ರಾಫ್ಟ್ ಶಿಕ್ಷಕರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಸದರಿ ಜಿಲ್ಲೆಗಳಲ್ಲಿ ದೈಹಿಕ ಶಿಕ್ಷಕರು, ಚಿತ್ರಕಲಾ ಶಿಕ್ಷಕರು, ಸಂಗೀತ ಶಿಕ್ಷಕರು ಹಾಗೂ ಕ್ರಾಫ್ಟ್ ಶಿಕ್ಷಕರ ಸಂಖ್ಯೆ ಎಷ್ಟಿದೆ ; (ಮಾಹಿತಿ ಒದಗಿಸುವುದು)

(ಇ) ಈ ಜಿಲ್ಲೆಗಳಲ್ಲಿ ಖಾಲಿಯಿರುವ ದೈಹಿಕ ಶಿಕ್ಷಕರು, ಚಿತ್ರಕಲಾ ಶಿಕ್ಷಕರು, ಸಂಗೀತ, ಕ್ರಾಫ್ಟ್ ಶಿಕ್ಷಕರ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ಮಾಹಿತಿಯನ್ನು ನೀಡುವುದು)

## ಹೆಚ್ಚಿನ ವಿದ್ಯುತ್ ಬಿಲ್‌ಗಳು ಬರುತ್ತಿರುವ ಬಗ್ಗೆ ಮತ್ತು ಲೈನ್ ಮ್ಯಾನ್‌ಗಳ ಕೊರತೆ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೬೧೩ (೬೫೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗೃಹಜ್ಯೋತಿ ಯೋಜನೆ ಜಾರಿಯಲ್ಲಿದ್ದರೂ ರಾಜ್ಯದ ಅನೇಕ ಗ್ರಾಮೀಣ ಮತ್ತು ಹಳ್ಳಿ ಪ್ರದೇಶದ ಜನರಿಗೆ ಹೆಚ್ಚಿನ ವಿದ್ಯುತ್ ಬಿಲ್‌ಗಳು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ಅನೇಕ ಹೋಬಳಿಗಳಲ್ಲಿ ಲೈನ್ ಮ್ಯಾನ್‌ಗಳ (ಪವರ್‌ಮ್ಯಾನ್) ಕೊರತೆಯಿಂದ ಮಳೆಗಾಲದ ಸಮಯದಲ್ಲಿ ಸಣ್ಣ ಪುಟ್ಟ ಸಮಸ್ಯೆಗಳಿದ್ದರೂ ೪ ರಿಂದ ೫ ದಿನಗಳವರೆಗೆ ಕೆಲವು ಗ್ರಾಮಗಳಿಗೆ ವಿದ್ಯುತ್ ಪೂರೈಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಲೈನ್‌ಮ್ಯಾನ್ ಹುದ್ದೆಗಳು ಖಾಲಿ ಇವೆ; ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಡೆಂಗ್ಯೂ ರೋಗದ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೬೧೪ (೬೫೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೆಚ್ಚುತ್ತಿರುವ ಡೆಂಗ್ಯೂ ರೋಗದ ಬಗ್ಗೆ ಸರ್ಕಾರ ತೆಗೆದುಕೊಂಡ ಮುಂಜಾಗ್ರತಾ ಕ್ರಮಗಳು ಯಾವುವು ;

(ಆ) ರಾಜ್ಯದಲ್ಲಿ ಡೆಂಗ್ಯೂವಿನಿಂದ ಸಾವನ್ನಪ್ಪಿದವರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಾಡಿನಲ್ಲಿ ಮತ್ತು ಕಾಡಂಚಿನಲ್ಲಿ ವಾಸಿಸುವ ಹಳ್ಳಿ ಜನರಿಗೆ ಈ ರೋಗದ ಕುರಿತು ಜಾಗೃತಿ ಮೂಡಿಸುವ ಕಾರ್ಯ ಸರ್ಕಾರದಿಂದ ಮಾಡಲಾಗುತ್ತಿದೆಯೇ ? (ಮಾಹಿತಿ ನೀಡುವುದು)

## ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೬೧೫ (೬೫೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅನೇಕ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕುಡಿಯುವ ನೀರು, ಶೌಚಾಲಯ, ಮೇಲ್ಛಾವಣಿ ಸೋರುವಿಕೆ ಮುಂತಾದ ಸಮಸ್ಯೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಬೆಳಗಾವಿ ಜಿಲ್ಲೆ, ಖಾನಾಪುರ ತಾಲ್ಲೂಕಿನ ಹುಂಬ್ರಾಪಾಣಿ ಗ್ರಾಮದ ಕಿರಿಯ ಪ್ರಾಥಮಿಕ ಶಾಲೆ ಮರಾಠಿ ಮಾಧ್ಯಮದ ಕಾರಣ ಸ್ಥಗಿತಗೊಂಡಿದ್ದು, ಮಕ್ಕಳ ಸಂಖ್ಯೆ ಹೆಚ್ಚಾಗಿರುವುದರಿಂದ ಕನ್ನಡ

ಮಾಧ್ಯಮದ ತರಗತಿ ಪುನಃ ಪ್ರಾರಂಭವಾಗಿ ಮಕ್ಕಳಿಗೆ ತುಂಬಾ ಅನುಕೂಲವಾಗಿದ್ದು, ಅನೇಕ ವರ್ಷಗಳಿಂದ ಶಾಲೆ ಮುಚ್ಚಲ್ಪಟ್ಟಿದ್ದರಿಂದ ಕುಡಿಯುವ ನೀರು, ಶೌಚಾಲಯ, ಕಾಂಪೌಂಡ್, ಮೇಲ್ಛಾವಣಿ ಸೋರುವಿಕೆ ಮುಂತಾದ ಅತ್ಯಾವಶ್ಯಕ ಸೌಲಭ್ಯಗಳಿಗಾಗಿ ಸರ್ಕಾರವು ಆದ್ಯತೆಯ ಮೇರೆಗೆ ಸದರಿ ಶಾಲೆಯ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುವುದೇ ?

## ರಾಜ್ಯದಲ್ಲಿ ಬಿ.ಪಿ.ಎಲ್ ಕಾರ್ಡುಗಳ ಹಂಚಿಕೆ ಮತ್ತು ಬಾಕಿ ಇರುವ ಅರ್ಜಿಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೬೧೬ (೬೫೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇಲ್ಲಿಯವರೆಗೆ ಬಿ.ಪಿ.ಎಲ್ ಕಾರ್ಡುಗಳನ್ನು ಪಡೆಯುವ ಸಲುವಾಗಿ ಸಲ್ಲಿಕೆಯಾಗಿರುವ ಅರ್ಜಿಗಳು ಮತ್ತು ಬಾಕಿ ಇರುವ ಅರ್ಜಿಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬಾಕಿ ಇರುವ ಅರ್ಜಿದಾರರಿಗೆ ಬಿ.ಪಿ.ಎಲ್ ಕಾರ್ಡ್ ನೀಡದಿರಲು ಕಾರಣವೇನು ;

(ಇ) ಹೊಸ ಬಿ.ಪಿ.ಎಲ್ ಕಾರ್ಡುಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡಲಾಗಿದೆಯೇ ? (ವಿವರ ನೀಡುವುದು)

## ಜಿ.ಪಿ.ಟಿ. (೬–೮) ಹುದ್ದೆಯಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಪಡೆದ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳ ಕುರಿತು

**ಡಾ: ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೬೧೭ (೫೭೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಿ.ಪಿ.ಟಿ (೬–೮) ಹುದ್ದೆಗಳಲ್ಲಿ ನೇರ ನೇಮಕಾತಿಯಾಗಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಜಿ.ಪಿ.ಟಿ (೬–೮) ಹುದ್ದೆಯಲ್ಲಿ ಮುಂಬಡ್ತಿ ಪಡೆದು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ವೃಂದ ಮತ್ತು ನೇಮಕಾತಿ ನಿಯಮಗಳು ತಿದ್ದುಪಡಿ ಕಡತ ಸಂಖ್ಯೆ: EP ೧೭೧ PBS ೨೦೨೨ ಅನ್ನು ಸಚಿವ ಸಂಪುಟದಲ್ಲಿ ಅನುಮೋದನೆ ಪಡೆಯಲು ವಿಳಂಬ ಮಾಡುತ್ತಿರುವುದೇಕೆ ಹಾಗೂ ಅನುಮೋದನೆ ಮಾಡಿ ಯಾವಾಗ ಸೇವಾ ನಿರತ ಪ್ರಾಥಮಿಕ ಶಾಲಾ ಪದವೀಧರ ಶಿಕ್ಷಕರಿಗೆ ನ್ಯಾಯ ಒದಗಿಸುತ್ತೀರಿ ; ಇದಕ್ಕೆ ಕಾಲಮಿತಿ ನಿಗದಿಪಡಿಸಬಹುದೇ ;

(ಈ) ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಹಿರಿಯ ಮುಖ್ಯ ಉಪಾಧ್ಯಾಯರು ಮತ್ತು ಪ್ರೌಢ ಶಾಲಾ ಸಹ ಶಿಕ್ಷರ ಗ್ರೇಡ್–೨ ವೃಂದದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ಕೈಗೊಂಡ ಕ್ರಮಗಳೇನು ;

(ಉ) ವೃಂದ ಮತ್ತು ನೇಮಕಾತಿ ನಿಯಮಗಳು ತಿದ್ದುಪಡಿಗಾಗಿ ಆಗ್ರಹಿಸಿ ಈಗಾಗಲೇ ೨೦೧೮ ಮತ್ತು ೨೦೨೦ರಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಪದವೀಧರ ಶಿಕ್ಷಕರ ಸಂಘ (ರಿ) ರಾಜ್ಯ ಘಟಕವು ಎರಡು ಬಾರಿ ಫ್ರೀಡಂ ಪಾರ್ಕ್ ಚಳುವಳಿ ಮಾಡಿರುವುದು ಹಾಗೂ ಮತ್ತೆ ಶಿಕ್ಷಕರು ಫ್ರೀಡಂ ಪಾರ್ಕ್ ಚಳುವಳಿಗೆ ಸಿದ್ಧರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಶಿಕ್ಷಕರ ನ್ಯಾಯಯುತ ಮುಂಬಡ್ತಿಗಳನ್ನು ನೀಡಲು ಸರ್ಕಾರ ತುರ್ತು ಕ್ರಮಗಳನ್ನು ಕೈಗೊಂಡಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ?

## ವಿಶ್ವವಿದ್ಯಾಲಯಗಳು ಸ್ಥಳೀಯ ಪರೀಕ್ಷಣಾ ಸಮಿತಿ (LIC) ಗೆ ಸಿಂಡಿಕೇಟ್ ಸದಸ್ಯರ ನೇಮಕ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೬೧೮ (೬೦೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯಿದೆ ೨೦೦೦ರ ಪ್ರಕಾರ ಸಿಂಡಿಕೇಟ್ ಸದಸ್ಯರನ್ನು ಸ್ಥಳೀಯ ಪರೀಕ್ಷಣಾ ಸಮಿತಿಗೆ (LIC) ನೇಮಕ ಮಾಡಲು ಅವಕಾಶವಿದೆಯೇ ;

(ಆ) ಸಂಪೂರ್ಣವಾಗಿ ಶೈಕ್ಷಣಿಕ ಹಿನ್ನಲೆ ಇಲ್ಲದಿದ್ದರೂ ವಿಶ್ವವಿದ್ಯಾಲಯಗಳು ರಾಜಕೀಯ ಒತ್ತಡಕ್ಕೆ ಮಣಿದು ಸಿಂಡಿಕೇಟ್ ಸದಸ್ಯರನ್ನು ಎಲ್‌ಐಸಿಯ ಅಧ್ಯಕ್ಷರನ್ನಾಗಿ ಮತ್ತು ಪ್ರಾಧ್ಯಾಪಕರನ್ನು ಸದಸ್ಯರನ್ನಾಗಿ ಮಾಡುವುದು ಸರಿಯೇ ;

(ಇ) ಸಿಂಡಿಕೇಟ್ ಸದಸ್ಯರ ಅಧ್ಯಕ್ಷತೆಯಲ್ಲಿ ಎಲ್ಐಸಿಯ ಸಮಿತಿಗಳು ಸಂಯೋಜಿತ ಕಾಲೇಜುಗಳಿಗೆ ಭೇಟಿ ನೀಡಿದಾಗ ಕೇಳಿ ಬರುತ್ತಿರುವ ಅವ್ಯವಹಾರಗಳನ್ನು ನಿಯಂತ್ರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಸಿಂಡಿಕೇಟ್ ಸದಸ್ಯರು ಎಲ್.ಐ.ಸಿ. ಸಮಿತಿಯಲ್ಲಿರುವುದರಿಂದ ಸರ್ಕಾರದ ಮತ್ತು ವಿಶ್ವವಿದ್ಯಾಲಯಗಳ ಮಾನದಂಡಗಳನ್ನು ಬಳಸಿ ಕಾಲೇಜುಗಳ ಮೌಲ್ಯಮಾಪನ ಸರಿಯಾಗಿ ನಡೆಯುತ್ತಿಲ್ಲವೆಂದು ಆರೋಪ ಇದ್ದು ಇದನ್ನು ನಿಯಂತ್ರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗಳ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೬೯೯ (೬೦೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಪದವಿ ಪೂರ್ವ ಕಾಲೇಜುಗಳಿಗೆ ಖಾಯಂ ಪ್ರಾಂಶುಪಾಲರು ಇದ್ದಾರೆ ;

(ಆ) ಖಾಯಂ ಪ್ರಾಂಶುಪಾಲರಲ್ಲಿ ಬಡ್ತಿ ಮೂಲಕ ಮತ್ತು ನೇರ ನೇಮಕಾತಿ ಮೂಲಕ ನೇಮಕವಾದ ಪ್ರಾಂಶುಪಾಲರ ಸಂಖ್ಯೆ ಎಷ್ಟು ;

(ಇ) ಶೇಖಡಾ ೨೫ರಷ್ಟು ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇಲಾಖೆಯು ನಿಯಮ ರೂಪಿಸಿದೆಯೇ ; (ನಿಯಮದ ಪ್ರತಿ ನೀಡುವುದು)

(ಈ) ನೇರ ನೇಮಕಾತಿ ಮೂಲಕ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ಇನ್ನು ಪ್ರಕ್ರಿಯೆ ಪ್ರಾರಂಭವಾಗದಿರುವುದಕ್ಕೆ ಕಾರಣಗಳೇನು ಹಾಗೂ ಯಾವಾಗ ಪ್ರಕ್ರಿಯೆ ಪ್ರಾರಂಭಿಸಲಾಗುತ್ತದೆ ?

## ವೈದ್ಯಕೀಯ ಉಪಕರಣಗಳ ಖರೀದಿಯಲ್ಲಿ ಕೇಳಿ ಬಂದ ಅವ್ಯವಹಾರಗಳ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೬೨೦ (೬೦೩) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ನೇ ಸಾಲಿನಲ್ಲಿ ವೈದ್ಯಕೀಯ ಮಹಾವಿದ್ಯಾಲಯಗಳಿಗೆ ಮತ್ತು ಸರ್ಕಾರಿ ಆಸ್ಪತ್ರೆಗಳಿಗೆ ಬೇಕಾದ ಎಷ್ಟು ಪ್ರಮಾಣದ ಮತ್ತು ಎಷ್ಟು ಮೊತ್ತದ ವೈದ್ಯಕೀಯ ಉಪಕರಣಗಳನ್ನು ಖರೀದಿಸಲಾಗಿದೆ ; (ವಿವರ ನೀಡುವುದು)

(ಆ) ವೈದ್ಯಕೀಯ ಉಪಕರಣಗಳನ್ನು ಖರೀದಿಸುವಾಗ ಕೆಟಿಪಿಪಿ ಕಾಯ್ದೆಯನ್ನು ಉಲ್ಲಂಘಿಸಿ ಕೋಟ್ಯಾಂತರ ರೂಪಾಯಿಗಳ ಅವ್ಯವಹಾರ ನಡೆದಿದೆಯೆಂಬ ಆರೋಪ ಕೇಳಿ ಬಂದಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕಲ್ಯಾಣ ಕರ್ನಾಟಕದಲ್ಲಿನ ವೈದ್ಯಕೀಯ ಕಾಲೇಜುಗಳು ಮತ್ತು ಆಸ್ಪತ್ರೆಗಳಲ್ಲಿ ವೈದ್ಯಕೀಯ ಉಪಕರಣಗಳ ತೀವ್ರ ಕೊರತೆಯನ್ನು ನೀಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)_

## ೩೭೧(ಜೆ) ಅಡಿಯಲ್ಲಿ ಮೆಡಿಕಲ್ ಮತ್ತು ಇಂಜಿನಿಯರಿಂಗ್ ಶಿಕ್ಷಣ ಸಂಸ್ಥೆಗಳಲ್ಲಿ ಕೆಇಎ ಮುಖಾಂತರ ಪ್ರವೇಶ ನೀಡಿದ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೬೨೧ (೬೦೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಪ್ರದೇಶದ ವಿದ್ಯಾರ್ಥಿಗಳಿಗೆ ೩೭೧(ಜೆ) ಅಡಿಯಲ್ಲಿ ಮೆಡಿಕಲ್ ಕಾಲೇಜುಗಳಲ್ಲಿ ೨೦೧೩ ರಿಂದ ೨೦೨೩ರವರೆಗೆ ಕೆಇಎ ಮುಖಾಂತರ ಪ್ರವೇಶ ಪಡೆದವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ೩೭೧(ಜೆ) ಅಡಿಯಲ್ಲಿ ೨೦೧೩-೨೦೨೩ ರವರೆಗೆ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕೆಇಎ ಮುಖಾಂತರ ಪ್ರವೇಶ ಪಡೆದವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ೩೭೧(ಜೆ) ಅಡಿಯಲ್ಲಿ ವಿಶ್ವವಿದ್ಯಾಲಯಗಳಲ್ಲಿ ಮತ್ತು ಪ್ರಥಮ ದರ್ಜೆ ಕಾಲೇಜುಗಳಲ್ಲಿ ಇಲ್ಲಿಯವರೆಗೆ ಎಷ್ಟು ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆ ? (ವಿವರ ನೀಡುವುದು)

## ಮಧುಗಿರಿ ತಾಲ್ಲೂಕಿನಲ್ಲಿ ಸೋಲಾರ್ ಪಾರ್ಕ್ ನಿರ್ಮಾಣದ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು ) :-**

೬೨೨ (೬೪೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸೋಲಾರ್ ವಿದ್ಯುತ್‌ಚ್ಛಕ್ತಿ ಉತ್ಪಾದನೆಗೆ ಗುರುತಿಸಲಾಗಿರುವ ಜಿಲ್ಲೆಗಳು ಮತ್ತು ತಾಲ್ಲೂಕುಗಳು ಯಾವುವು ; ಇವುಗಳನ್ನು ಯಾವ ಅಧ್ಯಯನದ ಆಧಾರದ ಮೇಲೆ ಗುರುತಿಸಲಾಗಿದೆ ; (ಪೂರ್ಣ ವಿವರ ನೀಡುವುದು)

(ಆ) ಈ ರೀತಿ ಗುರುತಿಸಲಾದ ಸ್ಥಳಗಳಲ್ಲಿ ರಾಜ್ಯದಲ್ಲಿ ವಿವಿಧ ಬಗೆಯಿಂದ ಉತ್ಪಾದಿಸುವ ಸೋಲಾರ್ ವಿದ್ಯುತ್ ಪ್ರಮಾಣವೆಷ್ಟು ಈ ಸೋಲಾರ್ ವಿದ್ಯುತ್ ಉತ್ಪಾದನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಲಭ್ಯವಿರುವ ನೆರವು ಮತ್ತು ಸವಲತ್ತುಗಳು ಯಾವುವು ; (ಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನಲ್ಲಿರುವ ಅತಿ ದೊಡ್ಡ ಸೋಲಾರ್ ಪಾರ್ಕ್ ಮಾದರಿಯಲ್ಲಿ, ಇದೇ ಜಿಲ್ಲೆಯ ಮಧುಗಿರಿ ತಾಲ್ಲೂಕಿನಲ್ಲಿ ಸೋಲಾರ್ ಪಾರ್ಕ್ ನಿರ್ಮಿಸಲು ಸರ್ಕಾರ ನಿರ್ಧರಿಸಿದೆಯೇ ; ಹಾಗಿದ್ದಲ್ಲಿ, ಈ ಯೋಜನೆಯ ರೂಪುರೇಷೆಗಳೇನು ; (ಯೋಜನಾ ವರದಿ ಒಳಗೊಂಡಂತೆ ಪೂರ್ಣ ಮಾಹಿತಿ ನೀಡುವುದು)

(ಈ) ಇಂತಹ ಸೋಲಾರ್ ಪಾರ್ಕ್‌ಗಳ ನಿರ್ಮಾಣಕ್ಕೆ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರಗಳಿಗೆ ಮಾರ್ಗಸೂಚಿಗಳನ್ನು ನೀಡಿದೆಯೇ ; ಹಾಗಿದ್ದಲ್ಲಿ, ಅವುಗಳು ಯಾವುವು ; (ಪೂರ್ಣ ವಿವರ ನೀಡುವುದು)

(ಉ) ರಾಜ್ಯಗಳಿಗೆ ಸೋಲಾರ್ ಪಾರ್ಕ್‌ಗಳ ನಿರ್ಮಾಣದಿಂದ ಕೇಂದ್ರ ಸರ್ಕಾರದ ನವೀನ ಮತ್ತು ನವೀಕರಣ ಇಂಧನ ಮಂತ್ರಾಲಯದಿಂದ ದೊರೆಯುವ ಕೇಂದ್ರ ಆರ್ಥಿಕ ನೆರವುಗಳು ಯಾವುವು ಮತ್ತು ಅನುಸರಿಸಬೇಕಾದ ಮಾನದಂಡಗಳು ಯಾವುವು ; ಈ ಆರ್ಥಿಕ ನೆರವು ಪಡೆಯುವಲ್ಲಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ವಿಶ್ವವಿದ್ಯಾಲಯ ಅನುದಾನ ಆಯೋಗ ೧ಲ ರಾಜ್ಯ ವಿಶ್ವವಿದ್ಯಾಲಯಗಳ ಜೋಡಣೆ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೬೨೩ (೬ಳಳ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರದ ವಿಶ್ವವಿದ್ಯಾಲಯ ಅನುದಾನ ಆಯೋಗದಿಂದ ಇತ್ತೀಚೆಗೆ ವಿದೇಶಿ ವಿಶ್ವವಿದ್ಯಾಲಯಗಳೊಂದಿಗೆ ಜೋಡಣೆಗೆ ಪುರಸ್ಕೃತವಾದ ೧೮ ರಾಜ್ಯ ವಿಶ್ವವಿದ್ಯಾಲಯಗಳು ಯಾವುವು ;

(ಆ) ಈ ರಾಜ್ಯ ವಿಶ್ವವಿದ್ಯಾಲಯಗಳನ್ನು ಯಾವ ಆಧಾರದ ಮೇಲೆ ಗುರುತಿಸಲಾಗಿದೆ; ಮತ್ತು ಇದರಲ್ಲಿ ರಾಜ್ಯ ಸರ್ಕಾರದ ಪಾತ್ರವೇನು ; (ಪೂರ್ಣ ಮಾಹಿತಿ ನೀಡುವುದು)

(ಇ) ಈ ರಾಜ್ಯ ವಿಶ್ವವಿದ್ಯಾಲಯಗಳು ಈ ಜೋಡಣೆಯಲ್ಲಿ (Twining) ವಿದೇಶಿ ವಿಶ್ವವಿದ್ಯಾಲಯಗಳೊಂದಿಗೆ ಮಾಡಿಕೊಳ್ಳುವ ಒಪ್ಪಂದದ ಪತ್ರದಲ್ಲಿ (Memorandum of Understanding) ರಾಜ್ಯ ಸರ್ಕಾರದ ಪಾತ್ರವೇನು ಮತ್ತು ಮುಂಬರುವ ದಿನಗಳಲ್ಲಿ ಈ ರಾಜ್ಯ ವಿಶ್ವವಿದ್ಯಾಲಯಗಳು ಆರ್ಥಿಕವಾಗಿ ದಿವಾಳಿಯಾದರೆ ಅಥವಾ ಒಪ್ಪಂದದ ಪತ್ರದಂತೆ ಕಾರ್ಯನಿರ್ವಹಿಸದಿದ್ದಲ್ಲಿ ರಾಜ್ಯ ಸರ್ಕಾರಕ್ಕೆ ಬರುವ ಆರ್ಥಿಕ ಹೊರೆಗಳು ಮತ್ತು ಜವಾಬ್ದಾರಿಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಮರಳಿ ತರುವ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೬೨೪ (೬೪೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪಟ್ಟಣ ಮತ್ತು ಗ್ರಾಮಾಂತರ ಪ್ರದೇಶದ ಮಕ್ಕಳು ಶಾಲೆಯಿಂದ ಹೊರಗುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ ಈ ಬಗ್ಗೆ ಅಧ್ಯಯಾನ/ಸಮೀಕ್ಷೆ ನಡೆಸಿದೆಯೇ ; ಈ ಅಧ್ಯಯಾನ/ಸಮೀಕ್ಷೆಗಳ ಸಾರಾಂಶಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಇ) ಕೋವಿಡ್-೧೯ರ ನಂತರ ೯ ರಿಂದ ೧೪ ವಯಸ್ಸಿನ ಗ್ರಾಮಾಂತರ ಪ್ರದೇಶದ ಮಕ್ಕಳ ಮನೆಕೆಲಸ ಮತ್ತು ಹೊಲದಲ್ಲಿ ವ್ಯವಸಾಯದಲ್ಲಿ ತೊಡಗಿಸಿಕೊಂಡಿದ್ದರಿಂದ ಅವರುಗಳು ಮರಳಿ ಶಾಲೆಗೆ ಬರುತ್ತಿಲ್ಲದಿರುವುದರಿಂದ ರಾಜ್ಯ ಸರ್ಕಾರ ವಹಿಸಿರುವ ಕಾಳಜಿಯೇನು ; (ಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಕಟ್ಟಡ ಕಾರ್ಮಿಕರ ಮಕ್ಕಳು ಮತ್ತು ವಿಶೇಷ ಚೇತನ ಮಕ್ಕಳನ್ನು ಮರಳಿ ಶಾಲೆಗೆ ತರಲು ಸರ್ಕಾರ ನಡೆಸಿರುವ ಪ್ರಯತ್ನಗಳು/ಕ್ರಮಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಗ್ರೀನ್ ಕ್ರೆಡಿಟ್ ಯೋಜನೆ ಅನುಷ್ಠಾನದ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೬೨೫ (೬೪೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ಗ್ರೀನ್ ಕ್ರೆಡಿಟ್ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಈ ಯೋಜನೆಯ ರೂಪು-ರೇಷೆಗಳು ಯಾವುವು ; ಈ ಯೋಜನೆಯ ಅನುಷ್ಠಾನ ಯಾವ ಹಂತದಲ್ಲಿದೆ ; (ಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆ ಅನುಷ್ಠಾನದಿಂದ ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ನಿಯಮಗಳನ್ನು ದುರ್ಬಲಗೊಳಿಸುತ್ತಿದೆ ಎನ್ನುವ ಭೀತಿ ಪರಿಸರವಾದಿಗಳಲ್ಲಿ ಮತ್ತು ತಜ್ಞರಲ್ಲಿ ಕಾಡುತ್ತಿದ್ದು, ಈ ಭೀತಿಯನ್ನು ಹೋಗಲಾಡಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕೈಗೊಂಡಿರುವ ಕ್ರಮಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ನಿಸರ್ಗ ಮತ್ತು ಪರಿಸರವನ್ನು ಸಂರಕ್ಷಿಸಲು ಕೈಗೊಳ್ಳಬೇಕಾದ ಅಗತ್ಯ ಕ್ರಮಗಳ ಬಗ್ಗೆ ಸರ್ಕಾರ ಪರಿಸರ ಸಂಶೋಧನಾ ಕೇಂದ್ರ ಸ್ಥಾಪಿಸಲು ಉದ್ದೇಶಿಸಿದೆಯೇ ; ಹಾಗಿದ್ದಲ್ಲಿ, ಪೂರ್ಣ ವಿವರ ನೀಡುವುದು ?

## ರಾಜ್ಯದಲ್ಲಿ ಬೆಳೆಯುತ್ತಿರುವ ನೀಲಗಿರಿ ಮತ್ತು ಅಕೇಶಿಯಾ ಮರಗಳ ಕುರಿತು

**ಶ್ರೀಮತಿ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೬೨೬ (೭೨೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ವಿಶೇಷವಾಗಿ ಸರ್ಕಾರಿ ಭೂಮಿಗಳಲ್ಲಿ ಹಾಗೂ ರಸ್ತೆ ಬದಿಗಳಲ್ಲಿ ಹೆಚ್ಚಾಗಿ ಬೆಳೆಯುತ್ತಿರುವ ನೀಲಗಿರಿ ಹಾಗೂ ಅಕೇಶಿಯಾ ಮರಗಳಿಂದ ಅಂತರ್ಜಲ ಮಟ್ಟ ಕುಸಿಯುತ್ತಿರುವ ಬಗ್ಗೆ ಹಾಗೂ ಇಲಾಖೆಯ ವತಿಯಿಂದ ರಾಜ್ಯದಾದ್ಯಂತ ನೆಡಲಾಗುತ್ತಿರುವ

ಆರೋಗ್ಯಕ್ಕೆ ಮಾರಕವಾದ "ದುಬ್ಬೆಗಿಡ" ಕೊನೊಕಾರ್ಪಸ್ (Conocarpus) ಮರಗಳಿಂದ ಭೂಮಿಯನ್ನು ಅಂತರ್ಜಲ ಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನೀಲಗಿರಿ ಮತ್ತು ಅಕೇಶಿಯಾ ಮರಗಳನ್ನು ಕಡಿಯಲು ಜನಸಾಮಾನ್ಯರಿಗೆ ಅವಕಾಶ ನೀಡದಿರಲು ಕಾರಣವೇನು ;

(ಇ) ಇತ್ತೀಚೆಗೆ ಅರಣ್ಯ ಇಲಾಖೆಯು ರಸ್ತೆ ಬದಿಗಳಲ್ಲಿ ಮಾನವನ ಮತ್ತು ಜಾನುವಾರಗಳ ಆರೋಗ್ಯಕ್ಕೆ ಮಾರಕವಾದ ವಿಷಕಾರಿ "ದುಬ್ಬೆಗಿಡ"/ಕೊನೊಕಾರ್ಪಸ್ ಸಸಿಗಳನ್ನು ಬೆಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಸಿಗಳನ್ನು ನಿಷೇಧಿಸಿ ಇವುಗಳಿಗೆ ಪರ್ಯಾಯವಾಗಿ ಯಾವ ಸಸಿಗಳನ್ನು ಬೆಳೆಸಲು ಕ್ರಮ ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ರಾಜ್ಯದಲ್ಲಿ ಸರ್ಕಾರಿ ಶಾಲೆಗಳಲ್ಲಿ ಇಂಗ್ಲೀಷ್ ಮಾಧ್ಯಮ ಬೋಧಿಸಲು ಆಂಗ್ಲ ಶಿಕ್ಷಕರನ್ನು ನೇಮಿಸುವ ಕುರಿತು

**ಶ್ರೀಮತಿ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೬೨೭ (೭೨೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಸ್ತುತ ರಾಜ್ಯದ ಒಟು ಎಷ್ಟು ಸರ್ಕಾರಿ ಶಾಲೆಗಳಲ್ಲಿ ಇಂಗ್ಲೀಷ್ ಮಾಧ್ಯಮದಲ್ಲಿ ತರಗತಿಗಳನ್ನು ನಡೆಸಲು ಕ್ರಮ ಕೈಗೊಳ್ಳಲಾಗಿದೆ ; (ಶಾಲೆಗಳ ವಿವರ ನೀಡುವುದು)

(ಆ) ಇಂಗ್ಲೀಷ್ ಮಾಧ್ಯಮಗಳಲ್ಲಿ ಭೋದಿಸಲು ಕ್ರಮಕೈಗೊಳ್ಳಲಾದ ಈ ಶಾಲೆಗಳಲ್ಲಿ ಆಂಗ್ಲ ಮಾಧ್ಯಮದ ಶಿಕ್ಷಕರನ್ನು ನೇಮಿಸಲಾಗಿದೆಯೇ ; ಒಟ್ಟು ಎಷ್ಟು ಆಂಗ್ಲ ಶಿಕ್ಷಕರನ್ನು ನೇಮಿಸಲಾಗಿದೆ ; ಇನ್ನು ಎಷ್ಟು ಶಾಲೆಗಳಿಗೆ ಆಂಗ್ಲ ಶಿಕ್ಷಕರನ್ನು ನೇಮಿಸುವುದು ಬಾಕಿ ಇದೆ ;

(ಇ) ಕೆಲವು ಸರ್ಕಾರಿ ಶಾಲೆಗಳಲ್ಲಿ (ಕರ್ನಾಟಕ ಪಬ್ಲಿಕ್ ಸ್ಕೂಲ್) ಕೆಪಿಎಸ್ ಸ್ಥಾಪನೆಯಾಗಿದ್ದರೂ ಇದುವರೆಗೂ ನುರಿತ ಆಂಗ್ಲ ಶಿಕ್ಷಕರನ್ನು ನೇಮಿಸಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಈ ಶಾಲೆಗಳಿಗೆ ಆಂಗ್ಲ ಶಿಕ್ಷಕರನ್ನು ನೇಮಿಸಲಾಗುವುದು ? (ವಿವರ ನೀಡುವುದು)

## ರಾಜ್ಯದಲ್ಲಿರುವ ನೋಂದಾಯಿಸಲ್ಪಟ್ಟ ಖಾಸಗಿ ವೈದ್ಯಕೀಯ ಕೋಚಿಂಗ್ ಸೆಂಟರ್‌ಗಳ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೬೨೮ (೫೬೨) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನೋಂದಾಯಿಸಲ್ಪಟ್ಟ ಖಾಸಗಿ ವೈದ್ಯಕೀಯ ಕೋಚಿಂಗ್ ಸೆಂಟರ್‌ಗಳ ಸಂಖ್ಯೆ ಎಷ್ಟು ; ನೋಂದಾಯಿಸಲ್ಪಡದಿರುವ ಖಾಸಗಿ ಕೋಚಿಂಗ್ ಸೆಂಟರ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

(ಆ) ಈ ಖಾಸಗಿ ಕೋಚಿಂಗ್ ಸೆಂಟರ್‌ಗಳ ಹಾವಳಿಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಖಾಸಗಿ ಕೋಚಿಂಗ್ ಸೆಂಟರ್‌ಗಳು ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿವೆಯೇ ; ಇವುಗಳು ವಾರ್ಷಿಕ ವಾಹಿವಾಟಿನ ಮಾಹಿತಿ ಒದಗಿಸುತ್ತಿವೆಯೇ ; (ವಿವರವನ್ನು ಒದಗಿಸುವುದು)

(ಈ) ಈ ಖಾಸಗಿ ಕೋಚಿಂಗ್ ಸೆಂಟರ್‌ಗಳ ಮೇಲ್ವಿಚಾರಣೆ ಯಾವ ಇಲಾಖೆಯ ಉಸ್ತುವಾರಿಯಲ್ಲಿದೆ ?

## ಕೇಂದ್ರ ಸರ್ಕಾರ ಕೊಡ ಮಾಡಿದ ಕೋವಿಶೀಲ್ಡ್ ಲಸಿಕೆಯಿಂದ ಅಡ್ಡ ಪರಿಣಾಮ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೬೨೯ (೫೬೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೇಂದ್ರ ಸರ್ಕಾರ ಕೊಡ ಮಾಡಿದ ಕೋವಿಶೀಲ್ಡ್ ಲಸಿಕೆಯಿಂದ ಗಂಭೀರ ಅಡ್ಡ ಪರಿಣಾಮ ಸಮಸ್ಯೆಗಳನ್ನು ಎದುರಿಸುತ್ತಿರುವ ಸಾರ್ವಜನಿಕರ ಬಗ್ಗೆ ಸರ್ಕಾರ ಅಧ್ಯಯನ ನಡೆಸಿದೆಯೇ ;

(ಆ) ಅಧ್ಯಯನ ನಡೆಸಿದ್ದಲ್ಲಿ ಅಧ್ಯಯನದಿಂದ ಕಂಡು ಬಂದಿರುವ ಅಂಶಗಳಾವುವು ; ಈ ಅಂಶಗಳನ್ನು ಕೇಂದ್ರ ಸರ್ಕಾರದ ಗಮನಕ್ಕೆ ತರಲಾಗಿದೆಯೇ ಅಥವಾ ಕೇಂದ್ರ ಸರ್ಕಾರದೊಂದಿಗೆ ಈ ಕುರಿತು ಚರ್ಚಿಸಲಾಗಿದೆಯೇ ;

(ಇ) ಈ ಸಂಬಂಧ ಕೇಂದ್ರ ಸರ್ಕಾರದ ಆರೋಗ್ಯ ಮಂತ್ರಾಲಯವು ಕೈಗೊಂಡ ಕ್ರಮಗಳೇನು ?

## ಆಂಧ್ರ ಪ್ರದೇಶದಿಂದ ಗಡಿ ಭಾಗದಲ್ಲಿ ಕನ್ನಡ ಕಲಿಯುವ ಮಕ್ಕಳಿಗೆ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೬೩೦ (೬೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಂಧ್ರಪ್ರದೇಶ ಸರ್ಕಾರವು ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೊಳಿಸುತ್ತಿದ್ದು ಹೊಸ ಪಠ್ಯಕ್ರಮದ ಅನುಸಾರ ಕನ್ನಡ ಐಚ್ಛಿಕ ವಿಷಯವನ್ನು ಆಯ್ಕೆ ಮಾಡಿಕೊಳ್ಳುವುದಕ್ಕೆ ಕನ್ನಡಿಗರಿಗೆ ಅವಕಾಶವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಗಡಿ ನಾಡು ಭಾಗದಲ್ಲಿರುವ ಕನ್ನಡದ ಮಕ್ಕಳು ಕನ್ನಡ ಭಾಷಾ ಕಲಿಕೆಯಿಂದ ವಂಚಿತರಾದಂತಾಗುವುದಿಲ್ಲವೆ ;

(ಇ) ಈಗಾಗಲೇ ಮಹಾರಾಷ್ಟ್ರದ ಕನ್ನಡ ಶಾಲೆಗಳಲ್ಲಿ ಮರಾಠಿ ಶಿಕ್ಷಕರನ್ನು ನೇಮಿಸುವ ಮೂಲಕ ಅನ್ಯಾಯ ಮಾಡಿದ್ದು ಆಂಧ್ರಪ್ರದೇಶದ ದೋರಣೆಯಿಂದ ಕನ್ನಡ ಕಲಿಯ ಬಯಸುವ ಮಕ್ಕಳಿಗೆ ಅವಕಾಶವೇ ಇಲ್ಲದಂತಾಗಿರುವುದು ಎಷ್ಟರ ಮಟ್ಟಿಗೆ ಸರಿ ; ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಗಡಿ ಭಾಗದ ಕನ್ನಡದ ಮಕ್ಕಳ ಅನುಕೂಲಕ್ಕಾಗಿ ಆಯಾ ರಾಜ್ಯಗಳ ಶಿಕ್ಷಣ ಸಚಿವರ ಜೊತೆಗೆ ಸಭೆ ನಡೆಸಿ, ಕನ್ನಡ ಕಲಿಕೆಗೆ ಎಲ್ಲಾ ರೀತಿಯ ಅನುಕೂಲತೆಗಳು ಸಿಗುವಂತೆ ಮಾಡಲು ಕ್ರಮ ವಹಿಸಲಾಗುವುದೇ ?

## ನಕಲಿ ದಾಖಲೆಗಳ ಕುರಿತು

**ಶ್ರೀ ಅಡಗೂರ್ ಹೆಚ್.ವಿಶ್ವನಾಥ್ (ನಾಮನಿರ್ದೇಶನ ಹೊಂದಿದವರು) :-**

೬೩೧ (೫೭೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನಕಲಿ ದಾಖಲೆಗಳ ಆಧಾರದ ಮೇಲೆ ನಿಯಮಬಾಹಿರವಾಗಿ ಸೇಂಟ್ ಕ್ಸೇವಿಯರ್ ಕಾಲೇಜು, ಬೆಂಗಳೂರು ಇವರಿಗೆ ೨೦೨೩-

೨೦೨೪ನೇ ಸಾಲಿನ ವಿಷಯ ಸಂಯೋಜನೆಗೆ ಶಿಫಾರಸ್ಸು ಮಾಡಿರುವ ಬಗ್ಗೆ ಸಂಬಂಧಪಟ್ಟ ಅಧಿಕಾರಿ ಹಾಗೂ ನೌಕರರ ವಿರುದ್ಧ ಸರ್ಕಾರವು ಶಿಸ್ತಿನ ಕ್ರಮ ಜರುಗಿಸಲು ಆದೇಶಿಸಿದ್ದು, ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಆ) ಸದರಿ ಅಧಿಕಾರಿ ಹಾಗೂ ನೌಕರರ ವಿರುದ್ಧ ಇಲ್ಲಿಯ ತನಕ ಯಾವುದೇ ಶಿಸ್ತಿನ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಇ) ಸದರಿ ಕಾಲೇಜಿಗೆ ನಕಲಿ ದಾಖಲೆ ಆಧಾರದ ಮೇಲೆಯೇ ೨೦೨೨-೨೦೨೩ನೇ ಸಾಲಿನಲ್ಲಿಯೂ ವಿಷಯ ಸಂಯೋಜನೆಗೆ ಇದೇ ಅಧಿಕಾರಿಗಳೇ ಶಿಫಾರಸ್ಸು ಮಾಡಿ ಅನುಮತಿ ಕೊಡಿಸಿ, ಆದೇಶ ಹೊರಡಿಸಿರುವ ಬಗ್ಗೆ ಇಲಾಖೆಗೆ ದೂರು ಬಂದಿದೆಯೇ ; ಬಂದಿದ್ದಲ್ಲಿ, ಸಂಬಂಧಿಸಿದ ಅಧಿಕಾರಿ ಹಾಗೂ ನೌಕರರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಮುಖ್ಯಮಂತ್ರಿ ಕೌಶಲ್ಯ ಕರ್ನಾಟಕ ಯೋಜನೆ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೬೩೨ (೬೫೮) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಖ್ಯಮಂತ್ರಿ ಕೌಶಲ್ಯ ಕರ್ನಾಟಕ ಯೋಜನೆಯಡಿ ಎಷ್ಟು ಪ್ರಶಿಕ್ಷಣಾರ್ಥಿಗಳಿಗೆ ತರಬೇತಿ ನೀಡಲಾಗಿದೆ ; ತರಬೇತಿ ನೀಡಿದ ನಂತರ ಎಷ್ಟು ಪ್ರಶಿಕ್ಷಣಾರ್ಥಿಗಳಿಗೆ ಉದ್ಯೋಗ ಕಲ್ಪಿಸಲಾಗಿದೆ ; (ಕಳೆದ ಮೂರು ವರ್ಷಗಳ ಜಿಲ್ಲಾವಾರು ಮತ್ತು ವರ್ಷವಾರು ಮಾಹಿತಿ ನೀಡುವುದು)

(ಆ) ಮುಖ್ಯಮಂತ್ರಿ ಕೌಶಲ್ಯ ಕರ್ನಾಟಕ ಯೋಜನೆಗಳಿಗೆ ರಾಜ್ಯ ಸರ್ಕಾರ ಒದಗಿಸಿರುವ ಅನುದಾನ ಎಷ್ಟು ; (ಕಳೆದ ಮೂರು ವರ್ಷಗಳ ಜಿಲ್ಲಾವಾರು ಮತ್ತು ವರ್ಷಾವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿ ಎಷ್ಟು ತರಬೇತಿ ಕೇಂದ್ರಗಳು ನೋಂದಣಿಯಾಗಿವೆ ? (ಜಿಲ್ಲಾವಾರು ಮತ್ತು ವರ್ಷಾವಾರು ಮಾಹಿತಿ ನೀಡುವುದು)

## PM USHA ಯೋಜನೆಯಡಿ ಒದಗಿಸಿರುವ ಅನುದಾನದ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೬೩೩ (೬೫೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಧಾನ ಮಂತ್ರಿ USHA ಯೋಜನೆಯಡಿ ರಾಜ್ಯದಲ್ಲಿ ಯಾವ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; (ಕಳೆದ ಮೂರು ವರ್ಷಗಳ ಕಾರ್ಯಕ್ರಮಗಳ ಮಾಹಿತಿ ಒದಗಿಸುವುದು)

(ಆ) ಪ್ರಧಾನ ಮಂತ್ರಿ USHA ಯೋಜನೆಯಡಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದಿಂದ ಎಷ್ಟು ಅನುದಾನವನ್ನು ಒದಗಿಸಲಾಗಿದೆ ? (ಕಳೆದ ಮೂರು ವರ್ಷಗಳ ಮಾಹಿತಿ ಒದಗಿಸುವುದು)

## ಬಿ.ಪಿ.ಎಲ್ ಮತ್ತು ಎ.ಪಿ.ಎಲ್. ಕಾರ್ಡ್ ವಿತರಣೆಯಾಗದಿರುವ ಬಗ್ಗೆ

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೪ (೬೯೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ ೧ ವರ್ಷದಿಂದ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡ್‌ಗೆ ಅರ್ಜಿ ಸಲ್ಲಿಸಿದ್ದು, ಇಲ್ಲಿಯವರೆಗೆ ಕಾರ್ಡ್ ವಿತರಣೆಯಾಗಿರುವುದಕ್ಕೆ ಕಾರಣವೇನು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೧ ವರ್ಷದಲ್ಲಿ ಎಷ್ಟು ಅಕ್ರಮ ಪಡಿತರ ಚೀಟಿಗಳನ್ನು ವಶಕ್ಕೆ ಪಡೆಯಲಾಗಿದೆ ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ೧೧೦ ಕೆ.ವಿ. ಸ್ಟೇಷನ್ ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೫ (೬೯೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ೧೧೦ ಕೆ.ವಿ. ಸ್ಟೇಷನ್‌ಗಳು ಕಾರ್ಯನಿರ್ವಹಿಸುತ್ತಿವೆ ; (ಮಾಹಿತಿ ನೀಡುವುದು)

(ಆ) ೧೧೦ ಕೆ.ವಿ. ಸ್ಟೇಷನ್‌ಗಳು ಮೇಲ್ದರ್ಜೆಗೇರಿಸಲು ಜಿಲ್ಲೆಯಿಂದ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ೧೧೦ ಕೆ.ವಿ. ಸ್ಟೇಷನ್‌ಗಳನ್ನು ಮೇಲ್ದರ್ಜೆಗೇರಿಸಲಾಗುವುದು ? (ವಿವರ ಒದಗಿಸುವುದು)

## ಕಾಡು ಪ್ರಾಣಿಗಳಿಂದ ರೈತರ ಬೆಳೆಗಳು ಹಾನಿಯಾಗುತ್ತಿರುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೬ (೬೯೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕಾಡು ಪ್ರಾಣಿಗಳಿಂದ ಜನವಸತಿ ಪ್ರದೇಶ ಮತ್ತು ರೈತರ ಬೆಳೆದ ಬೆಳೆಗಳು ಸಾಕಷ್ಟು ಪ್ರಮಾಣದಲ್ಲಿ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ರೈತರ ಬೆಳೆಗಳಿಗೆ ಅಲ್ಪ ಪರಿಹಾರ ನೀಡುತ್ತಿದ್ದು, ಹೆಚ್ಚಿನ ಮೊತ್ತದ ಪರಿಹಾರ ನೀಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಕಾಡು ಪ್ರಾಣಿಗಳು ಹೊಲಗಳಿಗೆ ಮತ್ತು ಜನವಸತಿ ಪ್ರದೇಶಗಳಿಗೆ ಪ್ರವೇಶಿಸದಂತೆ ಸರ್ಕಾರ ಕೈಗೊಂಡ ಕ್ರಮವೇನು ?

## ೩೩ ಕೆ.ವಿ. ವಿದ್ಯುತ್ ವಿತರಣಾ ಉಪ ಕೇಂದ್ರ ಸ್ಥಾಪನೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೭ (೬೯೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆ ಹುಮನಾಬಾದ ತಾಲ್ಲೂಕಿನ ಹಳ್ಳಿಖೇಡ (ಕೆ) ಮತ್ತು ನಿಂಬೂರು ಗ್ರಾಮದಲ್ಲಿ ೩೩ ಕೆ.ವಿ. ವಿದ್ಯುತ್ ವಿತರಣಾ ಉಪ ಕೇಂದ್ರ ಸ್ಥಾಪನೆಗೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಇನ್ನೂ ವಿದ್ಯುತ್ ವಿತರಣಾ ಉಪ ಕೇಂದ್ರ ಸ್ಥಾಪನೆ ಮಾಡದಿರಲು ಕಾರಣವೇನು ;

(ಇ) ಯಾವ ಕಾಲಮಿತಿಯಲ್ಲಿ ವಿದ್ಯುತ್ ವಿತರಣಾ ಉಪ ಕೇಂದ್ರ ಸ್ಥಾಪನೆ ಮಾಡಲಾಗುವುದು ? (ಮಾಹಿತಿ ಒದಗಿಸುವುದು)

## ನೇರ ನೇಮಕಾತಿ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೮ (೬೯೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಗೆ ನೇರ ನೇಮಕಾತಿ ಹೊಂದಿದ ನೌಕರರಿಗೆ ವೃಂದ ಮತ್ತು ನೇಮಕಾತಿ ನಿಯಮಗಳಿವೆಯೇ ; (ವಿವರ ನೀಡುವುದು)

(ಆ) ವೃಂದ ಮತ್ತು ನೇಮಕಾತಿ ನಿಯಮಗಳಿಲ್ಲದೇ ನೇಮಕಾತಿ ಮತ್ತು ಬಡ್ತಿ ನೀಡಲು ನಿಯಮಗಳಲ್ಲಿ ಅವಕಾಶಗಳಿವೆಯೇ ; ಅವಕಾಶಗಳಿದ್ದಲ್ಲಿ, ಆದೇಶದ ಪ್ರತಿ ನೀಡುವುದು ;

(ಇ) ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯಲ್ಲಿ ನೀಡಲಾಗುತ್ತಿರುವ ವೈದ್ಯಕೀಯ ಧನಸಹಾಯದ ಗುಂಪುಗಳಾವುವು/ವರ್ಗಗಳಾವುವು ; (ವಿವರ ನೀಡುವುದು)

(ಈ) ಯಾವ ಯಾವ ವರ್ಗಗಳಲ್ಲಿ ಗರಿಷ್ಠ ಧನಸಹಾಯ ನೀಡಲಾಗುತ್ತಿದೆ ; ಒಮ್ಮೆ ಗರಿಷ್ಠ ಧನಸಹಾಯ ಪಡೆದು ಮತ್ತೆ ಧನಸಹಾಯ ಪಡೆಯಲು ಅವಕಾಶಗಳಿವೆಯೇ ? (ಈ ಕುರಿತು ಸರ್ಕಾರದ ಪ್ರತಿ ನೀಡುವುದು)

## ಕಾಡು ಪ್ರಾಣಿಗಳ ದಾಳಿಯ ಬಗ್ಗೆ

**ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೯ (೭೩೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಕಾಡಂಚಿನ ಗ್ರಾಮವಾಸಿಗಳಿಗೆ ಕಾಡುಪ್ರಾಣಿಗಳು ದಾಳಿ ಮಾಡಿ, ಪ್ರಾಣ ಬಿಟ್ಟ ನಾಗರಿಕರ ಸಂಖ್ಯೆ ಎಷ್ಟು ; (ಗ್ರಾಮಾವಾರು ಪೂರ್ಣ ವಿವರ ನೀಡುವುದು)

(ಆ) ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳ ಕಾಡಂಚಿನ ಎಷ್ಟು ಗ್ರಾಮಗಳಲ್ಲಿ ಈ ರೀತಿಯ ಘಟನೆಗಳು ಜರುಗಿವೆ ;

(ಇ) ಈ ಘಟನೆಗಳಿಂದ ನೊಂದಿದವರಿಗೆ ಹಾಗೂ ಅವರ ಕುಟುಂಬಸ್ಥರಿಗೆ ನೀಡಿರುವ ಪರಿಹಾರವೆಷ್ಟು ;

(ಈ) ಕಾಡಂಚಿನ ಜನರಿಗೆ ಸರ್ಕಾರ ಒದಗಿಸಿರುವ ಇತರೆ ಸೌಲಭ್ಯಗಳಾವುವು; ಇವುಗಳನ್ನು ಹಾಲಿ ಎಷ್ಟು ಜನರಿಗೆ ನೀಡಲಾಗಿದೆ ? (ಪೂರ್ಣ ವಿವರ ಒದಗಿಸುವುದು)

## ಪ್ರಾಥಮಿಕ ಶಾಲೆಗಳ ಮೂಲಸೌಲಭ್ಯಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೪೦ (೭೩೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಾಥಮಿಕ ಶಾಲೆಗಳನ್ನು ಇನ್ನು ಸದೃಢವಾಗಿ ಮುಂದುವರಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ಹಾಗೂ ನೀಡಿರುವ ಮೂಲಭೂತ ಸೌಲಭ್ಯಗಳಾವುವು ;

(ಆ) ಸದರಿ ಶಾಲೆಗಳಲ್ಲಿ ಶಿಕ್ಷಕರ ಹಾಗೂ ಪೀಠೋಪಕರಣಗಳ ಸಮಸ್ಯೆ ಇದ್ದು ಇವುಗಳ ನಿವಾರಣೆಗೆ ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಇ) ಕಡಿಮೆ ವಿದ್ಯಾರ್ಥಿಗಳು ಇರುವ ಪ್ರಾಥಮಿಕ ಶಾಲೆಗಳನ್ನು ಮುಚ್ಚಿ ಪಕ್ಕದ ಗ್ರಾಮದ ಶಾಲೆಗಳಿಗೆ ಮಕ್ಕಳನ್ನು ವರ್ಗಾಯಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಈ) ಇದ್ದಲ್ಲಿ, ಇದರಿಂದ ಹಳ್ಳಿಯ ಬಡ ರೈತಾಪಿ ಮಕ್ಕಳಿಗೆ ತೊಂದರೆಯಾಗಿ ವಿದ್ಯಾಭ್ಯಾಸದಿಂದಲೇ ವಂಚಿತರಾಗಿರುವುದರಿಂದ ಸದರಿ ಶಾಲೆಗಳನ್ನು ಇದ್ದ ಸ್ಥಳದಲ್ಲೇ ಮುಂದುವರೆಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ಪೂರ್ಣ ಮಾಹಿತಿ ಒದಗಿಸುವುದು)

## ಬಿ.ಪಿ.ಎಲ್ ಕಾರ್ಡುದಾರರ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೪೧ (೭೪೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡುದಾರರ ಸಂಖ್ಯೆ ಎಷ್ಟು ;

(ಆ) ಬಿ.ಪಿ.ಎಲ್ ಕಾರ್ಡ್ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಇತ್ತೀಚಿನ ದಿನಗಳಲ್ಲಿ ಒಬ್ಬ ಕೂಲಿಗಾರನೂ ಸಹ ನಿಗದಿತ ಸಮಯಕ್ಕೆ ಕೂಲಿಗೆ ಹೋಗಲು ದ್ವಿಚಕ್ರ ವಾಹನ ಹಾಗೂ ಕನಿಷ್ಟ ಮನರಂಜನೆಗೆ ಟಿ.ವಿ ಇತ್ಯಾದಿಗಳು ಅತ್ಯಾವಶ್ಯಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಸೌಲಭ್ಯ ಹೊಂದಿರುವ ಫಲಾನುಭವಿಗಳ ಹೆಸರುಗಳನ್ನು ಅನರ್ಹತೆಯಿಂದ ತೆಗೆಯಲು ಸರ್ಕಾರ ಕೈಗೊಳ್ಳುವ ಕ್ರಮಗಳಾವುವು ?

## ಕಿದ್ವಾಯಿ ಆಸ್ಪತ್ರೆ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೪೨ (೭೪೦) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಕಿದ್ವಾಯಿ ಆಸ್ಪತ್ರೆಯಲ್ಲಿ ಕ್ಯಾನ್ಸರ್ ರೋಗಕ್ಕೆ ಲಭ್ಯವಿರುವ ಚಿಕಿತ್ಸೆಗಳು ಹಾಗೂ ಸೌಲಭ್ಯಗಳು ಯಾವುವು ;

(ಆ) ಈ ಆಸ್ಪತ್ರೆಗೆ ಕ್ಯಾನ್ಸರ್ ಚಿಕಿತ್ಸೆಗೆ ಹೆಚ್ಚಿನ ಜನರು ಬರುತ್ತಿರುವುದರಿಂದ ವೈದ್ಯರು ಹಾಗೂ ಇತರೆ ಸಿಬ್ಬಂದಿಗಳ ಕೊರತೆಯಿರುವುದು ನಿಜವಲ್ಲವೆ ; ಈ ಕೊರತೆಯನ್ನು ನಿವಾರಿಸಲು ಕೈಗೊಳ್ಳುವ ಕ್ರಮವೇನು ;

(ಇ) ಸದರಿ ಆಸ್ಪತ್ರೆಯ ಒತ್ತಡ ನಿವಾರಣೆಗೆ ಯಾವ ಯಾವ ಜಿಲ್ಲೆಗಳಲ್ಲಿ ಕ್ಯಾನ್ಸರ್ ಆಸ್ಪತ್ರೆಗಳನ್ನು ತೆರೆಯಲಾಗಿದೆ ಹಾಗೂ ತೆರೆಯಲು ಉದ್ದೇಶಿಸಲಾಗಿದೆಯೇ ? (ಪೂರ್ಣ ಮಾಹಿತಿ ಒದಗಿಸುವುದು)

## ಹೊಸಕೋಟೆ ತಾಲ್ಲೂಕಿನಲ್ಲಿರುವ ಅರಣ್ಯ ಇಲಾಖೆ ಜಮೀನಿನ ಕುರಿತು

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು):-**

೬೪೩ (೫೬೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೊಸಕೋಟೆ ತಾಲ್ಲೂಕಿನಲ್ಲಿ ಅರಣ್ಯ ವಲಯ ಇಲಾಖೆಯ ವಶದಲ್ಲಿರುವ ಜಮೀನಿನ ವಿಸ್ತೀರ್ಣವೆಷ್ಟು ; ಇದರಲ್ಲಿ ಒತ್ತುವರಿಯಾಗಿರುವ ಜಮೀನಿನ ವಿಸ್ತೀರ್ಣವೆಷ್ಟು ; (ಒತ್ತುವರಿ ಮಾಡಿರುವವರ ಹೆಸರು, ವಿಳಾಸ ಮತ್ತು ವಿಸ್ತೀರ್ಣದ ಮಾಹಿತಿ ನೀಡುವುದು)

(ಆ) ಕಳೆದ ಒಂದು ವರ್ಷದಲ್ಲಿ ಒತ್ತುವರಿಯಾಗಿರುವ ಜಮೀನಿನ ವಿಸ್ತೀರ್ಣ ಹಾಗೂ ತೆರವುಗೊಳಿಸಿರುವ ಜಮೀನಿನ ವಿಸ್ತೀರ್ಣವೆಷ್ಟು; (ವಿವರ ನೀಡುವುದು)

(ಇ) ಒತ್ತುವರಿಯಾಗಿರುವ ಜಮೀನನ್ನು ತೆರವುಗೊಳಿಸಲು ಸರ್ಕಾರ ಕಯಗೊಂಡಿರುವ ಕ್ರಮಗಳೇನು ?

## ಹೊಸಕೋಟೆ ತಾಲ್ಲೂಕಿನಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳ ಕುರಿತು

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ) (ವಿಧಾನಸಭೆಯಿಂದ ಚುನಾಯಿತರಾದವರು):-**

೬೪೪ (೫೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೊಸಕೋಟೆ ತಾಲ್ಲೂಕಿನ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಕೊಠಡಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕೊಠಡಿಗಳಿಲ್ಲದಿರುವ ಶಾಲೆಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ;

(ಇ) ಕೊರತೆಯಿರುವ ಕೊಠಡಿಗಳನ್ನು ಮಂಜೂರು ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು ; ಯಾವಾಗ ಮಂಜೂರು ಮಾಡಲಾಗುತ್ತದೆ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಆಂಬುಲೆನ್ಸ್‌ಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೪೫ (೫೮೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಆರೋಗ್ಯ ಇಲಾಖೆಗೆ ಸಹಕಾರಿಯಾಗುವಂತೆ ಕಾರ್ಯನಿರ್ವಹಿಸುತ್ತಿರುವ ಆಂಬುಲೆನ್ಸ್‌ಗಳ ಸಂಖ್ಯೆ ಎಷ್ಟು ;

(ಆ) ಸದರಿ ಆಂಬುಲೆನ್ಸ್‌ಗಳು ಸುಸ್ಥಿತಿಯಲ್ಲಿ ಇಲ್ಲದಿರುವುದು ಹಾಗೂ ವೆಂಟಿಲೇಟರ್‌ಗಳು ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೇಂದ್ರ ಪುರಸ್ಕೃತ ಕೌಶಲ್ಯಾಭಿವೃದ್ಧಿ ಯೋಜನೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೪೬ (೫೮೫) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೇಂದ್ರ ಪುರಸ್ಕೃತ ಕೌಶಲ್ಯಾ ಅಭಿವೃದ್ಧಿ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆಯೇ; ಹಾಗಿದ್ದಲ್ಲಿ, ಈ ಯೋಜನೆಯ ಧ್ಯೇಯೋದ್ಧೇಶ ಮತ್ತು ರೂಪು-ರೇಷೆಗಳು ಯಾವುವು ;

(ಆ) ಸದರಿ ಜಿಲ್ಲೆಗಳಲ್ಲಿ ಈ ಯೋಜನೆ ಅಡಿಯಲ್ಲಿ ತೆರೆದಿರುವ ಕೌಶಲ್ಯ ಅಭಿವೃದ್ಧಿ ಕೇಂದ್ರಗಳೆಷ್ಟು ಮತ್ತು ಈ ಕೇಂದ್ರಗಳನ್ನು ನಡೆಸುತ್ತಿರುವ ಸಂಸ್ಥೆಗಳು ಯಾವುವು ಮತ್ತು ಅವುಗಳ ಜವಾಬ್ದಾರಿ ನಿರ್ವಹಣೆ ಬಗ್ಗೆ ಮೇಲುಸ್ತುವಾರಿಗೆ ಇರುವ ವ್ಯವಸ್ಥೆಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಈ ಯೋಜನೆಯಡಿ ತರಬೇತಿ ಹೊಂದಿದ ಯುವಕ-ಯುವತಿಯರು ಎಷ್ಟು; ಇವರಲ್ಲಿ ಎಷ್ಟು ಜನರಿಗೆ ಉದ್ಯೋಗ ಕಲ್ಪಿಸಲಾಗಿದೆ ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕಂಡುಬರುತ್ತಿರುವ ಡೆಂಗ್ಯೂ ಪ್ರಕರಣಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೪೭ (೫೮೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಇದುವರೆಗೂ ಎಷ್ಟು ಡೆಂಗ್ಯೂ ಪ್ರಕರಣ ಕಂಡು ಬಂದಿವೆ ;

(ಆ) ಈ ಸಾಂಕ್ರಾಮಿಕ ರೋಗದ ಬಗ್ಗೆ ಜನ ಜಾಗೃತಿ ಮೂಡಿಸಲು ಸರ್ಕಾರ ಎಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; (ಅಂಕಿ ಸಂಖ್ಯೆ ಸಹಿತ ವಿವರ ನೀಡುವುದು)

(ಇ) ಸದರಿ ಜಿಲ್ಲೆಗಳಲ್ಲಿ ವೈದ್ಯರ ಸಮಸ್ಯೆ ತೀವ್ರತರವಾಗಿದ್ದು, ಮುಂಜಾಗ್ರತೆಯ ಕ್ರಮವಹಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ವಿವರ ನೀಡುವುದು)

(ಈ) ಡೆಂಗ್ಯೂ ಚಿಕಿತ್ಸೆಗೆ ಸರ್ಕಾರ ನಿಗಧಿಪಡಿಸಿದ ದರ ಎಷ್ಟು; ಈ ದರ ಆಸ್ಪತ್ರೆಗಳಲ್ಲಿ ಕಟ್ಟುನಿಟ್ಟಾಗಿ ಪಾಲನೆಯಾಗುತ್ತಿದೆಯೇ; ಹೆಚ್ಚು ದರ ಪಡೆದ ಆಸ್ಪತ್ರೆಗಳ ವಿರುದ್ಧ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ ? (ವಿವರ ನೀಡುವುದು)

## ಪ್ರಾಥಮಿಕ/ಪ್ರೌಢ/ಮುಖ್ಯ ಶಿಕ್ಷಕರ/ಹಿರಿಯ ಶಿಕ್ಷಕರುಗಳಿಗೆ ಬಡ್ತಿ ನೀಡುವ ಕುರಿತು

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೬೪೮ (೫೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಾಥಮಿಕ/ಪ್ರೌಢ ಶಾಲಾ ಶಿಕ್ಷಕರ/ಮುಖ್ಯ ಶಿಕ್ಷಕರ/ಹಿರಿಯ ಮುಖ್ಯ ಶಿಕ್ಷಕರುಗಳ ಬಡ್ತಿ ಪ್ರಕ್ರಿಯೆಗಳು ಯಾವ ಹಂತದಲ್ಲಿವೆ ;

(ಆ) ಪ್ರಾಥಮಿಕ/ಪ್ರೌಢ ಶಾಲಾ ಶಿಕ್ಷಕರ/ಮುಖ್ಯ ಶಿಕ್ಷಕರ/ಹಿರಿಯ ಮುಖ್ಯ ಶಿಕ್ಷಕರುಗಳ ಬಡ್ತಿ ಪ್ರಕ್ರಿಯೆಗಳು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಸದರಿ ಶಿಕ್ಷಕರುಗಳಿಗೆ ಯಾವ ಕಾಲಮಿತಿಯೊಳಗೆ ಬಡ್ತಿ ನೀಡಲಾಗುವುದು ?

## ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಬಡ್ತಿ ನೀಡುವ ಕುರಿತು

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೬೪೯ (೫೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಾಥಮಿಕ ಶಾಲೆಗಳಲ್ಲಿ ಬಿ.ಎ., ಬಿ.ಎಸ್.ಸಿ., ಬಿ.ಎಡ್., ಅರ್ಹತೆ ಹೊಂದಿರುವ ಶಿಕ್ಷಕರನ್ನು ಪ್ರೌಢ ಶಾಲೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆಯು ಕಳೆದ ಎಷ್ಟು ವರ್ಷಗಳಿಂದ ನಡೆಯುತ್ತಿದೆ ;

(ಆ) ಈಗ ಬಡ್ತಿ ನೀಡುವ ಪ್ರಕ್ರಿಯೆಯು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ವರ್ಷಗಳಿಂದ ಸದರಿ ಪ್ರಕ್ರಿಯೆಯು ಸ್ಥಗಿತಗೊಂಡಿದೆ ;

(ಇ) ಪುನಃ ಸದರಿ ಶಿಕ್ಷಕರುಗಳಿಗೆ ಬಡ್ತಿ ನೀಡುವ ಪ್ರಕ್ರಿಯೆಗಳನ್ನು ಯಾವಾಗ ಪ್ರಾರಂಭಿಸಲಾಗುವುದು ?

## ರಾಜ್ಯದಲ್ಲಿ ಉನ್ನತ ಶಿಕ್ಷಣ ಪದವಿ ಕಾಲೇಜು ಮತ್ತು ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೬೫೦ (೫೭೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಉನ್ನತ ಶಿಕ್ಷಣ ಪದವಿ ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿ ಪದವಿ ಮತ್ತು ಉನ್ನತ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಕಾಲೇಜು ಫೀ-ಶುಲ್ಕ ಪರಿಷ್ಕರಣೆ ಮಾಡುವ ಸಂದರ್ಭದಲ್ಲಿ ಎಷ್ಟು ಹೆಚ್ಚುವರಿ ಮಾಡಲಾಗಿದೆ ; ಈ ಸಾಲಿನಲ್ಲಿ ಕಾಲೇಜು ಮತ್ತು ವಿಶ್ವವಿದ್ಯಾಲಯಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಖಾಲಿಯಿರುವ ಹುದ್ದೆಗಳ ಪೈಕಿ ಭರ್ತಿ ಮಾಡಲಾದ ಹುದ್ದೆಗಳೆಷ್ಟು ?

## ಪದವಿ ಪೂರೈಸಿದ ಸೇವಾನಿರತ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಜೇಷ್ಠತೆಯೊಂದಿಗೆ ವಿಲೀನಗೊಳಿಸುವ ಕುರಿತು

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೬೫೧ (೫೭೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪದವಿ ಪೂರೈಸಿದ ಸೇವಾನಿರತ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಸೇವಾ ಜೇಷ್ಠತೆಯೊಂದಿಗೆ ೬ ರಿಂದ ೮ ಕ್ಕೆ ವಿಲೀನಗೊಳಿಸುವ ಪ್ರಕ್ರಿಯೆಯು ಯಾವ ಹಂತದಲ್ಲಿದೆ ;

(ಆ) ಸದರಿ ಸೇವಾನಿರತ ಪ್ರಾಥಮಿಕ ಶಾಲಾ ಶಿಕ್ಷಕರ ಹಿಂದಿನ ಸೇವೆಯನ್ನು ಪರಿಗಣಿಸುವ ಬಗ್ಗೆ ಸರ್ಕಾರದ ಹಂತದಲ್ಲಿ ಚರ್ಚೆಗಳಾಗಿವೆಯೇ ;

(ಇ) ಹಾಗಿದ್ದಲ್ಲಿ, ಈ ಪ್ರಕ್ರಿಯೆಯು ಪೂರ್ಣಗೊಳ್ಳಲು ಬೇಕಾಗುವ ಕಾಲಮಿತಿ ಎಷ್ಟು ?

## ಸರ್ಕಾರಿ ಪದವೀಧರರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೬೫೨ (೫೬೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಒಟ್ಟು ಸರ್ಕಾರಿ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಮಾಡಿಕೊಂಡಿರುವ ಸಂಖ್ಯೆ ಎಷ್ಟು ;

(ಆ) ಸದರಿ ನೇಮಕಾತಿಯಲ್ಲಿ ವಿವಾಹಿತ ಮಹಿಳೆ ಗಂಡ/ತಂದೆ ಇವರಲ್ಲಿ ಯಾರ ಆದಾಯವನ್ನು ಪರಿಗಣಿಸಲಾಗಿದೆ ;

(ಇ) ಒಂದು ವೇಳೆ ಮಹಿಳಾ ಅಭ್ಯರ್ಥಿ ವಿಚ್ಛೇದಿತಳಾಗಿದ್ದು, ತಂದೆ-ತಾಯಿ ಮನೆಯಲ್ಲಿ ವಾಸವಾಗಿಲ್ಲದೆ ಪ್ರತ್ಯೇಕವಾಗಿದ್ದಲ್ಲಿ ಹಾಗೂ ತನ್ನ ಸ್ವಂತ ದುಡಿಮೆಯ ಆದಾಯ ಪ್ರಮಾಣ ಪತ್ರ ಸಲ್ಲಿಸಿದ್ದಲ್ಲಿ, ಇದನ್ನು ಪತಿ/ತಂದೆ/ಸ್ವಂತ ಆದಾಯ ಇವುಗಳಲ್ಲಿ ಯಾವ ಆದಾಯವನ್ನು ಪರಿಗಣಿಸಲಾಗುವುದು ;

(ಈ) ಕೋಲಾರ ಜಿಲ್ಲೆಯ G.P.S.T.R ಅಭ್ಯರ್ಥಿಯಾದ ವಿಚ್ಛೇದಿತ ಮಹಿಳೆಯೊಬ್ಬರು ಅವರ ದಿವಂಗತ ತಂದೆ ಹೆಸರಿನಲ್ಲಿ ಜಾತಿ ಆದಾಯ ಪ್ರಮಾಣ ಪತ್ರ ನೀಡಿದ್ದರೂ ವಿವಾಹಿತ ಮಹಿಳೆ ತಂದೆ ಆದಾಯ ಎಂದು ಪರಿಗಣಿಸಿ ಕೌನ್ಸಿಲಿಂಗ್ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸುಪ್ರೀಂ ಕೋರ್ಟ್‌ನಲ್ಲಿರುವ ಪ್ರಕರಣಕ್ಕೆ ಇದು ಸಂಬಂಧಿಸಿಲ್ಲದಿದ್ದರೂ ಯಾವ ಕಾರಣಕ್ಕೆ ಕೌನ್ಸಿಲಿಂಗ್‌ಗೆ ಅವಕಾಶ ನೀಡಿರುವುದಿಲ್ಲ ?

## ಬಡ್ತಿ ಮತ್ತು ವೃಂದ, ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೬೫೩ (೬೩೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಹಿರಿಯ ಮುಖ್ಯ ಉಪಾಧ್ಯಾಯರು ಮತ್ತು ಪ್ರೌಢ ಶಾಲಾ ಸಹ ಶಿಕ್ಷಕ ಗ್ರೇಡ್-೨ ವೃಂದದ, ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ಕೈಗೊಂಡ ಕ್ರಮಗಳೇನು ;

(ಆ) ಅನೇಕ ಶಿಕ್ಷಕರು ಬಡ್ತಿಯಿಂದ ವಂಚಿತರಾಗಿ ನಿವೃತ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಗಾಗಿ ಆಗ್ರಹಿಸಿ ಈಗಾಗಲೇ ೨೦೧೮ ಮತ್ತು ೨೦೨೦ ರಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಪದವೀಧರರ ಶಿಕ್ಷಕರ ಸಂಘ (ರಿ) ರಾಜ್ಯ ಘಟಕವು ಎರಡು ಬಾರಿ 'ಫ್ರೀಡಂ ಪಾರ್ಕ್' ನಲ್ಲಿ ಚಳುವಳಿ ಮಾಡಿರುವುದು ಹಾಗೂ ಮತ್ತೆ ಶಿಕ್ಷಕರು ಫ್ರೀಡಂ ಪಾರ್ಕ್ ಚಳುವಳಿಗೆ ಸಿದ್ಧರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಶಿಕ್ಷಕರ ಹೋರಾಟಕ್ಕೆ ಅವಕಾಶ ನೀಡದೆ ಅವರ ನ್ಯಾಯಯುತ ಮುಂಬಡ್ತಿಗಳನ್ನು ನೀಡಲು ಸರ್ಕಾರ ಯಾವ ತುರ್ತು ಕ್ರಮಗಳನ್ನು ಕೈಗೊಂಡಿದೆ ; ಈ ಕುರಿತು ಸರ್ಕಾರದ ನಿಲುವೇನು ?

## ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ಬೋಧಕ/ಬೋಧಕೇತರ ಹುದ್ದೆ ಭರ್ತಿ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೬೫೪ (೬೩೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಅನುದಾನಿತ ಪ್ರೌಢ ಶಾಲೆ/ಪ್ರಾಥಮಿಕ ಶಾಲೆಗಳೆಷ್ಟು ; ಈ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ ಬೋಧಕೇತರ ಸಿಬ್ಬಂದಿಗಳ ಮಾಹಿತಿ ನೀಡುವುದು ;

(ಆ) ಅನುದಾನಿತ ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಎಷ್ಟು ಹುದ್ದೆಗಳು ಖಾಲಿ ಇರುತ್ತವೆ ; (ಶಾಲಾವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಈ) ಅನುದಾನಿತ ಪ್ರೌಢ ಶಾಲೆ ಹಾಗೂ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಇರುವ ಸಮಸ್ಯೆಗಳೇನು ?

**ಕೆ. ಆರ್. ಮಹಾಲಕ್ಷ್ಮಿ**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 046/400 ಪ್ರತಿಗಳು/15–07–2024